ಸಂಪುಟ: 05 ಸಂಚಿಕೆ: 61 ಪುಟಗಳು: 08 ಗುರುವಾರ 15 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಮೇ ೨೦ರಂದು ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶ

• ಉದಯವಾಹಿನಿ, ಬೆಂಗಳೂರು

ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಗೆದ್ದು ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗುತ್ತಿದೆ. ಮೇ20 ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ನಡೆಯಲಿರುವ ರಾಜ್ಯ ಸರ್ಕಾರದ ಎರಡು ವರ್ಷಗಳ ಆಚರಣೆಯಾದ ಸಾಧನಾ ಸಮಾವೇಶಕ್ಕೂ ಮುನ್ನ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಸಂಪುಟ ಸಚಿವರು ರಾಜ್ಯ ಪ್ರವಾಸದಲ್ಲಿ ನಿರತರಾಗಿದ್ದಾರೆ.

ಸಿದ್ದರಾಮಯ್ಯ ಸಂಪುಟದ ಎಲ್ಲಾ ಹಿರಿಯ ಸಚಿವರಿಗೆ ತಾಂಡಾಗಳು, ಹಾಡಿಗಳಲ್ಲಿ ವಾಸಿಸುವ ಹಿಂದುಳಿದ ಜನರನ್ನು ಗುರುತಿಸುವ ಕಾರ್ಯವನ್ನು ನೀಡಲಾಗಿದೆ. ಮೇ 20 ರಂದು, ತಾಂಡಾಗಳು ಮತ್ತು ಹಾಡಿಗಳಲ್ಲಿ ವಾಸಿಸುತ್ತಿರುವವರಿಗೆ ಕಂದಾಯ ಗ್ರಾಮಗಳಾಗಿ ಗುರುತಿಸುವುದರ ಜೊತೆಗೆ ಅವರ ಆಸ್ತಿಗಳಿಗೆ ಹಕ್ಕುಪತ್ರಗಳನ್ನು ನೀಡಲಾಗುತ್ತದೆ.

ಸಚಿವರು ಮತ್ತು ಹಿರಿಯ ಶಾಸಕರಿಗೆ 64 ವಿಧಾನಸಭಾ ಕ್ಷೇತ್ರಗಳಲ್ಲಿ ಫಲಾನುಭವಿಗಳು, ಅಧಿಕಾರಿಗಳು ಮತ್ತು ನಾಯಕರೊಂದಿಗೆ ಸಂವಹನ ನಡೆಸುವ ನಿರ್ದಿಷ್ಟ ಕಾರ್ಯವನ್ನು ನೀಡಲಾಗಿದೆ, ರಾಜ್ಯಾದ್ಯಂತ ಸುಮಾರು ಒಂದು ಲಕ್ಷದಷ್ಟು ಇರುವ ಈ ಅವಕಾಶ ವಂಚಿತ ಜನರಿಗೆ ಸರ್ಕಾರದ ಎರಡು ವರ್ಷಗಳ ವಾರ್ಷಿಕೋತ್ಸವವನ್ನು ಗುರುತಿಸಲು ಆಸ್ತಿ ಹಕ್ಕುಪತ್ರಗಳನ್ನು ನೀಡಲಾಗುವುದು.



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಅಧ್ಯಕ್ಷ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸತೀಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ದಿನೇಶ್ ಗುಂಡೂರಾವ್, ಸಂತೋಷ್ ಲಾಡ್, ಕೃಷ್ಣ ಬೈರೇಗೌಡ, ಎನ್.ಎಸ್. ಬೋಸರಾಜು ಮತ್ತು ಇತರರು ಸೇರಿದಂತೆ ಹಿರಿಯ ಸಚಿವರಿಗೆ ಫಲಾನುಭವಿಗಳನ್ನು ಗುರುತಿಸುವ ಮತ್ತು ಅವರೊಂದಿಗೆ ಸಂವಹನ ನಡೆಸುವ ಕೆಲಸವನ್ನು ನೀಡಿದ್ದಾರೆ. ಪ್ರತಿಯೊಬ್ಬ ಸಚಿವರು ಒಂದರಿಂದ ಎರಡು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರಬೇಕು.

ಅವರು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಬಗ್ಗೆ ಚರ್ಚಿಸಲಿದ್ದಾರೆ. ನಾಳೆಯೊಳಗೆ ಸಭೆಗಳನ್ನು ಪೂರ್ಣಗೊಳಿಸಲು ಸಚಿವರಿಗೆ ಸೂಚನೆ ನೀಡಲಾಗಿದೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಇತರ ಪಕ್ಷದ ಉನ್ನತ ನಾಯಕರು ಹೊಸಪೇಟೆ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರಿಗೆ ಕಾರ್ಯಕ್ರಮದ ಒಟ್ಟಾರೆ ಉಸ್ತುವಾರಿ ವಹಿಸಲಾಗಿದ್ದು, ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ರಾಜ್ಯದ ವಿವಿಧ ಭಾಗಗಳಿಂದ ಫಲಾನುಭವಿಗಳನ್ನು ಹೊಸಪೇಟೆಗೆ ಕರೆತರುವ ಜವಾಬ್ದಾರಿಯನ್ನು ನೀಡಲಾಗಿದೆ.

**ಸರ್ಕಾರದ 2 ವರ್ಷಗಳ ವಾರ್ಷಿಕೋತ್ಸವ**

ಕಾಂಗ್ರೆಸ್ ಮೂಲಗಳು ಇದು ಸರ್ಕಾರದ ಕಾರ್ಯಕ್ರಮ, ಪಕ್ಷದ ಕಾರ್ಯಕ್ರಮವಲ್ಲ ಎಂದು ಹೇಳಿವೆ. ಆದರೆ ಇದು ಪಕ್ಷ ಮತ್ತು ಸರ್ಕಾರ ಎರಡಕ್ಕೂ ಪ್ರತಿಷ್ಠೆಯ ವಿಷಯವಾಗಿದೆ. ಇದಕ್ಕಾಗಿಯೇ ಹಿರಿಯ ಸಚಿವರು ಮತ್ತು ನಾಯಕರನ್ನು ರಾಜ್ಯದ ವಿವಿಧ ಭಾಗಗಳಿಗೆ ಕಳುಹಿಸಲಾಗಿದೆ. ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ನಾಳೆ ಗಡುವು ನೀಡಲಾಗಿದ್ದು, ಅಧಿಕಾರಿಗಳಿಗೆ ಹಕ್ಕುಪತ್ರಗಳನ್ನು ಸಿದ್ಧಪಡಿಸಲು ಸಾಕಷ್ಟು ಸಮಯವನ್ನು ನೀಡಲಾಗುತ್ತಿದೆ.

## ಕೋಮು ವಿರೋಧಿ ಕಾರ್ಯಪಡೆ ಇತರ ಜಿಲ್ಲೆಗಳಿಗೂ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ಕರಾವಳಿ ಜಿಲ್ಲೆಗಳಲ್ಲಿ ಕೋಮುಗಲಭೆ ಮತ್ತು ಅಪರಾಧ ತಡೆಯುವ ಉದ್ದೇಶದಿಂದ ರಚಿಸಲಾಗುತ್ತಿರುವ ಕೋಮು ವಿರೋಧಿ ಕಾರ್ಯಪಡೆಯನ್ನು ರಾಜ್ಯದ ಇತರ ಜಿಲ್ಲೆಗಳಿಗೂ ವಿಸ್ತರಿಸುವ ಸಾಧ್ಯತೆಯಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ಅವರು ಬುಧವಾರ ಹೇಳಿದ್ದಾರೆ. ನೈತಿಕ ಪೊಲೀಸ್‌ಗಿರಿಯ ಘಟನೆಗಳನ್ನು ಸಹ ಕೋಮು ವಿರೋಧಿ ಕಾರ್ಯಪಡೆಗೆ ವಹಿಸಲಾಗುವುದು ಎಂದು ಅವರು ಹೇಳಿದರು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೋಮುಗಲಭೆಗಳನ್ನು ನಿವಾರಿಸಲು ಮತ್ತು ತಗ್ಗಿಸಲು ನಕ್ಸಲ್ ವಿರೋಧಿ ಪಡೆ (ಎಎನ್‌ಎಫ್) ಮಾದರಿಯಲ್ಲಿ ಕೋಮು ವಿರೋಧಿ ಕಾರ್ಯಪಡೆ ರಚಿಸಲಾಗುವುದು ಎಂದು ಪರಮೇಶ್ವರ್ ಈ ತಿಂಗಳ ಆರಂಭದಲ್ಲಿ ಘೋಷಿಸಿದ್ದರು.ಈ ಕುರಿತು ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್, ಈ ಬಗ್ಗೆ ಪ್ರಸ್ತಾವನೆ ಕಳುಹಿಸಲು ಪೊಲೀಸ್ ಮಹಾನಿರ್ದೇಶಕರಿಗೆ ಸೂಚಿಸಲಾಗಿತ್ತು. ಅವರು ಪ್ರಸ್ತಾವನೆ ಕಳುಹಿಸಿರುವುದಾಗಿ ನನಗೆ ತಿಳಿಸಿದ್ದಾರೆ.

## ಜಪಾನ್ ಕಾನ್ಸುಲ್ ಜನರಲ್ ಜೊತೆ ಸಚಿವ ಶರಣ ಪ್ರಕಾಶ್ ಪಾಟೀಲ್ ಚರ್ಚೆ

• ಉದಯವಾಹಿನಿ, ಬೆಂಗಳೂರು

ವಿವಿಧ ಕ್ಷೇತ್ರಗಳಲ್ಲಿ ಕರ್ನಾಟಕದ ಕೌಶಲ್ಯಪೂರ್ಣ ವೃತ್ತಿಪರರ ಅಗತ್ಯವಿದೆ ಎಂದು ಜಪಾನ್ ಮನವಿ ಮಾಡಿದೆ. ಈ ನಿಟಿನಲ್ಲಿ ಕ್ರಮ ಕೈಗೊಳ್ಳಲು ಮುಂದಾಗಿದ್ದೇವೆ. ಜಪಾನ್ ಜೊತೆ ಸಹಕಾರಕ್ಕೆ ಬದ್ಧ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ತಿಳಿಸಿದರು. ಬುಧವಾರ ಬೆಂಗಳೂರಿನ ವಿಕಾಸ ಸೌಧದಲ್ಲಿ ಜಪಾನ್‌ನ ಕಾನ್ಸುಲ್-ಜನರಲ್ ನಕೇನ್ ಸ್ಟಮೊ ಅವರೊಂದಿಗೆ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಸಭೆ ನಡೆಸಿದರು. ಬಳಿಕ ಮಾತನಾಡಿದ ಅವರು, ನಮ್ಮ ರಾಜ್ಯದಲ್ಲಿ ತಾಂತ್ರಿಕ ಮತ್ತು ವಿಶೇಷ ಕೋರ್ಸ್ ವಿದ್ಯಾರ್ಥಿಗಳ ಕೌಶಲ್ಯವನ್ನು ಹೆಚ್ಚಿಸುವ ತುರ್ತು ಅಗತ್ಯವಿದೆ ಎಂದು ಹೇಳಿದರು. ನಮ್ಮ ಸರ್ಕಾರವು ಈಗಾಗಲೇ ಕೇಂದ್ರೀಕೃತ ಕೌಶಲ್ಯವರ್ಧನೆಯ ಮೂಲಕ ಐಟಿಐ ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸಲು ಮುಂದಾಗಿದೆ. ಜಾಗತಿಕ ಉದ್ಯೋಗ ಅವಕಾಶಗಳ ಮೇಲೆ ಒತ್ತು ನೀಡುವ ಮೂಲಕ ಜಪಾನೀಸ್, ಜರ್ಮನ್ ಮತ್ತು ಇಂಗ್ಲಿಷ್ ಸೇರಿದಂತೆ ವಿದೇಶಿ ಭಾಷಾ ತರಬೇತಿಯನ್ನು ಪರಿಚಯಿಸುವ ಯೋಜನೆಯನ್ನು ಘೋಷಿಸಿದೆ. ಇಲಾಖೆಯ ನಿಯೋಗವು ಶೀಘ್ರದಲ್ಲೇ ಜಪಾನ್‌ಗೆ ಭೇಟಿ ನೀಡಿ ಅದರ ಕಾರ್ಯಪಡೆಯ ಮಾದರಿಯನ್ನು ಅಧ್ಯಯನ ಮಾಡಲಿದೆ ಎಂದರು.

## ಭಾರತದಲ್ಲಿ ಕಾಂಗ್ರೆಸ್ ಉಗ್ರರನ್ನು ಸಾಕುತ್ತಿದೆ: ರವಿಕುಮಾರ್ ಕಿಡಿ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ನವರು ಭಾರತದಲ್ಲಿ ಉಗ್ರರನ್ನು ಸಾಕ್ತಿದ್ದಾರೆ ಎಂದು ಪರಿಷತ್ ಸದಸ್ಯ ರವಿಕುಮಾರ್ ಕಿಡಿಕಾರಿದರು. ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಐಎಂಎಫ್‌ನಿಂದ ಪಡೆದ ಸಾಲದ ಹಣದಲ್ಲಿ ಪಾಕಿಸ್ತಾನದ ಸರ್ಕಾರ ಮಸೂದ್ ಅಜರ್‌ಗೆ ಪರಿಹಾರ ಕೊಟ್ಟಿದೆ. ಆ ಮೂಲಕ ಪಾಕಿಸ್ತಾನ ಉಗ್ರರನ್ನ ಸಾಕ್ತಿದೆ. ಇಲ್ಲಿ ಸುಹಾಸ್ ಶೆಟ್ಟಿ ಹತ್ಯೆ ಮಾಡಿದ ಆದಿಲ್‌ಗೆ ಸುಪಾರಿ ಹಣ ಎಲ್ಲಿಂದ ಬಂತು ಇದೇ ಕಾಂಗ್ರೆಸ್ ಸರ್ಕಾರ ಕೊಟ್ಟ ಪರಿಹಾರದಿಂದ ಬಂದಿದೆ. ಅಲ್ಲಿಗೆ ಕಾಂಗ್ರೆಸ್ ನವ್ರೂ ಭಯೋತ್ಪಾದಕರನ್ನು ಸಾಕ್ತಿದ್ದಾರೆ ಅಂತಾ ಆಯ್ತು ಅಲ್ವಾ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ನಾಯಕರು ಮೋದಿ ಮತ್ತು ಕೇಂದ್ರ ಸರ್ಕಾರವನ್ನು ಟೀಕೆ ಮಾಡ್ತಿದ್ದಾರೆ. ಪಹಲ್ಗಾಮ್ ಕೃತ್ಯ ನಡೆಯುವಾಗ ಮೋದಿಯವ್ರು ಎಲ್ಲಿದ್ರು ಅಂತ ಪ್ರಿಯಾಂಕ್ ಖರ್ಗೆ ಕೇಳಿದ್ದಾರೆ. ಆ ಸಂದರ್ಭದಲ್ಲಿ ಮೋದಿ ಎಲ್ಲಿದ್ರು, ಏನು ಮಾಡಿದ್ರು ಅಂತ ದೇಶದ ಎಲ್ಲಾ ಪ್ರಜೆಗಳಿಗೆ ಗೊತ್ತಿದೆ. ಎಲ್ಲರಿಗೂ ಗೊತ್ತಿರುವ ವಿಷಯ ಪ್ರಿಯಾಂಕ್ ಖರ್ಗೆಗೆ ಯಾಕೆಗೊತ್ತಿಲ್ಲ. ಇದೇನು ಪ್ರಿಯಾಂಕ್ ಖರ್ಗೆಯ ಗೋಸಂಬಿತನನಾ ಅಥವಾ ಡಬಲ್ ಸ್ಟಾಂಡರ್ಡಾ ಎಂದು ಪ್ರಶ್ನಿಸಿದರು.

■ ಬಿಬಿಎಂಪಿ ಹೋಯ್ತು ಗ್ರೇಟರ್ ಬೆಂಗಳೂರು ಆಯ್ತು

■ BBMP ಯುಗಾಂತ್ಯ ಇಂದಿನಿಂದ ಗ್ರೇಟರ್ ಬೆಂಗಳೂರು ಆಡಳಿತ ಸರ್ಕಾರದಿಂದ ಅಧಿಸೂಚನೆ

# ಗ್ರೇಟರ್ ಬೆಂಗಳೂರು ಹೊಸ ಅಧ್ಯಾಯ ಶುರು

**3 ಪಾಲಿಕೆ ಹೆಸರು ಬೆಂಗಳೂರು**

**ಬೆಂಗಳೂರು ಕೇಂದ್ರ ನಗರ ಪಾಲಿಕೆ ಸಾಧ್ಯವಿಲ್ಲ**



**ಬೆಂಗಳೂರು ಉತ್ತರ ನಗರ ಪಾಲಿಕ**

**ಬೆಂಗಳೂರು ದಕ್ಷಿಣ ನಗರ ಪಾಲಿಕೆ**

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ' (ಜಿಬಿಎ) ಆಗಿ ಬದಲಾಗಲಿದ್ದು, ಅಷ್ಟು ಮಾತ್ರವಲ್ಲದೆ ಪಾಲಿಕೆ ಅಧಿಕೃತವಾಗಿ ರದ್ದಾಗಿ ಇತಿಹಾಸದ ಪುಟ ಸೇರಲಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ಆಯಸ್ಸು ಮುಗಿದಿದೆ. ಇಂದಿನಿಂದ ಬಿಬಿಎಂಪಿ ಬಿಬಿಎಂಪಿ ಯುಗಾಂತ್ಯ ಆಗುತ್ತಿದ್ದು, ರಾಜಧಾನಿ ಬೆಂಗಳೂರಿನ ಆಡಳಿತದ ಚಿತ್ರಣವೇ ಅದಲು ಬದಲಾಗುತ್ತಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇಂದಿಗೆ ಮುಕ್ತಾಯ ಆಗುತ್ತಿದೆ. ರಾಜ್ಯ ಸರ್ಕಾರ ಜಿಬಿಎಗೆ ಅಧಿಕೃತ ಅಧಿಸೂಚನೆ ಹೊರಡಿಸಿದ್ದು, ಇಂದಿನಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಜಾರಿಯಾಗುತ್ತದೆ. ಬಿಬಿಎಂಪಿ ಬದಲಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬರುತ್ತಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ಬಿಬಿಎಂಪಿ ವ್ಯಾಪ್ತಿಯನ್ನ ವಿಸ್ತರಣೆ ಮಾಡಿಕೊಳ್ಳಲು ಅವಕಾಶ ಇದೆ. ಅಂದ್ರೆ ಹಾಲಿ 709 ಚದರ ಕಿಲೋ ಮೀಟರ್‌ನಿಂದ 1 ಸಾವಿರ ಚದರ ಕಿ.ಮೀ ವ್ಯಾಪ್ತಿಗೆ ಜಿಬಿಎ ವಿಸ್ತರಣೆ ಮಾಡಲಾಗುತ್ತಿದೆ. ಜಿಬಿಎಗೆ ಬಿಬಿಎಂಪಿ ಅಧೀನದಲ್ಲಿದ್ದ ಪ್ರದೇಶಗಳ ಜತೆಗೆ ಬೆಂಗಳೂರಿನ ನಾಲ್ಕು ದಿಕ್ಕುಗಳಲ್ಲಿರುವ ಸಾಕಷ್ಟು ಪ್ರದೇಶಗಳೂ ಸೇರ್ಪಡೆ ಆಗುತ್ತದೆ.ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿ 3 ಅಥವಾ 5 ಪಾಲಿಕೆ ರಚನೆ ಮಾಡಿಕೊಳ್ಳಲು ಅವಕಾಶಗಳಿವೆ. ಬೆಂಗಳೂರಿನ ಪ್ರಾದೇಶಿಕತೆ, ಭೌಗೋಳಿಕತೆಯ ವ್ಯಾಪ್ತಿ, ವಿಸ್ತೀರ್ಣ ಕೂಡ ಏರಿಕೆಯಾಗುತ್ತದೆ. ಸದ್ಯಕ್ಕೆ ಬಿಬಿಎಂಪಿಯನ್ನು 3 ಪಾಲಿಕೆಗಳನ್ನಾಗಿ ವಿಂಗಡಣೆ ಮಾಡಲಾಗುತ್ತಿದ್ದು, ಒಂದೊಂದು ಪಾಲಿಕೆಯು 125 ವಾರ್ಡ್‌ಗಳನ್ನು ಹೊಂದಿರುತ್ತೆ.


| | |
|---|---|
| 1 | ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ (GBA) ಮುಖ್ಯಮಂತ್ರಿಗಳೇ ಅಧ್ಯಕ್ಷರು |
| 2 | ತಲಾ 125 ವಾರ್ಡ್‌ಗಳನ್ನು ಒಳಗೊಂಡ ಮೂರು ನಗರ ಪಾಲಿಕೆ |
| 3 | ಎಲೆಕ್ಟ್ರಾನಿಕ್ ಸಿಟಿ, ಅತ್ತಿಬೆಲೆ, ಜಿಗಣಿ ಕೈಗಾರಿಕೆ, ಬೊಮ್ಮಸಂದ್ರ ಸೇರ್ಪಡೆ |

**ಮೂರು ಪಾಲಿಕೆ ರಚನೆ ಸಾಧ್ಯತೆ:** ಜಿಬಿಎ ಅಸ್ತಿತ್ವಕ್ಕೆ ಬರುತ್ತಿರುವುದರಿಂದ ಭವಿಷ್ಯದಲ್ಲಿ ಬೆಂಗಳೂರನ್ನು ಮೂರು ಪಾಲಿಕೆಗಳನ್ನಾಗಿ ವಿಭಜಿಸಿ ಒಂದೊಂದು ಪಾಲಿಕೆಗೆ ಐಎಎಸ್ ಅಧಿಕಾರಿಗಳನ್ನು ಆಯುಕ್ತರನ್ನಾಗಿ ನೇಮಕ ಮಾಡುವ ಸಾಧ್ಯತೆಗಳಿವೆ. 125 ರಿಂದ 150 ವಾರ್ಡ್‌ಗಳನ್ನು ಒಳಗೊಂಡ ಮೂರು ಪಾಲಿಕೆಗಳನ್ನು ರಚನೆ ಮಾಡಿ ಚುನಾವಣೆ ನಡೆಸುವುದು ಸರ್ಕಾರದ ಉದ್ದೇಶವಾಗಿದೆ. ಈ ಪಾಲಿಕೆಗಳಿಗೆ ಜನಪ್ರತಿನಿಧಿಗಳು ಆಯ್ಕೆಯಾದರೂ ಅವರು ತಮ ವ್ಯಾಪ್ತಿಯಲ್ಲಿ ಕೈಗೊಳ್ಳುವ ಯಾವುದೇ ಯೋಜನೆಗಳಿಗೆ ಜಿಬಿಎ ಅನುಮತಿ ಪಡೆದುಕೊಳ್ಳುವುದು ಅನಿವಾರ್ಯವಾಗಲಿದೆ.

**'ಗ್ರೇಟರ್ ಬೆಂಗಳೂರು ಪ್ರದೇಶ' ಅಸ್ತಿತ್ವಕ್ಕೆ:** ಕಳೆದ ನಾಲ್ಕೂವರೇ ವರ್ಷದಿಂದ ಬಿಬಿಎಂಪಿ ಚುನಾವಣೆ ಆಗದೇ ಜನ ಪ್ರತಿನಿಧಿಗಳು ಇಲ್ಲದೇ ಅಧಿಕಾರಿಗಳ ನೇತೃತ್ವದಲ್ಲಿ ಆಡಳಿತ ನಡೆಯುತ್ತಿದೆ. ಈ ಮಧ್ಯೆ ಬಿಬಿಎಂಪಿ ಬದಲಾಗಿ ಗ್ರೇಟರ್ ಬೆಂಗಳೂರು ತರೋದಾಗಿ ಹೇಳಿ ಚುನಾವಣೆ ಮುಂದೂಡಲಾಗಿತ್ತು. ಸದ್ಯ ಇರುವ ಬಿಬಿಎಂಪಿ ವ್ಯಾಪ್ತಿಯನ್ನೇ ಬಳಸಿಕೊಂಡು ರಾಜ್ಯ ಸರ್ಕಾರ ಗ್ರೇಟರ್ ಬೆಂಗಳೂರು ಪ್ರದೇಶವನ್ನ ನಾಳೆಯಿಂದ ಅನುಷ್ಠಾನಕ್ಕೆ ತರಲು ಮುಂದಾಗಿದೆ. ಈಗಾಗಲೇ ರಾಜ್ಯಪಾಲರು ಅಂಕಿತ ಹಾಕಿರುವ ಕಾರಣಕ್ಕೆ ಬಿಬಿಎಂಪಿ ಬದಲಾಗಿ ಜಿಬಿಎ ಕಾರ್ಯ ಶುರು ಮಾಡಲಿದೆ. ಬೆಂಗಳೂರನ್ನು 3 ಅಥವಾ 5 ಪಾಲಿಕೆಗಳನ್ನಾಗಿ ಹೋಳು ಮಾಡಿ, ತಲಾ 125 ವಾರ್ಡ್ ರಚಿಸಲಿದೆ. ಅದಕ್ಕೆ ತಕ್ಕಂತೆ ಬಿಬಿಎಂಪಿ ವ್ಯಾಪ್ತಿಯ ಪ್ರದೇಶವನ್ನು ಗ್ರೇಟರ್ ಬೆಂಗಳೂರು ಪ್ರದೇಶ' ಎಂದು ಪರಿಗಣಿಸಲು ನಿರ್ಧರಿಸಲಿದೆ.

**ಜಿಬಿಎ ಸಮಿತಿ ರಚನೆ ಹೇಗಿರುತ್ತೆ?**

ಪ್ರಾಧಿಕಾರದಲ್ಲಿ ಮುಖ್ಯಮಂತ್ರಿಯವರು ಅಧ್ಯಕ್ಷರಾದರೆ, ಬೆಂಗಳೂರು ಅಭಿವೃದ್ಧಿ ಸಚಿವರು ಉಪಾಧ್ಯಕ್ಷರಾಗಿರುತ್ತಾರೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಶಾಸಕರು- ಸಚಿವರು, ನಗರಾಭಿವೃದ್ಧಿ ಸಚಿವರು, ಪಾಲಿಕೆಗಳ ಮೇಯರ್‌ಗಳು, ಬಿಡಿಎ ಆಯುಕ್ತ, ಬೆಂಗಳೂರು ಜಲಮಂಡಳಿ ಅಧ್ಯಕ್ಷ, ಬಿಎಂಟಿಸಿ, ವ್ಯವಸ್ಥಾಪಕ ನಿರ್ದೇಶಕ, ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ. ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ, ಕಂದಾಯ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಪೊಲೀಸ್ ಕಮಿಷನರ್, ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ, ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ನಿರ್ದೇಶಕ, ನಗರ ಭೂಸಾರಿಗೆ ನಿರ್ದೇಶನಾಲಯದ ಆಯುಕ್ತ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮಹಾನಗರ ಆಯುಕ್ತ ಸದಸ್ಯರಾಗಿರುತ್ತಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.



### ಚುನಾವಣೆ ಮುಂದೂಡುವ ಹುನ್ನಾರ -ಬಿಜೆಪಿ

ಆದರೆ ಇದೆಲ್ಲವೂ ಚುನಾವಣೆ ಮುಂದೂಡುವ ತಂತ್ರ ಅಂತಾರೆ ಬಿಜೆಪಿ ನಾಯಕರು. ಗ್ರೇಟರ್ ಬೆಂಗಳೂರು ಮಾಡಲು ಎರಡು ಕಾರಣಗಳಿವೆ. ಮೊದಲನೇ ಕಾರಣ ಎಂದರೆ, ಇವತ್ತು ಬಿಬಿಎಂಪಿ ಚುನಾವಣೆ ನಡೆದರೆ ಅದರಲ್ಲಿ ಕಾಂಗ್ರೆಸ್ ಪಕ್ಷ 30 ಸ್ಥಾನಗಳನ್ನು ಕೂಡ ಗೆಲ್ಲೋದಿಲ್ಲ ಎಂಬ ವರದಿ ಅವರ ಕೈ ಸೇರಿದೆ. ಈ ಕಾರಣದಿಂದಲೇ ಅವರು ಚುನಾವಣೆಯನ್ನು ಮುಂದೂಡಿಕೆ ಮಾಡಿ ಆ ಅವಮಾನವನ್ನು ತಪ್ಪಿಸಿಕೊಳ್ಳಲು ಗ್ರೇಟರ್ ಮಾಡಲು ಮುಂದಾಗಿದ್ದಾರೆ ಎಂದು ಬಿಬಿಎಂಪಿ ಆಡಳಿತ ಮಾಜಿ ನಾಯಕ ಎನ್ ಆರ್ ರಮೇಶ್ ಹೇಳಿದ್ದಾರೆ.



**ಇದೇ ವರ್ಷದೊಳಗೆ ಚುನಾವಣೆ...?**


ಗ್ರೇಟರ್ ಬೆಂಗಳೂರು ಕಾಯ್ದೆ ಅಸ್ತಿತ್ವಕ್ಕೆ ಬರುತ್ತಿರುವ ಹಿನ್ನೆಲೆ ಹೊಸ ಪಾಲಿಕೆಗಳನ್ನು ಅಸ್ತಿತ್ವಕ್ಕೆ ತರಲು ಚುನಾವಣೆ ನಡೆಸಬೇಕಾಗುತ್ತದೆ. ಇದಕ್ಕೆ ಅಗತ್ಯವಿರುವ ನಿಯಮ, ಮಾರ್ಗಸೂಚಿ ನಂತರದ ದಿನಗಳಲ್ಲಿ ಹೊರಬಿದ್ದು, ಪ್ರಕ್ರಿಯೆಗೆ ಚಾಲನೆ ಸಿಗಲಿದೆ. ಎಲ್ಲವೂ ನಿಗದಿತ ಸಮಯದೊಳಗೆ ನಡೆದಲ್ಲಿ ಮುಂಬರುವ ಸೆಪ್ಟೆಂಬರ್, ಅಕ್ಟೋಬರ್ ತಿಂಗಳಲ್ಲಿ ಚುನಾವಣೆ ನಡೆಸಲು ಸರ್ಕಾರ ಚಿಂತನೆ ನಡೆಸಿದೆ. ಇಲ್ಲವೇ ಈ ವರ್ಷಾಂತ್ಯದೊಳಗೆ ಎಲೆಕ್ಷನ್ ನಡೆಸಿ ಹಾಲಿ ಬಿಬಿಎಂಪಿ ಅವಧಿ 5 ವರ್ಷ ಚುನಾವಣೆ ಇಲ್ಲದೆ ತೆರೆಮರೆಗೆ ಸಂದ ಅಪವಾದದಿಂದ ಪಾರಾಗಲು ಸರ್ಕಾರ ಆಲೋಚನೆ ನಡೆಸಿದೆ.

# ಗ್ರಾಹಕರ ದೂರು ನಿರ್ವಹಣೆಗೆ ಡಿಜಿಟಲ್ ಪೋರ್ಟಲ್! ಬೆಸ್ಕಾಂ ಹೊಸ ಪ್ರಯೋಗ

• ಉದಯವಾಹಿನಿ, ಬೆಂಗಳೂರು

ಗ್ರಾಹಕ ದೂರು ನಿರ್ವಹಣೆ ಪ್ರಕ್ರಿಯೆಯನ್ನು ಮತ್ತಷ್ಟು ಪಾರದರ್ಶಕವಾಗಿಸಲು ಡಿಜಿಟಲ್ ಪೋರ್ಟಲ್ ಪರಿಚಯಿಸಲು ಬೆಸ್ಕಾಂ ಮುಂದಾಗಿದೆ ಎಂದು ಬೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕ ಡಾ.ಎನ್.ಶಿವಶಂಕರ ತಿಳಿಸಿದ್ದಾರೆ.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಮತ್ತು ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತದ ಸಹಯೋಗದಲ್ಲಿ ಮಂಗಳವಾರ ಗ್ರಾಹಕರ ಕುಂದುಕೊರತೆಗಳ ನಿವಾರಣಾ ವೇದಿಕೆಯ ಅಧ್ಯಕ್ಷರು, ಸದಸ್ಯರು ಮತ್ತು ಅಧಿಕಾರಿಗಳಿಗೆ ಕೆಇಬಿ ಇಂಜಿನಿಯರ್ಸ್ ಅಸೋಸಿಯೇಷನ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಅವರು



ಮಾತನಾಡಿದರು. ಗ್ರಾಹಕರ ದೂರುಗಳ ನಿರ್ವಹಣೆಗೆ ಕಾರ್ಪೊರೇಟ್ ವ್ಯವಹಾರಗಳ ಮುಖ್ಯ ಪ್ರಧಾನ ವ್ಯವಸ್ಥಾಪಕರನ್ನು ನಿಯೋಜಿಸಲಾಗಿದೆ. ಗ್ರಾಹಕರ ಹಕ್ಕಿಗೆ ಒತ್ತು ನೀಡಿ, ದೂರು ನಿರ್ವಹಣೆ ಪ್ರಕ್ರಿಯೆಯನ್ನು ಮತ್ತಷ್ಟು ಪಾರದರ್ಶಕವಾಗಿಸಲು ಡಿಜಿಟಲ್ ಪೋರ್ಟಲ್ ಸಿದ್ದಪಡಿಸಲು ಬೆಸ್ಕಾಂ ಮುಂದಾಗಿದೆ, ಎಂದು ಅವರು ತಿಳಿಸಿದರು. ಕೆಇಆರ್‌ಸಿ ಆದೇಶದ ಸೂಚನೆ ಮೇರೆಗೆ ಗ್ರಾಹಕರ ಕುಂದುಕೊರತೆಗಳ ನಿವಾರಣಾ ವೇದಿಕೆಯನ್ನು ಸ್ಥಾಪಿಸಲಾಗಿದೆ. ಗ್ರಾಹಕರು ದೂರಿಗೆ ತ್ವರಿತವಾಗಿ ಸ್ಪಂದಿಸಿ, ಸೇವೆಯ ಗುಣಮಟ್ಟ ಹೆಚ್ಚಿಸಲು ಅಧಿಕಾರಿಗಳು ಮುಂದಾಗಬೇಕು, ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು ಕರೆ ನೀಡಿದರು.

ಗ್ರಾಹಕರ ಕುಂದುಕೊರತೆಗಳ ನಿವಾರಣಾ ವೇದಿಕೆ (ಸಿಜಿಆರ್ ಎಫ್)ಯ ಸ್ಪಷ್ಟ ನಿರ್ದೇಶನದಂತೆ ಗ್ರಾಹಕರು ದೂರುಗಳು ಬಂದಲ್ಲಿ ನಿಗದಿತ ಕಾಲಮಿತಿಯೊಳಗೆ ಇತ್ಯರ್ಥಗೊಳಿಸಬೇಕಿದೆ. ಜಿಲ್ಲಾ ಹಂತದ ವೇದಿಕೆಯಲ್ಲಿ ಸೂಪರಿಂಟೆಂಡೆಂಟ್ ಇಂಜಿನಿಯರ್, ಇಇ ಹಾಗೂ ಸ್ವತಂತ್ರ ಸದಸ್ಯರು ಇರಲಿದ್ದಾರೆ. ಕಾರ್ಪೊರೇಟ್ ಕಚೇರಿಯ ಸಿಜಿಆರ್‌ಎಫ್ ವೇದಿಕೆಯಲ್ಲಿ ದೂರು ಇತ್ಯರ್ಥವಾಗದಿದ್ದರೆ ಕೆಇಆರ್‌ಸಿ ವಿದ್ಯುಚ್ಛಕ್ತಿ ಲೋಕಪಾಲರ ಬಳಿ ದೂರು ಸಲ್ಲಿಸಿ ನಿಗದಿತ ಕಾಲಮಿತಿಯೊಳಗೆ ಪರಿಹಾರ ಪಡೆಯಬಹುದಾಗಿದೆ, ಎಂದು ತಿಳಿಸಿದರು. ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಕೆಇಆರ್‌ಸಿಯ ಅಧ್ಯಕ್ಷರೂ ಆದ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್, ದೂರಿನ ಇತ್ಯರ್ಥದ ಸಂದರ್ಭದಲ್ಲಿ ಗ್ರಾಹಕರಿಗೆ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ನ್ಯಾಯ ಒದಗಿಸಬೇಕು. ಮುಖ್ಯವಾಗಿ ಈ ಪ್ರಕ್ರಿಯೆ ತ್ವರಿತಗತಿಯಲ್ಲಿ ಆಗಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯಪ್ರವೃತ್ತರಾದರೆ ಕಾರ್ಯಾಗಾರ ಯಶಸ್ವಿಯಾದಂತೆ,ಎಂದರು.

# ಬಿ-ಖಾತಾ ವಿತರಣೆ ಅವಧಿ 3 ತಿಂಗಳವರೆಗೆ ವಿಸ್ತರಣೆ

**ರಾಜ್ಯದ ಮಹಾನಗರ ಪಾಲಿಕೆಗಳು, ನಗರ ಪ್ರದೇಶಗಳಲ್ಲಿ 30 ಲಕ್ಷಕ್ಕೂ ಹೆಚ್ಚು ಅನಧಿಕೃತ ಕಟ್ಟಡಗಳು, ನಿವೇಶನಗಳಿವೆ ಎಂದು ಅಂದಾಜು**

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅನಧಿಕೃತ ಕಟ್ಟಡ ಮತ್ತು ನಿವೇಶನಗಳಿಗೆ ಬಿ-ಖಾತಾ ನೀಡುವ ಅವಧಿಯನ್ನು ಮುಂದಿನ ಮೂರು ತಿಂಗಳವರೆಗೆ ವಿಸ್ತರಿಸಲಾಗಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಬುಧವಾರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಬುಧವಾರ ಈ ಸಂಬಂಧ ಪ್ರತಿಕ್ರಿಯೆ ನೀಡಿರುವ ಅವರು, ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಂದರೆ, ಯಾವುದೇ ಪರವಾನಗಿ, ಭೂಪರಿವರ್ತನೆ ಮಾಡಿಸಿಕೊಳ್ಳದೇ, ನಕ್ಷೆ ಮಂಜೂರಾತಿ ಮಾಡಿಕೊಳ್ಳದೇ ಕಂದಾಯ ನಿವೇಶನಗಳಲ್ಲಿ ಕಟ್ಟಡಗಳನ್ನು ಕಟ್ಟಿಕೊಂಡಿದ್ದರೆ ಅಂತಹವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಿ-ಖಾತಾ ನೀಡಿ ಸಕ್ರಮಗೊಳಿಸುವ ಮಹತ್ವದ ನಿರ್ಧಾರ ಕೈಗೊಂಡಿತ್ತು ಎಂದಿದ್ದಾರೆ.

ಇದರ ಅನ್ವಯ ನಾಗರಿಕರಿಗೆ ಒಂದು ಬಾರಿ ಬಿ ಖಾತೆ ವಿತರಣೆಗೆ ಅವಕಾಶವನ್ನು ನೀಡಲಾಗಿತ್ತು. ಮೇ ತಿಂಗಳ 10ರ ವೇಳೆಗೆ ಬಿ-ಖಾತಾ ಪಡೆದುಕೊಳ್ಳಲು ಸಮಯ ನೀಡಲಾಗಿತ್ತು. ನಾಗರಿಕರು ನಿಗದಿತ ಶುಲ್ಕಗಳನ್ನು ಪಾವತಿ ಮಾಡಿ ತಮ್ಮ ಕಟ್ಟಡಗಳಿಗೆ ಬಿ-ಖಾತಾ ಪಡೆದುಕೊಳ್ಳಬಹುದಾಗಿದೆ.



ಇದೀಗ ಈ ನಾಗರಿಕ ಸ್ನೇಹಿ ಸೌಲಭ್ಯವನ್ನು ಇನ್ನೂ ಹೆಚ್ಚಿನ ಜನರಿಗೆ ತಲುಪಿಸಬೇಕೆಂಬ ಉದ್ದೇಶದಿಂದ ಸರ್ಕಾರವು ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಿ-ಖಾತಾ ವಿತರಣೆ ಪ್ರಕ್ರಿಯೆಯನ್ನು ಇನ್ನೂ 3 ತಿಂಗಳ ಕಾಲ ವಿಸ್ತರಣೆ ಮಾಡಲು ನಿರ್ಧರಿಸಿದೆ ಎಂದು ಸಚಿವ ಸುರೇಶ್ ಮಾಹಿತಿ ನೀಡಿದ್ದಾರೆ.

ರಾಜ್ಯದ ಮಹಾನಗರ ಪಾಲಿಕೆಗಳು ಮತ್ತು ನಗರ ಪ್ರದೇಶಗಳಲ್ಲಿ 30 ಲಕ್ಷಕ್ಕೂ ಅಧಿಕ ಇಂತಹ ಅನಧಿಕೃತ ಕಟ್ಟಡಗಳು, ಮನೆಗಳು, ನಿವೇಶನಗಳಿವೆ ಎಂದು ಅಂದಾಜಿಸಲಾಗಿದೆ. ಸರ್ಕಾರ ಒಂದು ಬಾರಿಯ ಅವಕಾಶ ನೀಡಿದ ನಂತರ ನಾಗರಿಕರು ಉತ್ತಮ ರೀತಿಯಲ್ಲಿ ಪ್ರತಿಕ್ರಿಯೆ ವ್ಯಕ್ತಪಡಿಸಿ ತಮ್ಮ ಆಸ್ತಿಗಳಿಗೆ ಬಿ-ಖಾತಾ ಪಡೆದುಕೊಳ್ಳುತ್ತಿದ್ದಾರೆ ಎಂದು ಅವರು ವಿವರಿಸಿದ್ದಾರೆ.

ಸರ್ಕಾರ ನೀಡಿದ ಅವಕಾಶವನ್ನು ಬಳಸಿಕೊಂಡಿರುವ ಜನರು ಸುಮಾರು 10 ಲಕ್ಷ ಆಸ್ತಿಗಳಿಗೆ ಬಿ-ಖಾತಾ ಕೋರಿ ಅರ್ಜಿ ಸಲ್ಲಿಸಿದ್ದಾರೆ. ಈ ಪೈಕಿ 2 ಲಕ್ಷ ಆಸ್ತಿಗಳಿಗೆ ಬಿ-ಖಾತೆಗಳನ್ನು ವಿತರಿಸಲಾಗಿದೆ. ಉಳಿದ ಅರ್ಜಿಗಳ ಪರಿಶೀಲನೆ ನಡೆಯುತ್ತಿದ್ದು, ಹಂತಹಂತವಾಗಿ ಬಿ-ಖಾತಾ ವಿತರಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

**2 ಲಕ್ಷ ಬಿ-ಖಾತಾ ವಿತರಣೆ**

### ಜಿಪಿಎ, ಕರಾರುದಾರರಿಗೂ ಸೌಲಭ್ಯ

ಇನ್ನು ನಿವೇಶನ ಅಥವಾ ಕಟ್ಟಡಗಳನ್ನು ಖರೀದಿಸಲು ಮುಂದಾಗಿ ಜಿಪಿಎ ಅಥವಾ ಅಗ್ರಿಮೆಂಟ್ ಮಾಡಿಕೊಂಡಿರುವ ನಾಗರಿಕರಿಗೂ ಬಿ-ಖಾತಾ ವಿತರಣೆಗೆ ಗಂಭೀರ ಚಿಂತನೆ ನಡೆಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಈ ಸಂಬಂಧ ಸದ್ಯದಲ್ಲೇ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಇದರಿಂದ ಜಿಪಿಎ ಅಥವಾ ಕರಾರುದಾರರಿಗೂ ಅನುಕೂಲವಾಗಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,606/Gram24ct ₹8,805/Gram22ct | ಬೆಳ್ಳಿ: ₹97.90/Gram

# 18 ರಂದು ಲಕ್ಷ್ಮಿ ನರಸಿಂಹ ಹೋಮ






• **ಉದಯವಾಹಿನಿ, ಕೆಂಗೇರಿ ಉಪನಗರ**

ಭಾರತೀಯ ಸೈನಿಕರಿಗೆ ಬೆಂಬಲ ಹಾಗೂ ಬಲ ನೀಡಲು ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಹೋಮ( ಶ್ರೀ ಮನ್ಯುಸೂಕ್ತ ಹೋಮ) ದಿನಾಂಕ : 18.05.2025 ಭಾನುವಾರ ಸ್ಥಳ: ಶ್ರೀ ಗಣಪತಿ ದೇವಸ್ಥಾನದ ಆವರಣ. ಗುರುರಾಜ ಸಭಾಭವನ ಪಕ್ಕ. ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪಕ್ಕ ಕೆಂಗೇರಿ ಉಪನಗರ ಬೆಂಗಳೂರು. ಈಗಾಗಲೇ ಪಾಕಿಸ್ತಾನದ ವಿರುದ್ಧ ಹೋರಾಡಿದ / ಹೋರಾಡ ಬೇಕಾಗ ಬಹುದಾದ ನಮ್ಮ ಭಾರತೀಯ ಸೈನಿಕರಿಗೆ ಬೆಂಬಲ ಸೂಚಿಸಲು ಹಾಗೂ ಅವರಿಗೆ ಬಲ ನೀಡಲು ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ( ಶ್ರೀ ಮನ್ಯುಸೂಕ್ತ ಹೋಮ) ಹೋಮ ಏರ್ಪಡಿಸಲಾಗಿದೆ. ದಿನಾಂಕ 18. 5 .2025 ರ ಭಾನುವಾರ ಬೆಳಗ್ಗೆ 9ಕ್ಕೆ ಹೋಮ: 11:30 ಕ್ಕೆ ಪೂರ್ಣಾಹುತಿ. ಶ್ರೀರಾಘವೇಂದ್ರ ಸ್ವಾಮಿಗಳವರ ಮಠದ ಪಕ್ಕದಲ್ಲಿರುವ ಶ್ರೀ ಗಣಪತಿ ದೇವಸ್ಥಾನದ ಆವರಣದಲ್ಲಿ ನಡೆಯಲಿದೆ. ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ( ಶ್ರೀ ಮನ್ಯುಸೂಕ್ತ ಹೋಮ) ಹೋಮದಲ್ಲಿ ಎಲ್ಲಾ ದೇಶಭಕ್ತರು ಪಾಲ್ಗೊಂಡು ವೈಯಕ್ತಿಕವಾಗಿ ಸಂಕಲ್ಪ ಮಾಡಬಹುದು ಹೋಮದ ಸೇವಾ ಕಾಣಿಕೆ ಇರುವುದಿಲ್ಲ. ಹೋಮದ ನಂತರ ಹೋಮ ಪ್ರಸಾದ ವಿತರಿಸಲಾಗುವುದು. ಎಲ್ಲಾ ದೇಶಭಕ್ತರು ಜಾತಿ ಮತ ಪಕ್ಷ ಭೇದ ಮರೆತು ಪಾಲ್ಗೊಳ್ಳಲು ಮನವಿ. ಹೆಚ್.ಎಸ್ .ಸುಧೀಂದ್ರ ಕುಮಾರ್ ಅಧ್ಯಕ್ಷರು: ಶ್ರೀ ರಾಘವೇಂದ್ರ ಸ್ವಾಮಿ ಸೇವಾ ಸಮಿತಿ 9845265199

# ಸರ್ಕಾರದಿಂದಲೇ ಇನ್ನು ಮುಂದೆ 108 ಆಂಬ್ಯುಲೆನ್ಸ್ ಸೇವೆ

## ಸಂಪೂರ್ಣ ಸೇವೆ, ನಿರ್ವಹಣೆ ಸರ್ಕಾರವೇ ನಡೆಸಲು ಮುಂದಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿಕೆ

• **ಉದಯವಾಹಿನಿ, ಬೆಂಗಳೂರು**

ಯಾವುದೇ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸದೆ ಸರ್ಕಾರವೇ ಇನ್ನು ಮುಂದೆ 108 ಆಯಂಬುಲೆನ್ಸ್ ಸೇವೆ ಒದಗಿಸುತ್ತದೆ.

ಈಗಾಗಲೇ ಚಾಮರಾಜನಗರದಲ್ಲಿ ಪ್ರಾಯೋಗಿಕವಾಗಿ ನಡೆಸಲಾಗುತ್ತಿದೆ. ಸಂಪೂರ್ಣ ಸೇವೆ ಹಾಗೂ ನಿರ್ವಹಣೆ ಸರ್ಕಾರವೇ ನಡೆಸಲು ಮುಂದಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 108 ಆಯಂಬುಲೆನ್ಸ್ ಸಿಬ್ಬಂದಿ ಮೂರು ಶಿಫ್ಟ್ ಗಳಲ್ಲಿ ಕೆಲಸ ಮಾಡುವ ವಿಚಾರ ಏಜೆನ್ಸಿ ಮೂಲಕ ನಡೆಯುತ್ತದೆ. ಹೀಗಾಗಿ ಸಿಬ್ಬಂದಿಗಳು ಏಜೆನ್ಸಿ ಜೊತೆ ಮಾತನಾಡಬೇಕು ಎಂದರು.

**ಸಚಿವ ದಿನೇಶ್ ಗುಂಡೂರಾವ್ ಹೇಳಿಕೆ**


ಉದಯವಾಹಿನಿ ಚಿತ್ರ

**ನಾನು ಯಾರಿಗೂ ಶಿಫಾರಸು ಮಾಡಿಲ್ಲ:** ಕುಕ್ಕೆ ಸುಬ್ರಹ್ಮಣ್ಯ ವ್ಯವಸ್ಥಾಪನಾ ಆಡಳಿತ ಮಂಡಳಿ ಅಧ್ಯಕ್ಷರಾಗಿ ಹರೀಶ್ ಆಯ್ಕೆ ವಿಚಾರವಾಗಿ, ನಾನು ಯಾರಿಗೂ ಶಿಫಾರಸು ಮಾಡಿಲ್ಲ.

ಚುನಾವಣೆ ಮೂಲಕವೇ ಹರೀಶ್ ಇಂಜಾಡಿ ಆಯ್ಕೆ ಮಾಡಿರುವುದು. ಇದು ಒಳ್ಳೆ ಬೆಳವಣಿಗೆ ಅಲ್ಲ, ಇದರ ಬಗ್ಗೆ ಮುಜರಾಯಿ ಇಲಾಖೆ ಸಚಿವರ ಜತೆ ಮಾತನಾಡುತ್ತೇನೆ. ರೂಲ್ಸ್ ಪ್ರಕಾರ ಹರೀಶ್‌ನನ್ನು ಬದಲಾವಣೆ ಮಾಡಲು ಆಗುವುದಿಲ್ಲ. 3 ವರ್ಷ ಅಧಿಕಾರಾವಧಿ ಇರುತ್ತದೆ ಈ ಬಗ್ಗೆ ಮಾಹಿತಿ ಪಡೆಯುತ್ತೇನೆ ಎಂದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವ ವಿಚಾರವಾಗಿ ಮಾತನಾಡಿದ ಅವರು, ಸರ್ಕಾರ ಬಂದ ಮೇಲೆ ಹೊಸ ಕಾಯಕಲ್ಪ ಕೊಟ್ಟಿದೆ. ಅಧಿವೇಶನದಲ್ಲಿ ಕೂಡ ಚರ್ಚೆ ಆಗಿ ಶಾಸಕರ ಸಮಿತಿ ವರದಿ ಕೊಟ್ಟು, ಸಾರ್ವಜನಿಕರ ಜೊತೆ ಚರ್ಚೆ ಆಗಿ ರಾಜ್ಯಲರು ಅನುಮೋದನೆ ಕೊಟ್ಟು ಮಾನ್ಯತೆ ಸಿಕ್ಕಿದೆ. ಬೆಂಗಳೂರು ವಿಶ್ವ ದರ್ಜೆ ನಗರ. ಆಡಳಿತ ವ್ಯವಸ್ಥೆ ಸುಧಾರಣೆ ಮಾಡುವ ಅವಶ್ಯಕತೆ ಇದೆ ಎಂದರು.

### ನಾವು ಯಾವುದೇ ವೇತನ ತಡೆ ಹಿಡಿದಿಲ್ಲ

**30 ಸಾವಿರ ಸಿಬ್ಬಂದಿ ವೇತನವಾಗದ ವಿಚಾರವಾಗಿ ಪ್ರತಿಕ್ರಿಯಿಸಿದ್ದು, 2023-24 ರಲ್ಲಿ ಓಪನಿಂಗ್ ಬ್ಯಾಲೆನ್ಸ್ ಹೆಚ್ಚಿತ್ತು. ಆದರೆ ಕಳೆದ ಸರ್ಕಾರದಿಂದ ಓಪನಿಂಗ್ ಬ್ಯಾಲೆನ್ಸ್ ಕಡಿಮೆಯಾಗಿದೆ. ಹೀಗಾಗಿ ನಾವು ರಾಜ್ಯ ಸರ್ಕಾರದಿಂದ ಕೊಡಲು ಆಗುತ್ತಿಲ್ಲ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿಲ್ಲ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡದ ಹಿನ್ನೆಲೆ ತಡವಾಗಿದೆ. ಇನ್ನೆರಡು ಮೂರು ದಿನಗಳಲ್ಲಿ ವೇತನ ಆಗಬಹುದು. ನಾವು ಯಾವುದೇ ವೇತನ ತಡೆ ಹಿಡಿದಿಲ್ಲ ಎಂದರು. ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ ಕರ್ತವ್ಯ ನಿರ್ವಹಿಸುತ್ತಿರುವ ಎಂಬಿಬಿಎಸ್ ವೈದ್ಯರು, ತಜ್ಞ ವೈದ್ಯರು ಹಾಗೂ ಎಸ್‌ಎನ್‌ಸಿಯು ಮತ್ತು ಐಸಿಯುದಲ್ಲಿ ಕಾರ್ಯನಿರ್ವಹಿಸುವ ಸ್ಟಾಫ್ ನರ್ಸ್‌ಗಳ ವೇತನ ಪರಿಷ್ಕರಿಸಿ ಗಣನೀಯವಾಗಿ ಹೆಚ್ಚಳ ಮಾಡಲಾಗಿದೆ ಎಂದು ತಿಳಿಸಿದ್ದಾರೆ.**

# ಮನೆ, ಚಿನ್ನಾಭರಣ ಅಂಗಡಿಯಲ್ಲಿ ಕಳವು: ಇಬ್ಬರ ಬಂಧಿಸಿದ ಪೊಲೀಸರು

• **ಉದಯವಾಹಿನಿ, ಬೆಂಗಳೂರು**

ಮನೆಯಲ್ಲಿದ್ದ ಚಿನ್ನಾಭರಣ ಹಾಗೂ ನಗದು ಕಳ್ಳತನ ಮಾಡುತ್ತಿದ್ದ ಇಬ್ಬರನ್ನು ಎಚ್‌ಎಸ್‌ಆರ್ ಲೇಔಟ್ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

ಕೆಲಸ ಮಾಡುತ್ತಿದ್ದ ಮನೆಯಲ್ಲಿ ಕಳವು ಮಾಡಿದ್ದ ಆರೋಪದ ಅಡಿ ಚಿತ್ರದುರ್ಗದ ನಿವಾಸಿ ಶಾಲಿನಿ(30) ಎಂಬಾಕೆಯನ್ನು ಬಂಧಿಸಿ ರೂ.10 ಲಕ್ಷ ಮೌಲ್ಯದ 113 ಗ್ರಾಂ ಚಿನ್ನಾಭರಣ ವಶಕ್ಕೆ ಪಡೆದುಕೊಂಡಿದ್ದಾರೆ. ಎಚ್‌ಎಸ್‌ಆರ್ ಲೇಔಟ್‌ನ 1ನೇ ಸೆಕ್ಟರ್ ನಿವಾಸಿ, ಐ.ಟಿ ಉದ್ಯೋಗಿ ಅಕ್ಷಯ್ ಕೃಷ್ಣ ಅವರ ಮನೆಯಲ್ಲಿ ಕಳ್ಳತನ ನಡೆದಿತ್ತು. ಕೆಲವು ವರ್ಷಗಳ ಹಿಂದೆ ನಗರಕ್ಕೆ ಬಂದಿದ್ದ ಶಾಲಿನಿ, ಪತಿ ಮತ್ತು ಮಕ್ಕಳ ಜತೆ ಸೋಮಸಂದ್ರದ ಬಾಡಿಗೆ ಮನೆಯಲ್ಲಿ ವಾಸವಾಗಿದ್ದಳು. ಪತಿ ಆಟೊ ಚಾಲಕನಾಗಿದ್ದು, ಶಾಲಿನಿ ಕೇರ್ ಟೇಕರ್ ಆಗಿ ಕೆಲಸ ಮಾಡುತ್ತಿದ್ದಳು. ದೂರು ದಾರ ಮನೆಯಲ್ಲಿದ್ದ ವೃದ್ಧೆಯೊಬ್ಬರನ್ನು ಶಾಲಿನಿ ಮೂರು ವರ್ಷಗಳಿಂದ ನೋಡಿಕೊಳ್ಳುತ್ತಿದ್ದಳು. ಈ ಮಧ್ಯೆಯೇ ಮನೆಯಲ್ಲಿಟ್ಟಿದ್ದ ಚಿನ್ನವನ್ನು ಕಳ್ಳತನ ಮಾಡಿ ಚಿತ್ರದುರ್ಗಕ್ಕೆ ಪರಾರಿ ಆಗಿದ್ದಳು ಎಂದು ಪೊಲೀಸರು ಹೇಳಿದರು.

# ಸಿಎಂಆರ್ ನ್ಯಾಷನಲ್ ಸ್ಕೂಲ್ ಶೇ 100% ಫಲಿತಾಂಶ

• **ಉದಯವಾಹಿನಿ, ಬೆಂಗಳೂರು**

ನಗರದ ಏಕ್ಯಾ ಶಾಲೆಗಳು ಮತ್ತು ಸಿಎಂಆರ್ ನ್ಯಾಷನಲ್ ಸ್ಕೂಲ್ ವಿದ್ಯಾರ್ಥಿಗಳು 2024-25ನೇ ಸಾಲಿನ ಸಿಬಿಎಸ್‌ಇ 10ನೇ ತರಗತಿ ಮತ್ತು 12ನೇ ತರಗತಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗುವ ಮೂಲಕ ಉತ್ತಮ ಸಾಧನೆ ಮಾಡಿದ್ದು ಶೇ 100% ಫಲಿತಾಂಶ ಶಾಲೆಗಳಿಗೆ ಕೀರ್ತಿ ತಂದಿದ್ದಾರೆ.


ಐಟಿಪಿಎಲ್ ಕ್ಯಾಂಪಸ್‌ನಲ್ಲಿರುವ ಏಕ್ಯಾ ಶಾಲೆಯ 10ನೇ ತರಗತಿಯಲ್ಲಿ 23 ವಿದ್ಯಾರ್ಥಿಗಳು ಶೇ 90% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದರೆ, 12 ನೇ ತರಗತಿಯಲ್ಲಿ 18 ವಿದ್ಯಾರ್ಥಿಗಳು ಶೇ.90% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ.

ಕಲಾ ವಿಭಾಗದಲ್ಲಿ ತನಿಶ್ಯ ಸತೀಶ್ ಕುಮಾರ್ (ಶೇ.96.6%,) ವಿಜ್ಞಾನ ವಿಭಾಗದಲ್ಲಿ ಗೋಕುಲ್ ಆದಶ್9 ಜೆ.ಆರ್ (ಶೇ.95.4% )ಅಂಕಗಳನ್ನು ಪಡೆದಿದ್ದಾರೆ. ಏಕ್ಯಾ ಬಿಟಿಎಂ ಕ್ಯಾಂಪಸ್‌ನಲ್ಲಿ 10 ನೇ ತರಗತಿಯಲ್ಲಿ ವಿದ್ಯಾರ್ಥಿ ಆಯಾನ್ ರಾಜೀವ್ ಗೋಪಾಲಕೃಷ್ಣ (ಶೇ.94.4%), 12ನೇ ತರಗತಿಯಲ್ಲಿ ಅಂಜಲಿ ವಿಶ್ವನಾಥ್ ವಿಜ್ಞಾನ ವಿಭಾಗದಲ್ಲಿ (ಶೇ.97%) ಅಂಕಗಳನ್ನು ಪಡೆದಿದ್ದಾರೆ.


**ಆಡಳಿತ ಮಂಡಳಿಯ ಸಕಾರಾತ್ಮಕ ಪ್ರೋತ್ಸಾಹ**

ವಿದ್ಯಾರ್ಥಿಗಳ ನಿರಂತರ ಪರಿಶ್ರಮ, ಉಪನ್ಯಾಸಕರ ಗುಣಾತ್ಮಕ ಬೋಧನೆ, ಆಡಳಿತ ಮಂಡಳಿಯ ಸಕಾರಾತ್ಮಕ ಪ್ರೋತ್ಸಾಹದಿಂದ ಸಿಎಂಆರ್ ನ್ಯಾಷನಲ್ ಪಿಯು ಸಮೂಹ ಕಾಲೇಜುಗಳ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ನೀಡಲು ಸಾಧ್ಯವಾಯಿತು ಎಂದು ಏಕ್ಯಾ ಸಮೂಹ ಶಾಲೆಗಳು, ಸಿಎಂಆರ್ ನ್ಯಾಷನಲ್ ಸ್ಕೂಲ್‌ಗಳ ಪ್ರಾಂಶುಪಾಲರು ಹರ್ಷ ವ್ಯಕ್ತಪಡಿಸಿದ್ದಾರೆ. ಜೊತೆಗೆ ಉತ್ತಮ ಅಂಕಗಳೊಂದಿಗೆ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.


Sharika Sreejith 97.8%


Sreelakshmi Naveen 98.6%


Punam Ajit Shenvi 97.4%


Anjali Vishwanath 97%


Sri Harini Ravichandar 97.2%


Ritwik Pattanayak 97%

**ಸಿಎಂಆರ್ ನ್ಯಾಷನಲ್ ಸ್ಕೂಲ್ 10ನೇ ತರಗತಿಯಲ್ಲಿ 24 ವಿದ್ಯಾರ್ಥಿಗಳು ಶೇ.90% ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ವಿದ್ಯಾರ್ಥಿ ಪುನಮ್ ಅಜಿತ್ ಶೆನ್ವಿ (ಶೇ.97.4%) ರಷ್ಟು ಅಂಕಗಳನ್ನು ಪಡೆದರೆ, 12ನೇ ತರಗತಿಯಲ್ಲಿ 161 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100% ರಷ್ಟು ಫಲಿತಾಂಶ ತರುವ ಮೂಲಕ ಸಾಧನೆ ಮಾಡಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಹರಿಣಿ ರವಿಚಂದ್ರನ್ (ಶೇ.97.2%), ಕಲಾ ವಿಭಾಗದಲ್ಲಿ ಲಕ್ಷ್ಮೀ ನವೀನ್ (ಶೇ.98.6%) ಅಂಕಗಳನ್ನು ಪಡೆದು ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ.**

# ಜಾಗೃತಿ ಅಭಿಯಾನ ಬಳಿಕ ನಗರದಲ್ಲಿ ಸೈಬರ್ ಅಪರಾಧ ಪ್ರಕರಣಗಳು ಇಳಿಕೆ..!

• **ಉದಯವಾಹಿನಿ, ಬೆಂಗಳೂರು**

ಹಿಂದಿನ ಎರಡು ವರ್ಷಗಳ ಇದೇ ಅವಧಿಗೆ ಹೋಲಿಸಿದರೆ ನಗರದಲ್ಲಿ ಸೈಬರ್ ಅಪರಾಧ ಪ್ರಕರಣಗಳಲ್ಲಿ ಶೇಕಡಾ 30ರಷ್ಟು ಇಳಿಕೆ ಕಂಡುಬಂದಿದೆ ಎಂದು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಮಂಗಳವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಸೈಬರ್ ಅಪರಾಧ ಪ್ರಕರಣಗಳು ಶೇ.30ರಷ್ಟು ಇಳಿಕೆಯಾಗಿದ್ದು, ಇದರ ಜೊತೆಗೆ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಪ್ರಕರಣಗಳಲ್ಲಿ ಶೇಕಡಾ 12 ರಷ್ಟು ಮತ್ತು ಆಸ್ತಿ ಸಂಬಂಧಿತ



ಅಪರಾಧಗಳಲ್ಲಿ ಗಮನಾರ್ಹ ಇಳಿಕೆ ಕಂಡುಬಂದಿದೆ ಎಂದು ಹೇಳಿದರು. 2023 ರ ಮೊದಲ ಮೂರು ತಿಂಗಳಲ್ಲಿ ನಗರದಲ್ಲಿ 3,588 ಸೈಬರ್ ಅಪರಾಧ ಪ್ರಕರಣಗಳು, 2024 ರಲ್ಲಿ 4,679 ಪ್ರಕರಣಗಳು ದಾಖಲಾಗಿದ್ದವ. 2025 ರಲ್ಲಿ 2,838 ಪ್ರಕರಣಗಳು ದಾಖಲಾಗಿವೆ. ಇದರ ಜೊತೆಗೆ ಗಂಭೀರ ಅಪರಾಧಗಳು ಮತ್ತು ಆಸ್ತಿ ಅಪರಾಧಗಳು ಕೂಡ ಕಡಿಮೆಯಾಗಿವೆ, ದರೋಡೆ ಪ್ರಕರಣಗಳಲ್ಲಿ ಶೇಕಡಾ 73 ರಷ್ಟು, ಡಕಾಯಿತಿಗಳಲ್ಲಿ ಶೇಕಡಾ 71 ರಷ್ಟು ಮತ್ತು ಸರಗಳ್ಳತನ ಪ್ರಕರಣಗಳಲ್ಲಿ ಶೇಕಡಾ 57 ರಷ್ಟು ಇಳಿಕೆಯಾಗಿದೆ. ಜಾಗೃತಿ ಅಭಿಯಾನಗಳಿಂದಾಗಿ ಅಪರಾಧ ಪ್ರಕರಣಗಳು ಕಡಿಮೆಯಾಗಿವೆ. OTP ಮತ್ತು KYC ವಂಚನೆ ಪ್ರಕರಣಗಳೂ ಕೂಡ ಕಡಿಮೆಯಾಗಿವೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮತ್ತು ಆನ್‌ಲೈನ್ ಪೊಲೀಸ್ ಅಭಿಯಾನಗಳ ಬೃಹತ್ ಜಾಗೃತಿ ಅಭಿಯಾನಗಳ ಕಳೆದ ವರ್ಷ ಭೀತಿಯನ್ನುಂಟುಮಾಡಿದ್ದ ಡಿಜಿಟಲ್ ಅರೆಸ್ಟ್ ಮತ್ತು ಫೆಡ್‌ಎಕ್ಸ್ ವಂಚನೆಗಳೂ ಕೂಡ ಇಳಿಕೆ ಕಂಡಿವೆ. ಅಪರಾಧ ದರಗಳಲ್ಲಿನ ಒಟ್ಟಾರೆ ಕುಸಿತಕ್ಕೆ ಸುಧಾರಿತ ಪೊಲೀಸ್ ತಂತ್ರಗಳು, ಪ್ರಮುಖ ನಗರ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳು ಮತ್ತು ಸಾರ್ವಜನಿಕ ಸುರಕ್ಷತಾ ಜಾಗೃತಿ ಉಪಕ್ರಮಗಳು ಕಾರಣವಾಗಿವೆ ಎಂದು ತಿಳಿಸಿದ್ದಾರೆ

# ಕೆಜಿ ಲೇಔಟ್‌ನಲ್ಲಿ ಶೀಘ್ರವೇ ಮೂಲಭೂತ ಸೌಕರ್ಯ ಅಭಿವೃದ್ಧಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಹೊಸ ನಿವೇಶನ ಹಂಚಿಕೆದಾರರದೊಂದಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಸಭೆ ನಡೆಸಿತು. ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿನ ಮೂಲಭೂತ ಸೌಕರ್ಯ ಕುರಿತಂತೆ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ನಿರ್ದೇಶನದ ಮೇರೆಗೆ ಕೆಂಪೇಗೌಡ ನಿವೇಶನ ಹಂಚಿಕೆದಾರರ ಸಭೆ ಬಿಡಿಎ ಸೈಟ್ ಮಾಲೀಕರ ಸಭೆ ನಡೆಯಿತು. ಪ್ರಾಧಿಕಾರವು ಈಗಾಗಲೇ ಬಡಾವಣೆಯಲ್ಲಿ ಮೂಲಭೂತ ಮೂಲ ಸೌಕರ್ಯಗಳನ್ನು ಒದಗಿಸಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಉದಾಹರಣೆಗೆ ರಸ್ತೆಗಳು, ವಿದ್ಯುತ್, ಭೂಗತ ಒಳಚರಂಡಿ, ಕುಡಿಯುವ ನೀರು, ಒಳಚರಂಡಿ ಸಂಸ್ಕರಣಾ ಘಟಕ, ವಿದ್ಯುತ್ ಉಪಕೇಂದ್ರ, ಉದ್ಯಾನವನಗಳು, ಇತರ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಚರ್ಚಿಸಲಾಯಿತು. ಬಡಾವಣೆಯಲ್ಲಿ ಸುಮಾರು ಶೇ. 90 ರಷ್ಟು ಕೆಲಸಗಳು ಈಗಾಗಲೇ ಪೂರ್ಣಗೊಂಡಿವೆ, ಉಳಿದ ಶೇ. 10 ರಷ್ಟು ಕೆಲಸವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ನಿವೇಶನ ಪಡೆದವರಿಗೆ ತಿಳಿಸಲಾಯಿತು. ಬಡಾವಣೆಯ ವಿವಿಧ ಭಾಗಗಳಲ್ಲಿ ಹರಡಿರುವ 550 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಬಗ್ಗೆ, ಭೂಮಾಲೀಕರು ಹೈಕೋರ್ಟ್ ನಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದರು.

# ಮುಂಗಾರು ಆರ್ಭಟ: ಈ ಬಾರಿ ನಗರ ಪ್ರದೇಶಗಳಲ್ಲಿ ಹೆಚ್ಚಿನ ಮಳೆ ಸಾಧ್ಯತೆ

• **ಉದಯವಾಹಿನಿ, ಬೆಂಗಳೂರು**

ಭಾರತದಾದ್ಯಂತ ಈ ನೈಋತ್ಯ ಮಾನ್ಸೂನ್‌ನಲ್ಲಿ ಸಾಮಾನ್ಯಕ್ಕಿಂತ ಶೇ.5 ರಷ್ಟು ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದ್ದಾರೆ. ಆದರೆ ಕರ್ನಾಟಕಕ್ಕೆ, ವಿಶೇಷವಾಗಿ ಬೆಂಗಳೂರಿನಂತಹ ನಗರ ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾಗುವ ಬಗ್ಗೆ ಕರ್ನಾಟಕದ ಹವಾಮಾನ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಜೂನ್1ರಂದು ಮುಂಗಾರು ಪ್ರವೇಶಿಸಬೇಕಿತ್ತು, ಆದರೆ ಐದು ದಿನ ಮುಂಚಿತವಾಗಿ, ಮೇ 27 ರಂದು ಕೇರಳ ಕರಾವಳಿಯನ್ನು ಮಾನ್ಸೂನ್ ಅಪ್ಪಳಿಸುವ ಸಾಧ್ಯತೆಯಿದೆ. ಜಾಗತಿಕ ಹವಾಮಾನ ಅಂಶಗಳ ಆಧಾರದ ಮೇಲೆ ಇಡೀ ದೇಶಕ್ಕೆ ಹೆಚ್ಚಿನ ಮಳೆಯ ಮುನ್ಸೂಚನೆ ನೀಡಲಾಗಿದೆ ಎಂದು ಐಎಂಡಿ-ಬೆಂಗಳೂರಿನ ನಿರ್ದೇಶಕ ಎನ್. ಪುವಿಯರಸನ್ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ಗೆ ತಿಳಿಸಿದ್ದಾರೆ. ದಕ್ಷಿಣ ಒಳನಾಡಿನಲ್ಲಿ ಹೆಚ್ಚುವರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

ಹೆಚ್ಚುತ್ತಿರುವ ತಾಪಮಾನ ಮತ್ತು ನಗರೀಕರಣದ ಎಫೆಕ್ಟ್ ಮಳೆಯ ಪ್ರಮಾಣದಲ್ಲಿಯೂ ಸಹ ಪಾತ್ರವಹಿಸುತ್ತವೆ ಎಂದಿದ್ದಾರೆ. ಮಳೆಯ ಮೇಲೆ ಪ್ರಭಾವ ಬೀರುವಲ್ಲಿ ತಾಪ ಮಾನ ಏರಿಕೆಯೂ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಪುವಿಯರಸನ್ ತಿಳಿಸಿದ್ದಾರೆ. ಕಳೆದ ವರ್ಷ, ಬೆಂಗಳೂರಿನಲ್ಲಿ ದಾಖಲಾದ ಗರಿಷ್ಠ ತಾಪಮಾನವು ಮೇ ತಿಂಗಳಲ್ಲಿ ಸುಮಾರು 36 ಡಿಗ್ರಿ ಸೆಲ್ಸಿಯಸ್ ಆಗಿತ್ತು. ಈ ವರ್ಷ, ಇದು 33 ಡಿಗ್ರಿ ಸೆಲ್ಸಿಯಸ್ ಇದೆ. ಪ್ರಸ್ತುತ, ಕರ್ನಾಟಕದ ಹೆಚ್ಚಿನ ಭಾಗಗಳಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿದೆ, ಆದರೆ ಬೆಂಗಳೂರಿನಲ್ಲಿ ಅಷ್ಟೊಂದು ಹೆಚ್ಚು ಮಳೆಯಾಗಿಲ್ಲ. ಬೆಳಗಾವಿ ಸೇರಿದಂತೆ ಇತರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗುತ್ತಿದೆ. ಲಭ್ಯವಿರುವ ಮಾಹಿತಿಯ ಪ್ರಕಾರ, ಕರ್ನಾಟಕವು ಮೇ 2023 ರಲ್ಲಿ 86.4 ಮಿಮೀ ಮಳೆಯನ್ನು ಕಂಡಿದೆ, ಇದು ಸಾಮಾನ್ಯ ಮುನ್ಸೂಚನೆಯ 73.7 ಮಿಮೀ ಮಳೆಯಾಗಿದೆ. ಮೇ 2024 ರಲ್ಲಿ, ರಾಜ್ಯದಲ್ಲಿ


ಉದಯವಾಹಿನಿ ಚಿತ್ರ

118 ಮಿಮೀ ಮಳೆಯಾಗಿತ್ತು. ಇದಲ್ಲದೆ, ಬೆಂಗಳೂರಿನಲ್ಲಿ ಮೇ 2024 ರಲ್ಲಿ 181.5 ಮಿಮೀ, ಮೇ 2023 ರಲ್ಲಿ 305.4 ಮಿಮೀ ಮಳೆಯಾಗಿತ್ತು. ಹವಾಮಾನ ತಜ್ಞ ಪ್ರೊ. ಎಂ.ಬಿ. ರಾಜೇಗೌಡ ಅವರ ಪ್ರಕಾರ, ರಾಜ್ಯದಲ್ಲಿ ಹೆಚ್ಚಿದ ಮಳೆಯನ್ನು ರೈತರು ಮತ್ತು ಕೃಷಿ ಪ್ರದೇಶಗಳು ಹೆಚ್ಚಿನ ಕೃಷಿಗಾಗಿ ಸದುಪಯೋಗಪಡಿಸಿಕೊಳ್ಳಬೇಕು. ರೈತರು ದೀರ್ಘಾವಧಿಯ ಬೆಳೆಗಳಿಗೆ ಹೋಗಬಹುದು ಎಂದು ಅವರು ಸೂಚಿಸಿದ್ದಾರೆ. ಬೆಂಗಳೂರಿನ ಸನ್ನಿವೇಶದ ಬಗ್ಗೆ ವಿವರಿಸಿದ ಅವರು, ಹೆಚ್ಚಿದ ಶಾಖ ಪದರಗಳು ಹೆಚ್ಚಿನ ಮೋಡಗಳನ್ನು ಸೆಳೆಯುತ್ತವೆ. 1950 ರ ದಶಕದಲ್ಲಿ 600 ಮಿ.ಮೀ ಮಳೆಯಾಗಿತ್ತು, ಈಗ ಅದು 1,000 ಮಿ.ಮೀ. ಆಗಿದೆ. ಬೇಸಿಗೆಯ ಉಷ್ಣತೆ ಹೆಚ್ಚಾಗಿದೆ, ಮತ್ತು ಮಳೆಯೂ ಸಹ ಹೆಚ್ಚಾಗಿದೆ ಎಂದು ಅವರು ವಿವರಿಸಿದರು. ಆದಾಗ್ಯೂ, ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳು, ಪೂರ್ವ ಮಾನ್ಸೂನ್ ಮಳೆ ಈಗಾಗಲೇ ಪ್ರಾರಂಭವಾಗಿದೆ ಎಂದು ಹೇಳಿದರು.

ನಗರ ಪ್ರದೇಶಗಳಲ್ಲಿ ತೀವ್ರ ಮಳೆ ಮತ್ತು ಪ್ರವಾಹವು ಈಗ ಹೊಸ ಸಾಮಾನ್ಯವಾಗಿದೆ ಎಂದು ಅಧಿಕಾರಿಯೊಬ್ಬರು ಹೇಳಿದರು. ಕರ್ನಾಟಕದ ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿಯೂ ಸಹ ಭಾರೀ ಮಳೆಯಾಗಲಿದೆ ಎಂದು ಅಧಿಕಾರಿಯೊಬ್ಬರು ಹೇಳಿದರು.

# 3 ತಿಂಗಳಲ್ಲಿ ಗುತ್ತಿಗೆದಾರರ 32,000 ಕೋಟಿ ರೂ. ಬಾಕಿ ಬಿಲ್ ಪಾವತಿ

• **ಉದಯವಾಹಿನಿ, ಬೆಂಗಳೂರು**

ಸರ್ಕಾರದಿಂದ ಗುತ್ತಿಗೆದಾರರಿಗೆ ಬಾಕಿ ಇರುವ, 32,000 ಕೋಟಿ ರೂಪಾಯಿಯನ್ನು ಮುಂದಿನ ಎರಡು-ಮೂರು ತಿಂಗಳಲ್ಲಿ ಪಾವತಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮಂಗಳವಾರ ಭರವಸೆ ನೀಡಿದ್ದಾರೆ. ಡಿಕೆಶಿ ಅವರು ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಜೊತೆ ಮಂಗಳವಾರ ಸರ್ಕಾರಿ ನಿವಾಸದಲ್ಲಿ ಸಭೆ ನಡೆಸಿದರು. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಘದ ಅಧ್ಯಕ್ಷ ಮಂಜುನಾಥ್, ಗುತ್ತಿಗೆದಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಡಿಸಿಎಂಗೆ ವಿವರಿಸಿದ್ದೇವೆ.

ಸಣ್ಣ ಗುತ್ತಿಗೆದಾರರ ಬಾಕಿ ಬಿಲ್‌ಗಳನ್ನು ಬಿಡುಗಡೆ ಮಾಡಿ ತೆರವುಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದೇವೆ ಎಂದು ಹೇಳಿದರು. ಸಣ್ಣ ಗುತ್ತಿಗೆದಾರರಲ್ಲಿ ಹಿರಿತನದ ಆಧಾರದ ಮೇಲೆ ಬಾಕಿ ಪಾವತಿಸುವುದಾಗಿ ಡಿಸಿಎಂ ಭರವಸೆ ನೀಡಿದ್ದಾರೆ. ಬಿಲ್‌ಗಳನ್ನು ತೆರವುಗೊಳಿಸುವಾಗ ಅಧಿಕಾರಿಗಳು ಮಾಡುವ ತಪ್ಪುಗಳು ಸಿಎಂ ಅಥವಾ ಸಚಿವರಿಗೆ ತಿಳಿದಿಲ್ಲ, ನಾವು ಇದನ್ನು ಉಪಮುಖ್ಯಮಂತ್ರಿಗಳಿಗೆ ವಿವರಿಸಿದ್ದೇವೆ. ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ಬಾಕಿ ಬಿಲ್‌ಗಳನ್ನು ತೆರವುಗೊಳಿಸುವುದಾಗಿ ಶಿವಕುಮಾರ್ ಅವರು ಭರವಸೆ ನೀಡಿದ್ದಾರೆಂದು ತಿಳಿಸಿದರು.

# ನೀರಾವರಿ ಯೋಜನೆಗಳಿಗೆ ಸಿಗದ ಅನುದಾನ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ನೀರಾವರಿ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡದ್ದಕ್ಕೆ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರ ಅಸಮಾಧಾನ ವ್ಯಕ್ತಪಡಿಸಿದೆ.

2024-25, 2025-26 ನೇ ಸಾಲಿನ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸರ್ಕಾರದ ಅನುದಾನ ಬಿಡುಗಡೆ ಮಾಹಿತಿ ಕುರಿತು ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಮತ್ತು ರಾಜ್ಯ ನೀತಿ, ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ಅವರ ನೇತೃತ್ವದಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳ ಸಭೆ ಮಂಗಳವಾರ ನಡೆಯಿತು. ಸಭೆಯಲ್ಲಿ ಭಾಗವಹಿಸಿದ್ದ ಜಲಸಂಪನ್ಮೂಲ, ಆರ್‌ಡಿಪಿಆರ್, ಪಿಡಬ್ಲ್ಯೂಡಿ, ವಾಣಿಜ್ಯ ಮತ್ತು ಕೈಗಾರಿಕೆಗಳು, ನಗರಾಭಿವೃದ್ಧಿ, ಸಣ್ಣ ನೀರಾವರಿ ಇಲಾಖೆಗಳ ಅಧಿಕಾರಿಗಳು ಕೇಂದ್ರ ಸರ್ಕಾರದ ಯೋಜನೆಗಳು,



ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ನಡುವಿನ ಅನುದಾನ ಹಂಚಿಕೆ, ಇತರ ವಿಷಯಗಳ ಕುರಿತು ಚರ್ಚಿಸಿದರು. ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ ಮಾತನಾಡಿ, ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರದ ಘೋಷಿತ ಅನುದಾನ ಬಿಡುಗಡೆ ಆಗುತ್ತಿಲ್ಲ.

ಹೀಗಾಗಿ, ರಾಜ್ಯದ ನೀರಾವರಿ ಯೋಜನೆಗಳು ಬಹಳ ವರ್ಷಗಳಿಂದ ನನೆಗುದಿಗೆ ಬಿದ್ದಿವೆ ಎಂದರು.

ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಕೇಂದ್ರ ಸರ್ಕಾರ ಘೋಷಣೆ ಮಾಡಿದ್ದರೂ ಯೋಜನೆಗೆ ಅಗತ್ಯವಿರುವ ರೂ.5,600 ಕೋಟಿಯಲ್ಲಿ ಒಂದು ರೂಪಾಯಿಯನ್ನೂ ಈವರೆಗೆ ಬಿಡುಗಡೆ ಮಾಡಿಲ್ಲ ಎಂದು ಹೇಳಿದರು.

**ಕೇಂದ್ರ ಜಲಸಂಪನ್ಮೂಲ ಸಚಿವರು ಸಭೆ ಕರೆದರೂ ಆಂಧ್ರಪ್ರದೇಶದಿಂದ ಯಾರೂ ಭಾಗವಹಿಸುತ್ತಿಲ್ಲ. ತಮಿಳುನಾಡು ಕೂಡಾ ಕರ್ನಾಟಕದ ಯೋಜನೆಗಳಿಗೆ ಸಕರಾತ್ಮಕವಾಗಿ ಸ್ಪಂದಿಸುತ್ತಿಲ್ಲ. ಮುಂದಿನ ದಿನಗಳಲ್ಲಿ ಕೇಂದ್ರದ ಮೇಲೆ ಒತ್ತಡ ಹೇರಿ, ಆಂಧ್ರ ಮತ್ತು ತಮಿಳುನಾಡು ಸರ್ಕಾರಗಳು ರಾಜ್ಯದ ಯೋಜನೆಗಳಿಗೆ ಒಪ್ಪಿಗೆ ಸೂಚಿಸುವಂತೆ ಮಾಡಬೇಕು ಎಂದು ತಿಳಿಸಿದರು.**

# ಮೇಲ್ಸೇತುವೆ ಕಾಮಗಾರಿ ವೇಗವಾಗಿ ಸಾಗುತ್ತಿದ್ದು, ಶೇ.50 ರಷ್ಟು ಕೆಲಸ ಪೂರ್ಣಗೊಂಡಿದೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

2.5 ಕಿಲೋಮೀಟರ್ ಉದ್ದದ ಈಜಿಪುರ ಮೇಲ್ಸೇತುವೆ ಕಾಮಗಾರಿ ಕಾರ್ಯ ವೇಗ ಪಡೆದುಕೊಂಡಿದ್ದು, ಈಗಾಗಲೇ ಯೋಜನೆಯ ಶೇ.50ರಷ್ಟು ಕಾರ್ಯ ಪೂರ್ಣಗೊಂಡಿದೆ ಎಂದು ಸಚಿವ ರಾಮಲಿಂಗಾ ರೆಡ್ಡಿಯವರು ಹೇಳಿದ್ದಾರೆ. 726 ಕಾಂಕ್ರೀಟ್ ಸ್ಲ್ಯಾಬ್‌ಗಳ ಪೈಕಿ 291 ಸ್ಲ್ಯಾಬ್‌ಗಳನ್ನು ನಿರ್ಮಿಸಲಾಗಿದ್ದು, ಇನ್ನೂ 220 ಸ್ಲ್ಯಾಬ್‌ಗಳು ಸಿದ್ಧವಾಗಿವೆ. ಅವುಗಳನ್ನು ಸರಿಪಡಿಸಲಾಗುತ್ತಿದೆ. ಯೋಜನೆ ಪೂರ್ಣಗೊಳ್ಳಬೇಕು ಎಂಬ ಕಟ್ಟುನಿಟ್ಟಿನ ನಿರ್ದೇಶನಗಳನ್ನು ಕಂಪನಿ ಪಾಲಿಸುತ್ತಿದ್ದು, ಬಿಬಿಎಂಪಿ ಮುಖ್ಯ ಎಂಜಿನಿಯರ್ ರಾಘವೇಂದ್ರ ಪ್ರಸಾದ್ ಯೋಜನೆಯ ಮೇಲ್ವಿಚಾರಣೆ ಮಾಡುತ್ತಿದ್ದಾರೆಂದು ಹೇಳಿದ್ದಾರೆ.

**ಕಾಮಗಾರಿ ಪ್ರಗತಿಯನ್ನು ಪತ್ತೆಹಚ್ಚಲು ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪೂರ್ವನಿರ್ಮಿತ ಸ್ಲ್ಯಾಬ್‌ಗಳನ್ನು ಎತ್ತುವುದು ಮತ್ತು ನಿರ್ಮಿಸುವುದರ ಜೊತೆಗೆ ಎಂಜಿನಿಯರ್‌ಗಳು ಫ್ಲೈಓವರ್‌ನೊಂದಿಗೆ ಏಕಕಾಲದಲ್ಲಿ ಮಾಡಲಾಗುತ್ತಿರುವ ಮೀಡಿಯನ್ ಡಾಂಬರು ಮತ್ತು ಪಾದಚಾರಿ ಕಾಮಗಾರಿ ಕೆಲಸವನ್ನೂ ಸಹ ಕೈಗೆತ್ತಿಕೊಂಡಿದ್ದಾರೆಂದು ಮಾಹಿತಿ ನೀಡಿದ್ದಾರೆ.**

ಯೋಜನೆ ಕುರಿತು ಮಾತನಾಡಿರುವ ರಾಘವೇಂದ್ರ ಪ್ರಸಾದ್ ಅವರು, ಕಾರ್ಯನಿರ್ವಾಹಕ ಎಂಜಿನಿಯರ್‌ಗಳಾದ ಚಂದ್ರಶೇಖರ್, ಸಂದೇಶ್ ಶೆಟ್ಟಿ, ರಂಜಿತ್, ಗುಣಮಟ್ಟ, ನಿಯಂತ್ರಣ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗಳ ಹೊಸ ತಂಡವು ಯೋಜನೆಯನ್ನು ಮೇಲ್ವಿಚಾರಣೆ ಮಾಡುತ್ತಿದೆ. ಕಾಮಗಾರಿಯನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡರಲ್ಲೂ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ಯೋಜನೆಗಿದ್ದ ಭೂಸ್ವಾಧೀನ ಸಮಸ್ಯೆಯನ್ನು ಪರಿಹರಿಸಲಾಗಿದೆ. ಸೇಂಟ್ ಜಾನ್ಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ ಯೋಜನೆಗೆ ಅಗತ್ಯವಿರುವ ಭೂಮಿಯನ್ನು ನೀಡಲು ತಾತ್ವಿಕವಾಗಿ ಒಪ್ಪಿಗೆ ನೀಡಿದೆ.

ಸೇಂಟ್ ಜಾನ್ಸ್ ಆಸ್ಪತ್ರೆ ರಸ್ತೆಯಿಂದ ಸರ್ಜಾಪುರದವರೆಗೆ 5,999 ಚದರ ಮೀಟರ್ ವಿಸ್ತೀರ್ಣದ ಭೂಮಿಯನ್ನು ಪಿಯರ್‌ಗಳು ಮತ್ತು ಕಂಬಗಳನ್ನು ನಿರ್ಮಿಸಲು ಸ್ವಾಧೀನಪಡಿಸಿಕೊಳ್ಳಲಾಗುವುದು. ಅದೇ ರೀತಿ, ಕೇಂದ್ರೀಯ ಸದನದ ಬಲಭಾಗದಲ್ಲಿರುವ IIOA ನಲ್ಲಿ 917 ಚದರ ಮೀಟರ್ ವಿಸ್ತೀರ್ಣ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುವುದು. ಆಸ್ಪತ್ರೆ ಅಧಿಕಾರಿಗಳು ಪರಿಹಾರವನ್ನು ಕೇಳಿದ್ದಾರೆ. ಅದೇ ರೀತಿ, ಮಡಿವಾಳದಲ್ಲಿ ಎಡ ತಿರುವು ಬದಿಯಲ್ಲಿ 623 ಚದರ ಮೀಟರ್ ವಿಸ್ತೀರ್ಣದ ನಾಲ್ಕು ಆಸ್ತಿಗಳನ್ನು ಮತ್ತು ಈಜಿಪುರ ಬಳಿ 986.28 ಚದರ ಮೀಟರ್ ಅಳತೆಯ 32 ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸಿಕೊಳ್ಳಲು ಪ್ರಸ್ತಾಪಿಸಲಾಗಿದೆ. ಭೂಸ್ವಾಧೀನ ಸ್ವಾಧೀನ ಪ್ರಕ್ರಿಯೆ ಮುಗಿದ ನಂತರ ಕೆಲಸ ಸುಗಮವಾಗಿ ನಡೆಯಲಿದ್ದು, ಡಿಸೆಂಬರ್ ವೇಳೆಗೆ ಯೋಜನೆ ಸಿದ್ಧವಾಗಲಿದೆ ಎಂದು ಹೇಳಿದರು.

# ಬಿಎಂಟಿಸಿ ಹೊಸ ಬಸ್ ಮಾರ್ಗ ಆರಂಭ

## ಮೆಜೆಸ್ಟಿಕ್‌ನಿಂದ ಬೆಂಗಳೂರು ಹೊರ ವಲಯದ ಕಿತ್ತನಹಳ್ಳಿವರೆಗೂ ಸಂಪರ್ಕ

• **ಉದಯವಾಹಿನಿ, ಬೆಂಗಳೂರು**

ಬಿಎಂಟಿಸಿ ಪ್ರಯಾಣಿಕರ ಅನುಕೂಲಕ್ಕಾಗಿ ಹೊಸ ಬಸ್ ಮಾರ್ಗ ಆರಂಭಿಸಿದೆ. ಈ ಮಾರ್ಗವು ಮೆಜೆಸ್ಟಿಕ್‌ನಿಂದ ಬೆಂಗಳೂರು ಹೊರ ವಲಯದ ಕಿತ್ತನಹಳ್ಳಿವರೆಗೂ ಸಂಪರ್ಕ ಕಲ್ಪಿಸಲಿದೆ. ಮಾಗಡಿ ರಸ್ತೆ ಭಾಗದ ಬಡಾವಣೆಗಳ ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕೆಂಪೇಗೌಡ ಬಸ್ ನಿಲ್ದಾಣದಿಂದ ಕಾಮಾಕ್ಷಿ ಪಾಳ್ಯ, ಸುಂಕದಕಟ್ಟೆ, ಕಡಬಗೆರೆ ಕ್ರಾಸ್ ಮತ್ತು ಜನಪ್ರಿಯ ಟೌನ್ಶಿಪ್ ಮಾರ್ಗವಾಗಿ ಕಿತ್ತನಹಳ್ಳಿಗೆ ಈ ಬಸ್ ಸಂಚಾರ ನಡೆಸಲಿದೆ. ಈ ಬಸ್ ಮಾರ್ಗ ಸಂಖ್ಯೆ 245- ಜೆ ಆಗಿದ್ದು, ಮೇ 15 ರಿಂದ ಸಂಚರಿಸಲಿದೆ. (ಬಿಎಂಟಿಸಿ ಬಸ್ ಮಹಿಳೆಯರಿಗೆ ಸೇಫ್)

**ಬಸ್ ವೇಳಾಪಟ್ಟಿ ಏನು:** ಕೆಂಪೇಗೌಡ ಬಸ್ ನಿಲ್ದಾಣ ಬಿಡುವ ವೇಳೆ: ಬೆಳಿಗ್ಗೆ 7:50, 8:20, 9:00, 9:20, 10:15, 10:50, 11:20, ಮಧ್ಯಾಹ್ನ 12:20, 1:10, 2:00, 3:15, 3:30, 4:15, 4:30, 4:50, 5:40,


ಉದಯವಾಹಿನಿ ಚಿತ್ರ

6:00, 7:30, 8:30, 10:00

**ಕಿತ್ತನಹಳ್ಳಿ ಬಿಡುವ ವೇಳೆ:** ಬೆಳಿಗ್ಗೆ6:15, 6:45, 7:50, 9:00, 9:35, 10:10, 11:10, 12:00, 12:30, ಮಧ್ಯಾಹ್ನ 1:30, 3:05, 3:35, 4:25, 4:40, 5:30, 5:45, 6:55, 8:50

**ನಿರ್ಲಕ್ಷ್ಯ ಬಸ್ ಚಾಲನೆಗೆ ಶಿಸ್ತು ಕ್ರಮ:** ಅಜಾಗರೂಕ ಚಾಲನೆ ಅಥವಾ ನಿರ್ಲಕ್ಷ್ಯದಿಂದ ಸರಕಾರಿ ಬಸ್ ಅಪಘಾತಕ್ಕೀಡು ಮಾಡುವ ಚಾಲಕರ ವಿರುದ್ಧ ವಿಭಾಗೀಯ ನಿಯಂತ್ರಕರು ಶಿಸ್ತು ಕ್ರಮ ಜರುಗಿಸಬೇಕು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೂಚಿಸಿದರು.

ಬಿಎಂಟಿಸಿ ನಿರ್ವಾಹಕ ಹುದ್ದೆಗೆ ನೇಮಕವಾದವರಿಗೆ ನೇಮಕಾತಿ ಆದೇಶ ವಿತರಿಸಿ ಮಾತನಾಡಿದ ಅವರು, ಸರಕಾರಿ ಬಸ್‌ಗಳ ಅಪಘಾತ ಇತ್ತೀಚೆಗೆ ಹೆಚ್ಚುತ್ತಿದೆ. ಇದನ್ನು ನಿಯಂತ್ರಿಸಬೇಕು. ತಪ್ಪಿದಲ್ಲಿ ವಿಭಾಗೀಯ ನಿಯಂತ್ರಕರ ವಿರುದ್ಧವೇ ಕ್ರಮ ಕೈಗೊಳ್ಳಲಾಗುವುದು, ಎಂದು ಎಚ್ಚರಿಸಿದರು. ಎಲ್ಲಾ ಅಪಘಾತಗಳಿಗೆ ನಮ್ಮ ಚಾಲಕರೇ ಕಾರಣವಾಗಿರುವುದಿಲ್ಲ. ಬೇರೆ ವಾಹನಗಳು ಬಂದು ಗುದ್ದಿದರೆ ಏನೂ ಮಾಡಲಾಗುವುದಿಲ್ಲ. ನಮ್ಮ ನಿಗಮಗಳ ಚಾಲಕರ ನಿರ್ಲಕ್ಷ್ಯದಿಂದ ಅಪಘಾತ ಆದಾಗ ಮಾತ್ರ ಶಿಸ್ತು ಕ್ರಮ ಕೈಗೊಳ್ಳಬೇಕು.

ಕ್ರಮ ಕೈಗೊಳ್ಳದೇ ಇದ್ದರೆ ನೂರು ಅಪಘಾತದಲ್ಲಿ ಇದೂ ಒಂದು ಎಂಬ ಉಡಾಫೆ ಧೋರಣೆ ಚಾಲಕರಿಗೆ ಬರುತ್ತದೆ, ಎಂದು ಹೇಳಿದರು. ಬಿಎಂಟಿಸಿ ನೌಕರರಿಗೆ ಅನುಕೂಲವಾಗುವಂತೆ ವೇತನ ಚೀಟಿ ಮತ್ತು ಫಾರಂ 16ಗಳನ್ನು ಅಳವಡಿಸಿರುವ ತಂತ್ರಾಂಶವನ್ನು ಬಿಡುಗಡೆ ಮಾಡಲಾಯಿತು. ವ್ಯವಸ್ಥಾಪಕ ನಿರ್ದೇಶಕ ರಾಮಚಂದ್ರನ್ ಆರ್. ನಿರ್ದೇಶಕ (ಭದ್ರತೆ ಮತ್ತು ಜಾಗೃತ ದಳ) ಅಬ್ದುಲ್ ಅಹದ್, ನಿರ್ದೇಶಕಿ (ಮಾಹಿತಿ ತಂತ್ರಜ್ಞಾನ) ಶಿಲ್ಪಾ ಎಂ. ಉಪಸ್ಥಿತರಿದ್ದರು.

**2018 ರ ನಂತರ ಯಾವುದೇ ನೇಮಕಾತಿ ಆಗಿರಲಿಲ್ಲ. ನಾಲ್ಕು ನಿಗಮಗಳ 9,000 ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಎರಡು ವರ್ಷಗಳಿಂದ ನಡೆಯುತ್ತಿದೆ. ಈಗಾಗಲೇ 4,700 ಹೊಸ ನೇಮಕಾತಿ, 1,000 ಅನುಕಂಪದ ನೇಮಕಾತಿ ಪೂರ್ಣಗೊಳಿಸಲಾಗಿದೆ. ಬಿಎಂಟಿಸಿಗೆ 2,285 ನಿರ್ವಾಹಕರನ್ನು ನೇಮಕಾತಿ ಮಾಡಿಕೊಂಡಿದ್ದು, ನಿಗಮಕ್ಕೆ ಒಳ್ಳೆಯ ಹೆಸರು ತರುವಂತೆ ಕಾರ್ಯನಿರ್ವಹಿಸಬೇಕು, ಎಂದು ಸಲಹೆ ನೀಡಿದರು.**

## ಸರ್ಕಾರದಿಂದ ಸಕಾಲ ಗಂಭೀರ ಪರಿಗಣನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಡಿಕೇರಿ

ಸಕಾಲ ಕಾಯ್ದೆಯಡಿ ಸಲ್ಲಿಕೆಯಾಗುವ ಅರ್ಜಿಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಅರ್ಜಿಗಳಿಗೆ ಕಾಲಮಿತಿಯಲ್ಲಿ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಅಭಿವೃದ್ಧಿ ಕಾರ್ಯಗಳ ಸಂಬಂಧ ಅಧಿಕಾರಿಗಳ ಜೊತೆ ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ತಮ್ಮ ಹಂತದಲ್ಲಿ ಕೆಲಸ ಆಗದಿದ್ದಲ್ಲಿ ಹಿಂಬರಹವನ್ನಾದರೂ ನೀಡಬೇಕು, ಅದನ್ನು ಹೊರತುಪಡಿಸಿ ಸತಾಯಿಸುವುದು ಬೇಡ ಎಂದು ಸ್ಪಷ್ಟ ನಿರ್ದೇಶನ ನೀಡಿದರು. ಸಕಾಲ ಕಾಯ್ದೆಯಡಿ ಸಲ್ಲಿಕೆಯಾದ ಅರ್ಜಿಗಳನ್ನು ಕಾಲಮಿತಿ ಯಲ್ಲಿ ವಿಲೇವಾರಿ ಮಾಡದಿದ್ದಲ್ಲಿ ಯಾವ ರೀತಿ ಭಾವಿಸಿಕೊಳ್ಳಬೇಕು ಎಂಬ ಬಗ್ಗೆ ತಾವೇ ವಿಮರ್ಶೆ ಮಾಡಿಕೊಳ್ಳಬೇಕು. ಕಾಲಮಿತಿಯಲ್ಲಿ ಮಾಹಿತಿ ನೀಡದಿದ್ದಲ್ಲಿ ದಂಡ ಪಾವತಿಸಬೇಕಾಗುತ್ತದೆ' ಎಂದೂ ಅವರು ಎಚ್ಚರಿಕೆ ನೀಡಿದರು. ಅಧಿಕಾರಿಗಳು ಸಮಯವನ್ನು ವ್ಯರ್ಥ ಮಾಡದೆ ಕಚೇರಿ ಕೆಲಸವನ್ನು ವ್ಯವಸ್ಥಿತವಾಗಿ ನಿರ್ವಹಿಸಬೇಕು. ಕರ್ತವ್ಯದ ದಿನಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆವರೆಗೆ ಮಧ್ಯಾಹ್ನದ ಊಟದ ಸಮಯ ಹೊರತುಪಡಿಸಿ ಕಚೇರಿ ಕೆಲಸ ಮಾಡಿದ್ದಲ್ಲಿ ಎಷ್ಟೇ ಒತ್ತಡ ಇದ್ದರೂ ಸಹ ಸಾರ್ವಜನಿಕ ಕೆಲಸಗಳನ್ನು ಪೂರ್ಣಗೊಳಿಸಬಹುದು. ಈ ನಿಟ್ಟಿನಲ್ಲಿ ಇಚ್ಛಾಶಕ್ತಿ ಇರಬೇಕು ಎಂದು ಹೇಳಿದರು.

ವಿಧಾನಸಭಾ ಅಧಿವೇಶನ ಸಂದರ್ಭದಲ್ಲಿ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಕಚೇರಿಯಲ್ಲಿ ಹಾಜರಿರಬೇಕು. ಸರ್ಕಾರ ಕೇಳುವ ಮಾಹಿತಿಯನ್ನು ಒದಗಿಸಬೇಕು ಎಂದು ಸೂಚಿಸಿದರು. ಸರ್ಕಾರದ ಮಾರ್ಗಸೂಚಿಯಂತೆ ಕರ್ತವ್ಯ ನಿರ್ವಹಿಸಬೇಕು. ದಾಖಲಾತಿ ಸರಿಯಾಗಿ ನಿರ್ವಹಣೆ ಮಾಡಬೇಕು. ಮಹಾಲೇಖಪಾಲಕರ ಆಡಿಟ್ ಕಂಡಿಕೆಗಳಿಗೆ ಮಾಹಿತಿ ನೀಡಲು ಬಾಕಿ ಇದ್ದು, ಕೂಡಲೇ ವರದಿ ನೀಡುವಂತೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಎಂದು ಅವರು ನಿರ್ದೇಶನ ನೀಡಿದರು. ಹೊಸ ಆರ್ಥಿಕ ವರ್ಷ ಆರಂಭವಾಗಿದ್ದು, ವಿವಿಧ ಇಲಾಖೆಗಳು ಈಗಿನಿಂದಲೇ ಅಗತ್ಯ ಕಾರ್ಯಕ್ರಮ ರೂಪಿಸಬೇಕು. ಜೊತೆಗೆ ಪ್ರಗತಿಯನ್ನೂ ಸಾಧಿಸಬೇಕು ಎಂದರು. ವಿವಿಧ ಇಲಾಖೆಗಳು ಹಾಗೂ ವಿದ್ಯಾರ್ಥಿ ನಿಲಯಗಳಿಗೆ ನಿವೇಶನ ಗುರುತು ಸಂಬಂಧ ಅವರು ಮಾಹಿತಿ ಪಡೆದರು. ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಐಶ್ವರ್ಯ ಮಾತನಾಡಿ, 'ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆ ವ್ಯಾಪ್ತಿಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಮಾಹಿತಿ ಒದಗಿಸಬೇಕು' ಎಂದು ತಿಳಿಸಿದರು.

# ಗಡುವು ಮುಗಿಯುತ್ತಾ ಬಂದಿದ್ದರೂ ಬಿ ಖಾತಾ ನೀಡಲು ವಿಳಂಬ
# ಇ ಖಾತೆ ಕೊಡಿ ಎಂದು ಬಂದಿರುವುದು ಕೇವಲ 3400 ಅರ್ಜಿ ಮಾತ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

90 ದಿನದಲ್ಲಿ ಬಿ ಖಾತೆ ಎಂದು ಸದ್ದು ಮಾಡಿ ಆಗಲೇ 80 ದಿನ ಮುಗಿಯುತ್ತಾ ಬಂದಿದೆ. ಆದರೂ ಬಿ ಖಾತೆ ಕೊಡಿ ಎಂದು ದಾಖಲೆ ಕೊಟ್ಟವರು ಇನ್ನೂ ಖಾತೆಗಾಗಿ ಎದುರು ನೋಡುತ್ತಿದ್ದಾರೆ. ಆದರೆ ಇದುವರೆಗೂ ನಾಳೆ, ಇಂದು ಎಂಬ ಉತ್ತರ ಸಿಗುತ್ತಿದ್ದು, ಗಡುವಿನೊಳಗೆ ಬಿ ಖಾತೆ ಸಿಗುತ್ತೋ ಇಲ್ಲವೋ ಎಂಬ ಅತಂತ್ರ ಸ್ಥಿತಿಯಲ್ಲಿದ್ದಾರೆ.

ಖಾತೆ ಸಿಗದೇ ತೊಂದರೆಗೆ ಸಿಲುಕಿದ್ದ ಆಸ್ತಿ ಮಾಲೀಕರಿಗೆ ಬಿ ಖಾತೆ ಮಾಡಿಸಿಕೊಳ್ಳುವಂತೆ ಮನವಿ ಮಾಡಲಾಗಿತ್ತು. ಆದರೆ ನಿರೀಕ್ಷಿತ ಪ್ರತಿಕ್ರಿಯೆ ಸಿಗುತ್ತಿಲ್ಲಎಂದು ದೊಡ್ಡ ಮಟ್ಟದ ಅಭಿಯಾನವೂ ನಡೆದಿತ್ತು. ನಗರದಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಮಂದಿಗೆ ಇ ಖಾತೆ ಆಗಬೇಕು.

- ಬಿ ಖಾತೆಗಾಗಿ ದಾಖಲೆ ಕೊಟ್ಟವರು ಇನ್ನೂ ಖಾತೆಗಾಗಿ ಎದುರು ನೋಡುತ್ತಿದ್ದಾರೆ
- ಚಿಕ್ಕಬಳ್ಳಾಪುರ ನಗರದಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಮಂದಿಗೆ ಇ ಖಾತೆ ಆಗಬೇಕು

ಆದರೆ ಇ ಖಾತೆ ಕೊಡಿ ಎಂದು ಬಂದಿರುವುದು ಕೇವಲ 3400 ಅರ್ಜಿ ಮಾತ್ರ.

**90 ದಿನದೊಳಗೆ ಅನುಮಾನ:** ರಾಜ್ಯದ ಎಲ್ಲನಗರ, ಪಟ್ಟಣ ಪ್ರದೇಶಗಳಲ್ಲಿಕಂದಾಯ ಭೂಮಿಯಲ್ಲಿನ ಅನಧಿಕೃತ ಬಡಾವಣೆಗಳು ಹಾಗೂ ನಕ್ಷೆ ಮಂಜೂರಾತಿ ಇಲ್ಲದೆ ನಿರ್ಮಿಸಿದ ಕಟ್ಟಡಗಳಿಗೆ ಬಿ-ಖಾತೆ ನೀಡಿ, ಆಸ್ತಿ ತೆರಿಗೆ ಸಂಗ್ರಹಿಸುವ ಮಹತ್ವದ ನಿರ್ಣಯವನ್ನು ರಾಜ್ಯ ಸಚಿವ ಸಂಪುಟ ಸಭೆ ಕೈಗೊಂಡಿತ್ತು.

ಆದರೆ ನಿರೀಕ್ಷೆಯಂತೆ 90 ದಿನದಲ್ಲಿಅರ್ಜಿ ಸಲ್ಲಿಸಿದ ಎಲ್ಲರಿಗೂ ಖಾತೆ ಸಿಗುವುದೇ ಅನುಮಾನ.

**2400 ಮಂದಿ ಅರ್ಹ:** ಈಗ ಸಲ್ಲಿಸಿರುವ 3400 ಅರ್ಜಿಗಳ ಪೈಕಿ 2400 ಮಂದಿ ಮಾತ್ರ ಬಿ ಖಾತೆ ನೀಡಲು ಅರ್ಹರಾಗಿದ್ದಾರೆ. ಅವುಗಳ ಪೈಕಿ 500 ಮಂದಿಗೆ ಇ ಖಾತೆ ನೀಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಇದುವರೆಗೂ 150 ಮಂದಿಗಷ್ಟೇ ಖಾತೆ ಕೈ ಸೇರಿದ್ದು ಉಳಿದ ಅರ್ಜಿಗಳ ವಿಲೇವಾರಿ ಮಾಡಿ ಖಾತೆ ಮಾಡಿಕೊಡಬೇಕಿದೆ.




ಯಾವಾಗ ಕೊಡ್ತೀರಿ ಸ್ವಾಮಿ?

### ಮತ್ತೊಂದು ತೆರಿಗೆ ಕಾಟ

ರಾಜ್ಯ ಸರಕಾರದಿಂದ ಆದ ಮತ್ತೊಂದು ಎಡವಟ್ಟು ಎಂದರೆ ಆರ್ಥಿಕ ವರ್ಷದ ಕೊನೆ ತಿಂಗಳಲ್ಲಿ ಈ ಬಿ ಖಾತೆ ನೀಡುವುದನ್ನು ಜಾರಿಗೆ ತಂದದ್ದು. ಈಗಾಗಲೇ ಬಿ ಖಾತೆ ಪಡೆಯಲು ಡಬಲ್ ತೆರಿಗೆ ಕಟ್ಟಿರುವವರು ಈಗ ಹೊಸ ವರ್ಷದ ತೆರಿಗೆಯನ್ನು ಕಟ್ಟಬೇಕಾದ ಅನಿವಾರ್ಯತೆ ಎದುರಾಗಿದೆ. ಈಗಾಗಲೇ ಸಾಲ ಸೋಲ ಮಾಡಿ ಡಬಲ್ ತೆರಿಗೆ ಕಟ್ಟಿರುವವರು ಈಗ ಮತ್ತೊಂದು ತೆರಿಗೆ ಕಟ್ಟಲು ಹಿಂದುಮುಂದು ನೋಡುವ ಪರಿಸ್ಥಿತಿ ಎದುರಾಗಿದೆ.

**ಆರಂಭದಲ್ಲಿ ಅಬ್ಬರ:** ಜಿಲ್ಲಾ ಕೇಂದ್ರದಲ್ಲಂತೂ ಕಾಂಗ್ರೆಸ್ ಮತ್ತು ಬಿಜೆಪಿ ಮುಖಂಡರಿಂದ ಮಹಾತ್ಸಾಧನೆ ಎಂಬ ರೀತಿಯಲ್ಲಿ ಅಬ್ಬರದ ಪ್ರಚಾರ ಮಾಡಿದ್ದವು. ರಾಜ್ಯ ಸರಕಾರ ಬಿ ಖಾತೆ ಮಾಡಿಸಲು 90 ದಿನಗಳ ಗಡುವು ನೀಡಿರುವ ಹಿನ್ನೆಲೆಯಲ್ಲಿ ಎಲ್ಲರೂ ಅಬ್ಬರದ ಪ್ರಚಾರದಲ್ಲಿ ತೊಡಗಿದ್ದರು. ಅಲ್ಲದೇ ವಿಶೇಷ ಶಿಬಿರಗಳ ಆಯೋಜನೆ ಮೂಲಕ ಮನೆ ಬಾಗಿಲಿಗೆ ಬಿ ಖಾತೆ ಕೊಡಿಸುತ್ತೇವೆ ಎಂಬ ಭರವಸೆ ಕೊಟ್ಟಿದ್ದರು. ಆದರೆ ಈಗ ಅಧಿಕಾರಿಗಳ ಕಡೆ ಬೆರಳು ತೋರಿಸುತ್ತಿದ್ದಾರೆ.

> ಚಿಕ್ಕಬಳ್ಳಾಪುರ ನಗರದಲ್ಲಿ 3400 ಮಂದಿ ಖಾತೆಗಾಗಿ ಅರ್ಜಿ ಹಾಕಿದ್ದಾರೆ. ಅವುಗಳ ಪೈಕಿ 2400 ಅರ್ಜಿಗಳು ಮಾತ್ರ ಖಾತೆಗೆ ಅರ್ಹವಾಗಿದ್ದು, ಎಲ್ಲವನ್ನು ಖಾತೆ ಮಾಡಲು ಕ್ರಮವಹಿಸಲಾಗುತ್ತಿದೆ. 500 ಅಂತಿಮ ಹಂತದಲ್ಲಿದ್ದು, ಆದಷ್ಟು ಬೇಗ ಖಾತೆ ಮಾಡಿ ಕೊಡಲು ಕ್ರಮ ಕೈಗೊಳ್ಳಲಾಗುವುದು.
> 
> -ಮನ್ಸೂರ್ ಅಲಿ, ನಗರಸಭೆ ಪೌರಾಯುಕ್ತ

> ಬಿ ಖಾತೆ ಮಾಡಿಸಲು ಈಗಲೇ ಕಷ್ಟ ಬಿದ್ದು ಡಬಲ್ ಟ್ಯಾಕ್ಸ್ ಕಟ್ಟಿದ್ದೇವೆ. ಈ ಮತ್ತೊಂದು ವರ್ಷದ ತೆರಿಗೆ ಕಟ್ಟಿ ಎಂದು ಹೇಳುತ್ತಿದ್ದಾರೆ. 90 ದಿನದಲ್ಲಿಬಿ ಖಾತೆ ಕೊಡುತ್ತೇವೆ ಎಂದಿದ್ದರು, ಆದರೆ ಸದ್ಯಕ್ಕೆ ಇವರು ಬಿ ಖಾತೆ ಕೊಡುವ ರೀತಿ ಕಾಣಿಸುತ್ತಿಲ್ಲ. ಇವರು ಹೇಳಿದಂತೆ ಅರ್ಜಿ ಸಲ್ಲಿಸಿದ್ದರೂ ವಿಳಂಬ ಮಾಡುತ್ತಿದ್ದಾರೆ.
> 
> -ಮಂಜುನಾಥ್, ಬಿ ಖಾತೆ ಅರ್ಜಿದಾರರು

**ಸಿಬ್ಬಂದಿ ಕೊರತೆ:** ಒಂದೇ ಬಾರಿ ಸಾವಿರಾರು ಅರ್ಜಿಗಳು ಬಂದಿರುವುದರಿಂದ ನಗರಸಭೆಯಲ್ಲಿ ಸಿಬ್ಬಂದಿ ಕೊರತೆಯೂ ಇದೆ. ಇರುವ ಎಲ್ಲಾ ಸಿಬ್ಬಂದಿಯನ್ನು ನಿಯೋಜಿಸಿ ಬಿ ಖಾತೆ ನೀಡುವ ಪ್ರಕ್ರಿಯೆ ನಡೆಸಲಾಗುತ್ತಿದೆ. ಅಲ್ಲದೇ ಕೆಲವು ನಗರಸಭೆ ಸದಸ್ಯರು ಕೂಡಾ ತಮ್ಮ ವ್ಯಾಪ್ತಿಯ ಅರ್ಜಿಗಳನ್ನು ಮುಗಿಸಲು ಸಹಾಯ ಮಾಡುತ್ತಿದ್ದಾರೆ. ಆದರೆ ಹಲವು ತಾಂತ್ರಿಕ ತೊಂದರೆಗಳಿಂದ ನಿರೀಕ್ಷಿತ ಮಟ್ಟದಲ್ಲಿ ಪ್ರಕ್ರಿಯೆ ನಡೆಯುತ್ತಿಲ್ಲ.

**ಸದ್ಯಕ್ಕೆ 90 ದಿನದಲ್ಲಿ ಹೇಳಿದಂತೆ ಬಿ ಖಾತೆ ಕೊಡುವುದು ಕಷ್ಟಸಾಧ್ಯ.** 90 ದಿನದೊಳಗೆ ಬಿ ಖಾತೆ ಕೊಡಬೇಕು ಎಂಬುದು ಸರಕಾರದಿಂದ ಸಿಕ್ಕಿದ್ದ ಮೌಖಿಕ ಆದೇಶವಷ್ಟೇ. ಎಲ್ಲೂ ಲಿಖಿತ ಆದೇಶ ಕೊಟ್ಟಿರಲಿಲ್ಲ ಎಂಬ ಉತ್ತರ ಸಿಗುತ್ತಿದೆ. ಅಲ್ಲದೇ ಸರಕಾರ ಕೂಡಾ ಬಿ ಖಾತೆ ನೀಡುವ ಅವಧಿಯನ್ನು ಮುಂದೂಡುವ ಸಾಧ್ಯತೆಯೂ ಇದೆ.

## ಮಿನಿ ನ್ಯೂಸ್

### ಕೆಎಸ್‌ಆರ್‌ಟಿಸಿ ಬಸ್, ಕಾರು ಮುಖಾಮುಖಿ ಡಿಕ್ಕಿ ಚಾಲಕ ಸಾವು

• ಉದಯವಾಹಿನಿ, ಮೈಸೂರು

ಕೆಎಸ್‌ಆರ್‌ಟಿಸಿ ಬಸ್, ಕಾರು ನಡುವೆ ಭೀಕರ ಅಪಘಾತ ಸಂಭವಿಸಿದ ಪರಿಣಾಮ ಕಾರು ಚಾಲಕ ಸಾವನ್ನಪ್ಪಿದ್ದು, ಮತ್ತೋರ್ವ ಗಂಭೀರ ಗಾಯಗೊಂಡ ಘಟನೆ ಮೈಸೂರು ಜಿಲ್ಲೆ ಕೆ.ಆರ್ ನಗರ ತಾಲ್ಲೂಕಿನ ಮಂಚನಹಳ್ಳಿಯಲ್ಲಿ ನಡೆದಿದೆ. ಅಪಘಾತದಲ್ಲಿ ಕಾರು ಚಾಲಕ ಮೈಸೂರಿನ ಕನಕದಾಸನಗರ ನಿವಾಸಿ ಸುನೀಲ್ (34) ಮೃತಪಟ್ಟಿದ್ದು, ರಮೇಶ್ ಎಂಬವರು ಗಂಭೀರ ಗಾಯಗೊಂಡಿದ್ದಾರೆ. ಮೂಲತಃ ಚಿಕ್ಕಮಗಳೂರಿನ ಮೂಡಿಗೆರೆ ನಿವಾಸಿಯಾದ ಸುನೀಲ್ ತಮ್ಮ ಕಾರಿನಲ್ಲಿ ಮೈಸೂರಿನಿಂದ ಹಾಸನದ ಕಡೆಗೆ ತೆರಳುತ್ತಿದ್ದರು.

ಬಸ್ ಚಿಕ್ಕಮಗಳೂರಿನಿಂದ ಮೈಸೂರು ಕಡೆಗೆ ಬರುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಬಸ್‌ನಲ್ಲಿದ್ದ ಪ್ರಯಾಣಿಕರಿಗೆ ಸಣ್ಣಪುಟ ಗಾಯಗಳಾಗಿವೆ. ಕಾರಿನಲ್ಲಿದ್ದ ಉಳಿದವರಿಗೆ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಘಟನೆ ಸಂಬಂಧ ಕೆ.ಆರ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹಿಮಾಲಯದ ಮೌಂಟ್ ಕುವಾರಿ ಶಿಖರ ಏರಿದ ಪೌರಕಾರ್ಮಿಕರ ಮಕ್ಕಳು

• ಉದಯವಾಹಿನಿ, ಮೈಸೂರು

ಪೌರಕಾರ್ಮಿಕರು, ಮಾವುತರ ಮಕ್ಕಳು ಹಿಮಾಲಯಕ್ಕೆ ಚಾರಣ ಮಾಡಿ ಮೌಂಟ್ ಕುವಾರಿ ಪಾಸ್ ಏರುವುದರ ಮೂಲಕ ಸಾಧನೆ ಮಾಡಿದ್ದಾರೆ. ಮೈಸೂರಿನ 8 ಪೌರಕಾರ್ಮಿಕರ ಮಕ್ಕಳು, ಮಾವುತರು, ಅರಣ್ಯ ರಕ್ಷಕರು ಮತ್ತು ಇತರ ನಾಗರಿಕರ ತಂಡ ಈ ಸಾಧನೆ ಮಾಡಿದೆ. ಇವರು ಉತ್ತರಾಖಂಡದ 13,990 ಅಡಿ ಎತ್ತರದ ಮೌಂಟ್ ಕುವಾರಿ ಪಾಸ್ ಹತ್ತಿದ್ದಾರೆ. ನಗರದ ಟೈಗರ್ ಅಡ್ವೆಂಚರ್ ಫೌಂಡೇಶನ್, ದಿ ಮೌಂಟೇನ್ ಗೋಟ್ ಸಹಯೋಗದೊಂದಿಗೆ ಈ ಸಾಹಸ ಯಾತ್ರೆ ನಡೆದಿದೆ. ಮರಿಮಲ್ಲಪ್ಪ ಪಿಯು ಕಾಲೇಜಿನ ಉಪನ್ಯಾಸಕ ಅನಿಲ್ ಕುಮಾರ್ ನೇತೃತ್ವದ 24 ಜನರ ತಂಡದಲ್ಲಿ ಪೌರಕಾರ್ಮಿಕರ ಮಕ್ಕಳು, ಹುಣಸೂರು ಅರಣ್ಯ ವಿಭಾಗದ ಮಾವುತರು, ಅರಣ್ಯ ಬೀಟ್ ಗಾರ್ಡ್‌ಗಳು, ಗೃಹಿಣಿಯರು ಮತ್ತು ಶಾಶ್ವತ ಸೇವಾ ಸಮಾಜ ಶಾಲೆಯ ವಿದ್ಯಾರ್ಥಿಗಳು ಪರ್ವತಾರೋಹಣ ಮಾಡಿದ್ದಾರೆ.

### ತಂಗಿ ಪ್ರೀತಿಗೆ ಅಣ್ಣನೇ ಸಪೋರ್ಟ್ ಬುದ್ಧಿ ಹೇಳಿದ ತಂದೆಯನ್ನೇ ಕೊಂದ

• ಉದಯವಾಹಿನಿ, ತುಮಕೂರು

ಕುಣಿಗಲ್ ಐಸ್ಕ್ರೀಂ ಫ್ಯಾಕ್ಟರಿ ಮಾಲೀಕನ ಸಾವು ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದೆ. ಬೈದು ಬುದ್ದಿಮಾತು ಹೇಳಿದ ತಂದೆಯನ್ನೇ ಮಗ ಹತ್ಯೆ ಮಾಡಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಹೆಬ್ಬೂರಿನ ತಿಮ್ಮಸಂದ್ರ ಗ್ರಾಮದ ನಿವಾಸಿಯಾಗಿದ್ದ ಐಸ್ಕ್ರೀಂ ಫ್ಯಾಕ್ಟರಿ ಮಾಲೀಕ ನಾಗೇಶ್ (58) ಇದೇ ತಿಂಗಳ 10 ರಂದು ಸಾವನಪ್ಪಿದ್ದರು. ಕರೆಂಟ್ ಶಾಕ್‌ನಿಂದ ಫ್ಯಾಕ್ಟರಿಯಲ್ಲಿ ಮೃತಪಟ್ಟಿದ್ದಾರೆಂದು ಬಿಂಬಿಸಲಾಗಿತ್ತು. ಈ ಸಂಬಂಧ ಕುಣಿಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆದರೆ, ಪೊಲೀಸ್ ತನಿಖೆ ವೇಳೆ ಇದು ಅಸಹಜ ಸಾವಲ್ಲ, ಬದಲಾಗಿ ಕೊಲೆ ಎಂಬುದು ಗೊತ್ತಾಗಿದೆ. ಸದ್ಯ ಸಿಸಿಟಿವಿ ಆಧರಿಸಿ ತನಿಖೆ ಆರಂಭಿಸಿದ ಪೊಲೀಸರಿಗೆ, ಮಗನಿಂದಲೇ ಹತ್ಯೆ ನಡೆದಿರುವುದು ತಿಳಿದುಬಂದಿದೆ. ಫ್ಯಾಕ್ಟರಿಯಲ್ಲಿ ಇಟ್ಟಿದ್ದ ಹಣವನ್ನು ನಾಗೇಶ್ ಅವರ ಪುತ್ರ ಸೂರ್ಯ ತೆಗೆದುಕೊಳ್ಳುತ್ತಿದ್ದ. ತಂದೆಗೆ ಕಾಣದಂತೆ ಪದೇ ಪದೇ ಹಣ ತೆಗೆದುಕೊಳ್ಳುತ್ತಿದ್ದ. ಇದು ನಾಗೇಶ್‌ಗೆ ಗೊತ್ತಾದ ಬಳಿಕ ಮಗನ ಜೊತೆ ಜಗಳವಾಯಿತು. ಇನ್ನೊಂದೆಡೆ ಸೂರ್ಯನ ತಂಗಿಯನ್ನ ಲವ್ ಸಂಜಯ್ ಎಂಬಾತ ಪ್ರೀತಿ ಮಾಡುತ್ತಿದ್ದ. ಸಂಜಯ್ ಲವ್‌ಗೆ ಸೂರ್ಯನೇ ಸಪೋರ್ಟ್ ಮಾಡಿದ್ದ. ಈ ವಿಚಾರಕ್ಕೂ ನಾಗೇಶ್ ವಿರೋಧ ವ್ಯಕ್ತಪಡಿಸಿದ್ದರು. ಸಂಜಯ್ ಮನೆಗೆ ಬರುವುದಕ್ಕೆ ನಾಗೇಶ್ ವಿರೋಧ ವ್ಯಕ್ತಪಡಿಸಿದ್ದರು. ಒಮ್ಮೆ ಮನೆ ಬಳಿ ಬಂದಾಗ ಎಚ್ಚರಿಕೆಯನ್ನೂ ನೀಡಿದ್ದರು.

ನಾಗೇಶ್ ಹತ್ಯೆಗೆ ಎರಡು ಬಾರಿ ಸೂರ್ಯ ಹಾಗೂ ಸಂಜಯ್ ಕೊಲೆಗೆ ಯತ್ನಿಸಿದ್ದರು. ಒಂದು ಸಲ ಅಪಘಾತ ಮಾಡಿಸಿ ಕೊಲೆ ಯತ್ನಿಸಿದ್ದರು. ಅಪಘಾತದಲ್ಲಿ ನಾಗೇಶ್ ಬಚಾವ್ ಆಗಿದ್ದರು. ಚಿತ್ರದುರ್ಗದಲ್ಲಿ ನಾಗೇಶ್ ಮೇಲೆ ಹಲ್ಲೆನಡೆಸಲಾಗಿತ್ತು. ಅಲ್ಲಿಯೂ ನಾಗೇಶ್ ಬಚಾವ್ ಆಗಿದ್ದರು. ಇದೀಗ ಫ್ಯಾಕ್ಟರಿಯಲ್ಲಿ ಕೊಲೆ ಮಾಡಿದ್ದಾರೆ.

### ಉಚಿತ ಪ್ಲಾಸ್ಟಿಕ್ ಸರ್ಜರಿ

• ಉದಯವಾಹಿನಿ, ತುಮಕೂರು

ಫ್ರೆಂಡ್ಸ್ ವೆಲ್‌ಫೇರ್ ಸಂಸ್ಥೆಯಿಂದ ಬೆಂಗಳೂರಿನ ನಾರಾಯಣ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮೇ 19ರಿಂದ 10 ದಿನ ಸುಟ್ಟ ಗಾಯಗಳಿಗೆ ಉಚಿತವಾಗಿ ಪ್ಲಾಸ್ಟಿಕ್ ಸರ್ಜರಿ ನಡೆಸುವ ಶಿಬಿರ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಪಾಯಲ್ ಇಲ್ಲಿ ಹೇಳಿದರು.

ಅಪಘಾತ, ಆ್ಯಸಿಡ್ ದಾಳಿ, ವಿವಿಧ ಅವಘಡಗಳಿಂದ ಗಾಯ ಮಾಡಿಕೊಂಡವರಿಗೆ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ. 30 ವರ್ಷಗಳಿಂದ ಪ್ಲಾಸ್ಟಿಕ್ ಸರ್ಜರಿ ಶಿಬಿರ ಆಯೋಜಿಸಲಾಗುತ್ತಿದೆ. ಇದುವರೆಗೆ 4,500ಕ್ಕೂ ಹೆಚ್ಚು ಬಡ ಜನರಿಗೆ ಅನುಕೂಲವಾಗಿದೆ. ಅಮೆರಿಕದ ತಜ್ಞ ವೈದ್ಯರು ಶಿಬಿರದಲ್ಲಿ ಭಾಗವಹಿಸಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಜಿಲ್ಲೆಯ ರೋಗಿಗಳಿಗೆ ನಗರದ ಸರ್ವೋದಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮೇ 16ರಂದು ಶಸ್ತ್ರಚಿಕಿತ್ಸಾ ಪೂರ್ವ ಪರೀಕ್ಷೆ ನಡೆಸಲಾಗುವುದು. ಅಗತ್ಯ ಸಂದರ್ಭದಲ್ಲಿ ಬೆಂಗಳೂರಿಗೆ ಕರೆದುಕೊಂಡು ಹೋಗಿ ಶಸ್ತ್ರಚಿಕಿತ್ಸೆಗೆ ಒಳಪಡಿಸಲಾಗುವುದು. ಮಾಹಿತಿಗೆ ಸಂಸ್ಥೆಯ ಮೊ 9880307780 ಸಂಪರ್ಕಿಸಬಹುದು ಎಂದರು. ಫ್ರೆಂಡ್ಸ್ ವೆಲ್‌ಫೇರ್ ಸಂಸ್ಥೆಯ ಮಹೇಂದ್ರ ಜೈನ್, ಮಾರುತಿ ಹಾಜರಿದ್ದರು.

### 1.10 ಲಕ್ಷ ಮೌಲ್ಯದ ಗಾಂಜಾ ಜಪ್ತಿ; ಇಬ್ಬರು ಬಂಧನ

• ಉದಯವಾಹಿನಿ, ತುಮಕೂರು

ನಗರದ ಬಟವಾಡಿ ಕೆಳ ಸೇತುವೆ ಬಳಿ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಿರುವ ಹೊಸ ಬಡಾವಣೆ ಠಾಣೆ ಪೊಲೀಸರು, 1.10 ಲಕ್ಷ ಮೌಲ್ಯದ 1 ಕೆ.ಜಿ 300 ಗ್ರಾಂ ಗಾಂಜಾ ಸೊಪ್ಪು ಜಪ್ತಿ ಮಾಡಿದ್ದಾರೆ. ರಾಜೀವ್‌ಗಾಂಧಿ ನಗರದ ತೌಸಿಫ್ಪಾಷ, ಗುಬ್ಬಿ ಗೇಟ್‌ನ ವಸೀಂ ಅಕ್ರಂ ಬಂಧಿತರು. ಇಬ್ಬರು ಪ್ರತಿ ಸೋಮವಾರ ಬಟವಾಡಿ ಬಳಿ ವ್ಯಕ್ತಿಯೊಬ್ಬರಿಂದ ಗಾಂಜಾ ಖರೀದಿಸುತ್ತಿದ್ದರು.

ಅದನ್ನು ನಗರದ ವಿವಿಧೆಡೆ ಮಾರಾಟ ಮಾಡುತ್ತಿದ್ದರು. ಸೋಮವಾರ ಸಂಜೆ ಬ್ಯಾಗ್‌ನಲ್ಲಿ ಗಾಂಜಾ ಸೊಪ್ಪು ಹಿಡಿದುಕೊಂಡು ನಿಂತಿದ್ದರು. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಇಬ್ಬರನ್ನು ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರು ಪಡಿಸಿದರು. ನ್ಯಾಯಾಲಯವು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಹೊಸ ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅತ್ಯಾಚಾರ ಎಸಗಿ ಮೂಕ ಬಾಲಕಿ ಕೊಲೆ ಆರೋಪ
## ಮನೆಮುಂದೆ ಶವವಿಟ್ಟು ಕುಟುಂಬದವರ ಆಕ್ರಂದನ

• ಉದಯವಾಹಿನಿ, ಬಿಡದಿ


ಉದಯವಾಹಿನಿ ಚಿತ್ರ

ನನ್ನ ಮಗಳ ಮೇಲೆ ಅತ್ಯಾಚಾರ ಎಸಗಿ, ಚಿತ್ರಹಿಂಸೆ ನೀಡಿ ಕ್ರೂರವಾಗಿ ಕೊಲೆ ಮಾಡ ಲಾಗಿದೆ. ಹಂತಕರನ್ನು ಪೊಲೀಸರು ಬಂಧಿಸುವವರೆಗೆ ಆಕೆಯ ಶವಸಂಸ್ಕಾರ ಮಾಡುವುದಿಲ್ಲ. ಹೋಬಳಿಯ ಭದ್ರಾಪುರ ಬಳಿಯ ರೈಲ್ವೆ ಹಳಿ ಪಕ್ಕ ಮೂರು ದಿನಗಳ ಹಿಂದೆ ಅರೆ ನಗ್ನಾವಸ್ಥೆಯಲ್ಲಿ ಶವವಾಗಿ ಪತ್ತೆಯಾದ ಮಾತು ಬಾರದ ಮತ್ತು ಕಿವಿ ಕೇಳಿಸದ ಹಕ್ಕಿಪಿಕ್ಕಿ ಸಮುದಾಯದ ಬಾಲಕಿಯ ತಾಯಿ, ಕುಟುಂಬದವರ ಆಕ್ರೋಶ, ನೋವಿನ ನುಡಿಗಳಿವು. ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ ಅವರು, ಗ್ರಾಮಕ್ಕೆ ಬುಧವಾರ ಭೇಟಿ ನೀಡಿದಾಗ ಕುಟುಂಬದವರು, ಗ್ರಾಮಸ್ಥರು ತಮ್ಮ ನೋವು ತೋಡಿಕೊಂಡರು. ತಮ್ಮ ಶೀಟಿನ ಮನೆ ಮುಂದೆ ಮಗಳ ಶವವನ್ನು ಇಟ್ಟುಕೊಂಡು, ಪೊಲೀಸರು ಯಾವಾಗ ಹಂತಕರನ್ನು ಬಂಧಿಸುತ್ತಾರೊ, ಯಾಕಾಗಿ ಪುತ್ರಿಯನ್ನು ಕೊಲೆ ಮಾಡಲಾಗಿದೆ ಎಂಬ ಕಾರಣ ತಿಳಿ ಯಲು ಅನ್ನ, ನೀರು, ನಿದ್ರೆ ಬಿಟ್ಟು ಕುಟುಂಬ ಕಾಯುತ್ತಿದೆ. ಅದಾಗಲೇ ಊದಿಕೊಂಡಿರುವ ಶವದ ದುರ್ನಾತ ಲೆಕ್ಕಿಸದೆ, ಶವದ ಎದುರು ಬೆಂಕಿ ಹಚ್ಚಿ ರಾತ್ರಿಯಿಡೀ ಬಾಲಕಿ ಮನೆ ಬಳಿ ಕಾವಲು ಕುಳಿತ ಊರಿನವರು ಸಹ ತಮ್ಮೂರ ಹುಡುಗಿಯ ಅನ್ಯಾಯದ ಸಾವಿಗೆ ವಿಧಿ ಯನ್ನು ಶಪಿಸುತ್ತಾ, ನ್ಯಾಯದ ನಿರೀಕ್ಷೆಯಲ್ಲಿದ್ದಾರೆ. ಪೊಲೀಸರು, ಅಧಿಕಾರಿಗಳು, ರಾಜಕಾರಣಿಗಳು, ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು, ಮಾಧ್ಯಮದವರು ಸೇರಿದಂತೆ ಯಾರೇ ಊರಿಗೆ ಹೋದರೂ, ನಮ್ಮೂರ ಹುಡುಗಿ ಸಾವಿಗೆ ನ್ಯಾಯ ಕೊಡಿಸಿ ಸಾರ್... ಎಂದು ಕುಟುಂಬದವರು, ಊರಿ ನವರು ಅಂಗಲಾಚುತ್ತಿದ್ದಾರೆ.

**ವರದಿ ಬರಲಿ**

ಮಗಳ ಮೇಲೆ ಅತ್ಯಾಚಾರವಾಗಿದೆ ಎಂದು ಹೇಳಿದರೂ ಪೊಲೀಸರು ನಂಬುತ್ತಿಲ್ಲ. ಮರಣೋತ್ತರ ಪರೀಕ್ಷೆ ವರದಿ ಬಂದರೆ ಗೊತ್ತಾಗುತ್ತದೆ ಎನ್ನುತ್ತಿದ್ದಾರೆ. ಆದರೆ, ನಿನ್ನೆ ರಾಜರಾಜೇಶ್ವರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದರೂ, ಇನ್ನೂ ವರದಿ ಸಿಕ್ಕಿಲ್ಲ ಎನ್ನುತ್ತಿದ್ದಾರೆ. ವರದಿ ಬಂದು ಯಾವ ರೀತಿ ಕೊಲೆ ಮಾಡಿದ್ದಾರೆ? ಅತ್ಯಾಚಾರ ಆಗಿದೆಯೇ ಇಲ್ಲವೊ ಎಂದು ಖಚಿತವಾಗಿ ಹೇಳುವವರೆಗೆ ನಾವು ಮಗಳನ್ನು ಅಂತ್ಯಸಂಸ್ಕಾರ ಮಾಡುವುದಿಲ್ಲ ಎಂದು ಪಟ್ಟು ಹಿಡಿದರು.

# ವಿಶೇಷಚೇತನರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿ: ಸಿಇಒ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ವಿಶೇಷ ಚೇತನರಿಗಾಗಿ ಸರ್ಕಾರ ನೀಡುವ ಕೌಶಲ, ಉದ್ಯೋಗ ಸೇರಿದಂತೆ ಹಲವು ಸೌಲಭ್ಯಗಳನ್ನು ತಲುಪಿಸಬೇಕು. ವಿಶೇಷ ಚೇತನರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್. ನಂದಿನಿ ಅವರು ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಆಯೋಜಿಸಿದ್ದ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016'ರ ಅನುಷ್ಠಾನ ಕುರಿತು ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಅನುಷ್ಠಾನ ಅಧಿಕಾರಿಗಳು, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಮತ್ತು ಸ್ವಯಂಸೇವಾ ಸಂಸ್ಥೆಗಳ ಮುಖಂಡರೊಂದಿಗೆ ಸಮಾಲೋಚನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮಕ್ಕಳಿಗಾಗಿ ಏರ್ಪಡಿಸಲಾಗಿರುವ ಉಚಿತ ಬೇಸಿಗೆ ಶಿಬಿರದಲ್ಲಿ ಸುಮಾರು 12,000 ಮಕ್ಕಳು ಪಾಲ್ಗೊಂಡಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿ ಎಂದು ಸಂತಸ ವ್ಯಕ್ತಪಡಿಸಿದರು. ಮಕ್ಕಳ ನಂತರ ವಿಶೇಷ ಚೇತನ ಸಮುದಾಯ ಅಭಿವೃದ್ಧಿ ಹೊಂದಬೇಕೆನ್ನುವುದು ನಮ್ಮ ಆಶಯ. ಈ ನಿಟ್ಟಿನಲ್ಲಿ ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯಿತಿ ಅಧಿಕಾರಿಗಳು ಸಹಕರಿಸಬೇಕು ಎಂದು ತಿಳಿಸಿದರು. ಅಂಗವಿಕಲರ ಆಯೋಗದ ಆಯುಕ್ತ ದಾಸ್ ಸೂರ್ಯವಂಶಿ ಮಾತನಾಡಿ, ರಾಜ್ಯದಲ್ಲಿಯೇ ಮೊದಲ ಬಾರಿಗೆ ಜಿಲ್ಲಾ, ತಾಲ್ಲೂಕು ಮತ್ತು ಪಂಚಾಯಿತಿ ಮಟ್ಟದ ಅಧಿಕಾರಿಗಳು ಒಟ್ಟಾಗಿ ವಿಶೇಷಚೇತನರ ಏಳಿಗೆಗಾಗಿ ಭಾಗಿಯಾಗಿರುವುದು ಸಂತೋಷದ ವಿಷಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮಂಡ್ಯ ಜಿಲ್ಲೆ ಮಹಿಳಾ ಅಭಿವೃದ್ಧಿ ಗಾಗಿ, ಮಕ್ಕಳ ಅಭಿವೃದ್ಧಿಗಾಗಿ, ಮತ್ತು ವಿಶೇಷ ಚೇತನರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಲ್ಲಾ ಅಭಿವೃದ್ಧಿ ಹಂತದಲ್ಲೂ ಮಂಡ್ಯ ಜಿಲ್ಲೆ ಇತಿಹಾಸ ಸೃಷ್ಟಿಸುತ್ತದೆ ಎಂದರು.

**ಪೌಷ್ಟಿಕ ಆಹಾರ ಸೇವಿಸಿ:** ಅಪೌಷ್ಟಿಕತೆಯಿಂದ ಮಗು ಅಂಗವೈಕಲ್ಯ ಸೇರಿದಂತೆ ಇನ್ನಿತರೆ ರೋಗಗಳಿಗೆ ಒಳಗಾಗುವ ಸಂಭವವಿರುತ್ತದೆ. ಮಹಿಳೆಯರಿಗೆ ವಿಶೇಷ ಪೋಷಕಾಂಶ ಆರೈಕೆ, ವ್ಯಾಕ್ಸಿನ್ ಒದಗಿಸುವಲ್ಲಿ ಮಹಿಳಾ, ಆರೋಗ್ಯ ಇಲಾಖೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಿಇಒ ಕೆ.ಆರ್.ನಂದಿನಿ ಸಲಹೆ ನೀಡಿದರು.

ಮಂಡ್ಯದಲ್ಲಿ ಮೊದಲ ಬಾರಿಗೆ ವಿಕಲಚೇತನರ ವಿದ್ಯಾಭ್ಯಾಸಕ್ಕೆ ಅವರ ಜ್ಞಾನ ಭಂಡಾರಕ್ಕೆ ಅನುಕೂಲವಾಗಲು ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲೂ ವಿಕಲಚೇತನರಿಗಾಗಿಯೇ ಗ್ರಂಥಾಲಯಗಳನ್ನು ತೆರೆಯಲು ನಿರ್ಧರಿಸಿದ್ದು ಅದರ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

# ಗುಣಮಟ್ಟದ ರಸ್ತೆ ಕಾಮಗಾರಿ ಮಾಡಲು ಮನವಿ

• ಉದಯವಾಹಿನಿ, ಸೋಮವಾರಪೇಟೆ


ಉದಯವಾಹಿನಿ ಚಿತ್ರ

ಮಾಗಡಿ - ಜಾಲ್ಪುರು ರಾಜ್ಯ ಹೆದ್ದಾರಿ 85 ರ ಅಲೆಕಟ್ಟೆ - ತೋಳುರುಶೆಟ್ಟಳ್ಳಿ - ಕೂತಿ ಮಾರ್ಗ ರಸ್ತೆಯ ಸುಮಾರು 20 ಕೋಟಿ ವೆಚ್ಚದ ರಸ್ತೆ ವಿಸ್ತರಣೆ, ಡಾಂಬರೀಕರಣ ಕೆಲಸ ತಡವಾಗುತ್ತಿರುವ ಬಗ್ಗೆ ತಾಲ್ಲೂಕು ಅಭಿವೃದ್ಧಿ ಹೋರಾಟ ಸಮಿತಿ ಹಾಗೂ ಕೂತಿ, ತೋಳೂರುಶೆಟ್ಟಳ್ಳಿ ಗ್ರಾಮಸ್ಥರ ಸಮ್ಮುಖದಲ್ಲಿ ಸೋಮವಾರ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲ ಎಂಜಿನಿಯರ್ ಕಚೇರಿಯಲ್ಲಿ ಸಭೆ ನಡೆಯಿತು. ಸಮಿತಿಯ ಅರುಣ್ ಕೊತ್ನಳ್ಳಿ ಮಾತನಾಡಿ, ಕೂತಿ ಮಾರ್ಗದ ಅಲೆಕಟ್ಟೆ - ಹರಪಳ್ಳಿವರೆಗೆ 8 ಕಿ.ಮೀ ರಸ್ತೆಯನ್ನು ಜನವರಿ ತಿಂಗಳಿನಲ್ಲಿ ಮ್ಯಾಪಿಂಗ್ ಮಾಡಲಾಗಿದೆ. ಆದರೆ, 2.3 ಕಿ.ಮೀ ರಸ್ತೆಯಲ್ಲಿ ಮಾತ್ರ ಕೆಲಸ ನಡೆಯುತ್ತಿದೆ. ತಕ್ಷಣದಿಂದಲೆ ಇದನ್ನು ನಿಲ್ಲಿಸಿ ಯೋಜನಾ ವರದಿಯಂತೆ ಕಾಮಗಾರಿ ಮಾಡಬೇಕು ಎಂದು ಅಗ್ರಹಿಸಿದರು. ಸಾಮಾಜಿಕ ಕಾರ್ಯಕರ್ತ ಬಗ್ಗನ ಅನಿಲ್ ಮಾತನಾಡಿ, ರಸ್ತೆ ಸರಿಯಾಗಿ ವಿಸ್ತರಣೆ ಮಾಡಿಲ್ಲ. ರಸ್ತೆಯನ್ನು ಸಮತಟ್ಟು ಮಾಡದೇ ಸರಿಯಾದ ಪ್ರಮಾಣದಲ್ಲಿ ವೆಟ್ ಮಿಕ್ಸ್ ಹಾಕದೆ ಕಳಪೆಯ ವೆಟ್ ಮಿಕ್ಸ್ ಹಾಕಿ ಕೆಲಸ ಮಾಡಲಾಗುತ್ತಿದೆ ಎಂದು ದೂರಿದರು.

ಕಾರ್ಯಪಾಲ ಎಂಜಿನಿಯರ್ ವೆಂಕಟೇಶ್ ನಾಯಕ ಮಾತನಾಡಿ, ನಡೆಯುತ್ತಿರುವ ಕಾಮಗಾರಿಯನ್ನು ಪರಿಶೀಲನೆ ನಡೆಸಲಾಗಿದೆ. ತಕ್ಷಣದಿಂದಲೆ ಸರಿಪಡಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ. ಮೇ 14 ರಂದು ಗುತ್ತಿಗೆದಾರರನ್ನು ಸ್ಥಳಕ್ಕೆ ಕರೆಸಿ ಸ್ಥಳೀಯ ಗ್ರಾಮಸ್ಥರ ಸಮುಖದಲ್ಲಿ ಚರ್ಚೆ ನಡೆಸಿ ಪರಿಶೀಲನೆ ಮಾಡಲಾಗುವುದು ಎಂದರು.

ಆದರ್ಶ, ಜೀವನ್, ಅಧ್ಯಕ್ಷ ಎಚ್.ಎಂ.ಜಯರಾಮ್. ಕೆ.ಡಿ.ಗಿರೀಶ್, ಯಾದವ್ ಕುಮಾರ್, ಕೆ.ಸಿ.ಉದಯ್ ಕುಮಾರ್, ಸಿ.ಕೆ.ಶಿವಕುಮಾರ್, ಇನ್ನಿತರರಿದ್ದರು.

# ಹೇಮಾವತಿ ನೀರಿನ ವಿಚಾರದಲ್ಲಿ ಅನ್ಯಾಯ: ಆರೋಪ

• ಉದಯವಾಹಿನಿ, ಕುಣಿಗಲ್


ಉದಯವಾಹಿನಿ ಚಿತ್ರ

ತಾಲ್ಲೂಕಿಗೆ ಹೇಮಾವತಿ ನೀರಿನ ವಿಚಾರದಲ್ಲಿ 25 ವರ್ಷದಿಂದ ಅನ್ಯಾಯವಾಗುತ್ತಿದೆ. ಇದನ್ನು ಸರಿಪಡಿಸಲು ಲಿಂಕ್ ಕೆನಾಲ್ ಅನುಷ್ಠಾನವಾಗುತ್ತಿದೆ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಮತ್ತು ಶಾಸಕ ಡಾ.ರಂಗನಾಥ್ ಹೇಳುತ್ತಿದ್ದಾರೆ. ಆದರೆ ಅವರಿಂದಲೇ ತಾಲ್ಲೂಕಿಗೆ ಹೇಮಾವತಿ ವಿಚಾರದಲ್ಲಿ ಅನ್ಯಾಯವಾಗಿದೆ ಎಂದು ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಬಿ.ಎನ್.ಜಗದೀಶ್ ದೂರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1983ರ ನಂತರ ಜಿಲ್ಲೆಗೆ ಹೇಮಾವತಿ ನೀರು ಹರಿಯಲು ಜೆಡಿಎಸ್ ವರಿಷ್ಠ ಎಚ್.ಡಿ.ದೇವೆಗೌಡ ಪ್ರಮುಖ ಕಾರಣಕರ್ತರು. ನಂತರದಲ್ಲಿ ಅಂದು ಜನತಾ ಪಕ್ಷದಲ್ಲಿದ್ದ ವೈ.ಕೆ.ರಾಮಯ್ಯ ಅವರ ಹೋರಾಟವೂ ಪ್ರಮುಖ ಪಾತ್ರವಹಿಸಿದೆ. ನಂತರ ದಿನಗಳಲ್ಲಿ ತಾಲ್ಲೂಕಿನ ಶಾಸಕರ ಹೋರಾಟದ ಫಲವಾಗಿ ನೀರು ಬಂದಿದೆ ಎಂದರು. ಹೇಮಾವತಿ ನಾಲಾ ಹೋರಾಟದ ಇತಿಹಾಸ ಅರಿಯದ ಡಿ.ಕೆ.ಸುರೇಶ ಮತ್ತು ಡಾ. ರಂಗನಾಥ್ ಜೆಡಿಎಸ್ ಪಕ್ಷದವರ ಬಗ್ಗೆ ಟೀಕೆ ಮಾಡುತ್ತಿದ್ದಾರೆ. ಕುಣಿಗಲ್ ತಾಲ್ಲೂಕಿಗೆ ಡಿ.ಕೆ. ಸುರೇಶ್ ಸಂಸದರಾಗಿ ಮತ್ತು ಡಾ.ರಂಗನಾಥ್ ಶಾಸಕರಾಗಿ ಆಯ್ಕೆಯಾದ ನಂತರ ಹೇಮಾವತಿ ನೀರಿನ ವಿಚಾರದಲ್ಲಿ ಅನ್ಯಾಯವಾಗಿದೆ ಎಂದರು.

ಹೇಮಾವತಿ ನಾಲಾ ಮೂಲ ಯೋಜನೆ ಪ್ರಕಾರ 240 ಕಿ.ಮೀ. ಉದ್ದದ ನಾಲಾ ಕಾಮಗಾರಿಯಲ್ಲಿ 198 ಕಿ.ಮೀ. ಮಾತ್ರ ನಿರ್ಮಾಣವಾಗಿದೆ. ಹತ್ತು ವರ್ಷಗಳಿಂದ ಒಂದು ಮೀಟರ್ ಕಾಲುವೆ ಕಾಮಗಾರಿ ಸಹ ಸರಿಯಾಗಿ ನಡೆದಿಲ್ಲ. ಮೂಲ ಯೋಜನೆ ಕಾಮಗಾರಿ ಪೂರ್ಣಗೊಳಿಸಿ ನೀರನ್ನು ಹರಿಸಲು ಗಮನಹರಿಸದೆ ಸಾವಿರ ಕೋಟಿಯ ಲಿಂಕ್ ಕೆನಾಲ್ ಕೈಗೆತ್ತಿಗೊಂಡಿದ್ದಾರೆ. ನಾಲಾ ನಿರ್ಮಾಣಕ್ಕೆ ಭೂಸ್ವಾಧೀನ ಪಡಿಸಿಕೊಂಡಿರುವ ರೈತರಿಗೆ ಪರಿಹಾರಧನ ವಿತರಿಸದ ಕಾರಣ ರೈತರು ನಾಲೆ ಮುಚ್ಚಿ ವ್ಯವಸಾಯ ಮಾಡುತ್ತಿದ್ದಾರೆ. ಇದರಿಂದಾಗಿ ಸಾರ್ವಜನಿಕರ ತೆರಿಗೆ ಹಣ ವ್ಯಯವಾಗುತ್ತಿದೆ ಎಂದು ಹೇಳಿದರು.

> ಶ್ರೀರಂಗ ಏತ ನೀರಾವರಿ ಯೋಜನೆಯಲ್ಲಿ ನೆಪಮಾತ್ರಕ್ಕೆ ತಾಲ್ಲೂಕಿನ ಹುತ್ರಿದುರ್ಗ ಹೋಬಳಿಯ 17 ಕೆರೆಗಳನ್ನು ತೋರಿಸಿ ಮಾಗಡಿ ತಾಲ್ಲೂಕಿನ 83 ಕೆರೆಗಳಿಗೆ ನೀರು ಹರಿಸುವ ಯೋಜನೆಯಾಗಿದೆ. ಜಿಲ್ಲೆಯಲ್ಲಿ ವ್ಯಾಪಕ ಪ್ರತಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಎತ್ತಿನಹೊಳೆ ಯೋಜನೆ ಮೂಲಕ ಮಾಗಡಿಗೆ ನೀರು ತೆಗೆದುಕೊಂಡು ಹೋಗುವುದಾಗಿ ತಿಳಿಸಿದ್ದಾರೆ ಎಂದರು.

# 17 ಕೋಟಿ ಕಾಮಗಾರಿಗೆ ಗ್ರಹಣ, ಹೊಣೆ ಯಾರು?
## ನಗರೋತ್ಥಾನ ಯೋಜನೆ; ಅವಧಿ ಮುಗಿದರೂ ಹೆಚ್ಚುವರಿ ಸಮಯ ನೀಡಿದರೂ ಆಗಿದ್ದು ಶೇ 30 ಕಾಮಗಾರಿ

• ಉದಯವಾಹಿನಿ, ಕೋಲಾರ

ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಯಡಿ (4ನೇ ಹಂತ) ಕೋಲಾರ ನಗರಸಭೆಯಲ್ಲಿ ಈ 17.26 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಂಡ ಕಾಮಗಾರಿಯ ಅವಧಿ ಮುಗಿದು 9 ತಿಂಗಳಾದರೂ ಶೇ 30 ಕೆಲಸ ಮುಗಿದಿಲ್ಲ. ಇತ್ತ ನಗರಸಭೆಯಿಂದ ಯಾವುದೇ ಕ್ರಮವೂ ಆಗಿಲ್ಲ. ಇದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಕೇವಲ ಪತ್ರ ವ್ಯವಹಾರವಷ್ಟೇ ನಡೆಯುತ್ತಿದ್ದು, ನಗರೋತ್ಥಾನ ಕಾಮಗಾರಿಗೆ ಗ್ರಹಣ ಬಡಿದಿದೆ. ಅರ್ಧಂಬರ್ಧ ಕಾಮಗಾರಿ ನಡೆದಿದ್ದು, ಹೇಳುವವರು ಕೇಳುವವರು ಇಲ್ಲವಾಗಿದ್ದಾರೆ. ಈ ಬಗ್ಗೆ ಜಯನಗರ ವಾರ್ಡ್ ಎಸ್.ಆರ್.ಮುರಳಿಗೌಡ ಸೇರಿದಂತೆ ನಗರಸಭೆಯ ಕೆಲ ಸದಸ್ಯರು ಹಾಗೂ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದು, ಕ್ರಮಕ್ಕೆ ಆಗ್ರಹಿಸಿದ್ದಾರೆ.

35 ವಾರ್ಡ್‌ಗಳಲ್ಲಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿ ಸಂಬಂಧ 2023ರ ಫೆಬ್ರುವರಿ 20ರಂದು ಕಾರ್ಯಾದೇಶ ನೀಡಲಾಗಿತ್ತು. ಕಾಮಗಾರಿಗೆ ಮಾರ್ಚ್ 16ರಂದು ಅಂದಿನ ಶಾಸಕ ಕೆ.ಶ್ರೀನಿವಾಸಗೌಡ, ನಗರಸಭೆ ಅಧ್ಯಕ್ಷೆ ಶ್ವೇತಾ ಶಬರೀಶ್ ಗಾಂಧಿವನದ ಸಮೀಪ ಚಾಲನೆ ನೀಡಿದ್ದರು.

2024ರ ಆಗಸ್ಟ್ 19ರೊಳಗೆ ಅಂದರೆ 18 ತಿಂಗಳ ಅವಧಿಯಲ್ಲಿ ಶೇ 100ರಷ್ಟು ಕಾಮಗಾರಿ ಮುಗಿಸಲು ಗುತ್ತಿಗೆದಾರರಿಗೆ ಗಡುವು ನೀಡಲಾಗಿತ್ತು. ಆದರೆ, ಗಡುವು ಮುಗಿದು 9 ತಿಂಗಳು ಕಳೆದಿದ್ದು, ಶೇ 30ರಷ್ಟು ಕಾಮಗಾರಿಯೂ ಪೂರ್ಣಗೊಂಡಿಲ್ಲ. ಅನೇಕ ಬಾರಿ ನೋಟಿಸ್ ನೀಡಿದ್ದರೂ ಪ್ರಯೋಜನವಾಗಿಲ್ಲ. ಈ ಯೋಜನೆಯಡಿ ಗುತ್ತಿಗೆದಾರರು ಕೈಗೊಳ್ಳದೇ ಇರುವ ಬಾಕಿ ಕಾಮಗಾರಿಗಳಿಗೆ ಹೊಸದಾಗಿ ಅಂದಾಜುಪಟ್ಟಿ ಸಿದ್ಧಪಡಿಸುವಂತೆ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಅಂಬಿಕಾ ಕೋಲಾರ ನಗರಸಭೆ ಪೌರಾಯುಕ್ತ ಪ್ರಸಾದ್ ಅವರಿಗೆ ಕಳೆದ ತಿಂಗಳು ಪತ್ರ ಕೂಡ ಬರೆದಿದ್ದಾರೆ. ಇದಲ್ಲದೇ, ನಿಗದಿಪಡಿಸಿದ 18 ತಿಂಗಳ ಅವಧಿ ಮುಗಿಯುತ್ತಿದ್ದಂತೆ ಟೆಂಡರ್ ರದ್ದುಪಡಿಸಲು ಎರಡು ನೋಟಿಸ್ ಕೂಡ ನೀಡಲಾಗಿದೆ. ಹೆಚ್ಚುವರಿ ಕಾಲಾವಕಾಶ ನೀಡಿ 2024ರ ಡಿಸೆಂಬರ್ 14ರೊಳಗೆ ಕಾಮಗಾರಿ ಮುಗಿಸದಿದ್ದರೆ ಬ್ಯಾಂಕ್ ಗ್ಯಾರಂಟಿ ಮುಟ್ಟುಗೋಲು ಹಾಕಿಕೊಂಡು ಕಪ್ಪು ಪಟ್ಟಿಗೆ ಸೇರಿಸುವ ಎಚ್ಚರಿಕೆಯನ್ನೂ ಗುತ್ತಿಗೆದಾರರಿಗೆ ನೀಡಲಾಗಿದೆ. ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಲು ನಗರಸಭೆಯ ಸಾಮಾನ್ಯ ಸಭೆಯಲ್ಲಿ ನಿರ್ಣಯ ಕೈಗೊಂಡು ಜಿಲ್ಲಾಧಿಕಾರಿಗೆ ಪೌರಾಯುಕ್ತ ಕೂಡ ಪತ್ರ ಬರೆದಿದ್ದಾರೆ.

ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ (4ನೇ ಹಂತ) ಕೋಲಾರ ನಗರಸಭೆಗೆ ವಿವಿಧ ಕಾಮಗಾರಿಗಳಿಗೆ ಒಟ್ಟು 34 ಕೋಟಿ ಕ್ರಿಯಾ ಯೋಜನೆಗೆ ನಗರೋತ್ಥಾನ ರಾಜ್ಯ ಮಟ್ಟದ ಸಮಿತಿಯು 2022ರಲ್ಲಿ ಅನುಮೋದನೆ ನೀಡಿತ್ತು. ಜಿಲ್ಲೆಯ ಮೂರು ನಗರಸಭೆ, ಮೂರು ಪುರಸಭೆ, ಒಂದು ಪಟ್ಟಣ ಪಂಚಾಯಿತಿಗೆ ಒಟ್ಟು 114.75 ಕೋಟಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿತ್ತು. ಒಟ್ಟು 145 ಕೋಟಿ ಅನುದಾನ ಹಂಚಿಕೆಯಾಗಿತ್ತು. ಜಿಲ್ಲೆಯಲ್ಲಿ ಪೌರಾಡಳಿತ ಇಲಾಖೆಯ ಯೋಜನೆಗಳ ಪ್ರಗತಿ ಕುಂಠಿತವಾಗಿರುವ ಬಗ್ಗೆ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿ ಏಕರೂಪ್ ಕೌರ್ ಅಸಮಾಧಾನ ವ್ಯಕ್ತಪಡಿಸಿದ್ದರು. ಶಾಸಕ ಕೊತ್ತೂರು ಮಂಜುನಾಥ್ ಕೂಡ ಸಭೆ ನಡೆಸಿ ಚಾಟಿ ಬೀಸಿದರು.


ಉದಯವಾಹಿನಿ ಚಿತ್ರ

### ಕಪ್ಪುಪಟ್ಟಿ ಮುಟ್ಟುಗೋಲಿಗೆ ಪತ್ರ

ಕಾಮಗಾರಿ ಬೇಗನೇ ಮುಗಿಸಲು ಗುತ್ತಿಗೆದಾರರಿಗೆ ಹಲವು ಬಾರಿ ನೋಟಿಸ್ ಸೂಚನೆಯೊಂದಿಗೆ ಹೆಚ್ಚುವರಿ ಕಾಲಾವಕಾಶ ನೀಡಿದರೂ ಕೆಲಸ ಪೂರ್ಣಗೊಂಡಿಲ್ಲ. ಹೀಗಾಗಿ ಗುತ್ತಿಗೆದಾರರ ಬ್ಯಾಂಕ್ ಗ್ಯಾರಂಟಿ ಮುಟ್ಟುಗೋಲು ಹಾಕಿಕೊಳ್ಳಲು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಬ್ಯಾಂಕ್‌ಗೆ ಪತ್ರ ಬರೆದಿದ್ದಾರೆ. ಅಲ್ಲದೇ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಲು ಪೌರಾಡಳಿತ ನಿರ್ದೇಶನಾಲಯಕ್ಕೆ ಪತ್ರ ಬರೆದಿದ್ದಾರೆ.

### ಕಾನೂನು ಕ್ರಮಕ್ಕೆ ಡಿ.ಸಿಗೆ ಪತ್ರ

ನಿಗದಿತ ಸಮಯಕ್ಕೆ ಕಾಮಗಾರಿ ಮುಗಿಸದ ಗುತ್ತಿಗೆದಾರ ನಾರಾಯಣಸ್ವಾಮಿ ಎಂಬುವರ ಮೇಲೆ ಕಾನೂನು ಪ್ರಕಾರ ಕ್ರಮವಹಿಸುವಂತೆ ಕೋಲಾರ ನಗರಸಭೆ ಪೌರಾಯುಕ್ತ ಪ್ರಸಾದ್ ಜಿಲ್ಲಾಧಿಕಾರಿ ಎಂ.ಆರ್.ರವಿ ಅವರಿಗೆ ಪತ್ರ ಕೂಡ ಬರೆದಿದ್ದಾರೆ. ನಗರಸಭೆ ಸಾಮಾನ್ಯ ಸಭೆಯಲ್ಲಿ ಕೈಗೊಂಡ ನಿರ್ಣಯವನ್ನೂ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# ಮೂಲ ಸೌಲಭ್ಯ ಕಲ್ಪಿಸಲು ಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹಲಗೂರು

ವಿದ್ಯಾರ್ಥಿಗಳು ತಾವು ಕಲಿಯುವ ಶಾಲೆಗಳು ಮತ್ತು ವಾಸಿಸುವ ಸ್ಥಳದಲ್ಲಿ ಮೂಲಸೌಲಭ್ಯಗಳ ಕೊರತೆ ಇದ್ದರೆ ಗ್ರಾಮ ಪಂಚಾಯತಿ ಗಮನಕ್ಕೆ ತನ್ನಿ. ಸ್ಥಳೀಯ ಆಡಳಿತದಿಂದ ಸಮಸ್ಯೆ ನಿವಾರಣೆಗೆ ಶೀಘ್ರ ಕ್ರಮ ಕೈಗೊಳ್ಳಲಾಗುವುದು ಎಂದು ಹಲಗೂರು ಗ್ರಾಮ ಪಂಚಾಯತಿ ಅಧ್ಯಕ್ಷೆ ಶಶಿಕಲಾ ತಿಳಿಸಿದರು.

ಹಲಗೂರಿನ ಕರ್ನಾಟಕ ಪಬ್ಲಿಕ್ ಸ್ಕೂಲ್ ಸಭಾಂಗಣದಲ್ಲಿ ಗ್ರಾಮ ಪಂಚಾಯತಿ ವತಿಯಿಂದ ಬುಧವಾರ ಆಯೋಜಿಸಿದ್ದ ಮಕ್ಕಳ ಗ್ರಾಮ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಿಡಿಒ ಕೆ.ಚೆಂದಿಲ್ ಮಾತನಾಡಿ, ಶಾಲೆಗಳು, ಮನೆಯ ಸುತ್ತಮುತ್ತಲ ಪ್ರದೇಶಗಳಲ್ಲಿ ಮಕ್ಕಳು ಯಾವುದೇ ರೀತಿಯ ತೊಂದರೆಗಳನ್ನು ಎದುರಿಸುತ್ತಿದ್ದರೆ ಸಹಾಯವಾಣಿ 1098ಕ್ಕೆ ಕರೆ ಮಾಡಿ. ಸಂಬಂಧಿಸಿದ ಇಲಾಖೆಯ ವತಿಯಿಂದ ಸೂಕ್ತ ನ್ಯಾಯ ದೊರಕಿಸಲು ಶ್ರಮಿಸಲಾಗುವುದು ಎಂದರು. ಕೆ.ಪಿ.ಎಸ್ ಶಾಲೆಯ ಉಪ ಪ್ರಾಂಶುಪಾಲೆ ಅನುರಾಧ, ಗ್ರಾಮ ಪಂಚಾಯತಿ ಉಪಾಧ್ಯಕ್ಷೆ ಸಿ.ಲತಾ, ಕಾರ್ಯದರ್ಶಿ ಶಿವಕುಮಾರ್, ಬಿಲ್ ಕಲೆಕ್ಟರ್ ಆನಂದ್, ಅರಿವು ಕೇಂದ್ರದ ಮೇಲ್ವಿಚಾರಕ ಶಿವನಂಜು, ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ಕೆ.ಬಿ.ಜಯಶಂಕರ್, ಶೋಭಾ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಕುಡಿದ ಮತ್ತಿನಲ್ಲಿ ಸ್ವಂತ ಮನೆಗೆ ಬೆಂಕಿ ಹಚ್ಚಿದ ವ್ಯಕ್ತಿ; ತಪ್ಪಿದ ಅನಾಹುತ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಉಡುಪಿ

ಕುಡಿದ ಮತ್ತಿನಲ್ಲಿದ್ದ ವ್ಯಕ್ತಿಯೊಬ್ಬ ಮೇ 11 ರಂದು ತನ್ನ ಸ್ವಂತ ಮನೆಗೆ ಬೆಂಕಿ ಹಚ್ಚಿದ್ದಾನೆ. ಮದ್ಯದ ಅಮಲಿನಲ್ಲಿದ್ದ ವ್ಯಕ್ತಿ ಗಲಾಟೆ ಮಾಡಿ ಉಗ್ರ ವರ್ತನೆ ತೋರಿದ್ದರಿಂದ ಆತನ ಕುಟುಂಬ ಸದಸ್ಯರು ಭಯಭೀತರಾಗಿದ್ದರು ಎನ್ನಲಾಗಿದೆ. ಪರಿಸ್ಥಿತಿಯನ್ನು ನಿಭಾಯಿಸಲು ಸಾಧ್ಯವಾಗದ ಕುಟುಂಬ ಸದಸ್ಯರು ಸಮಾಜ ಸೇವಕ ನಿತ್ಯಾನಂದ ಒಳಕಾಡು ಅವರ ಸಹಾಯ ಕೋರಿದರು. ತಕ್ಷಣ ಸ್ಪಂದಿಸಿದ ನಿತ್ಯಾನಂದ ಒಳಕಾಡು ಸ್ಥಳಕ್ಕೆ ಧಾವಿಸಿ ಅಗ್ನಿಶಾಮಕ ದಳಕ್ಕೆ ಬೆಂಕಿಯ ಬಗ್ಗೆ ಮಾಹಿತಿ ನೀಡಿದ್ದಾರೆ.

ತಕ್ಷಣ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದವರು ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇದರಿಂದಾಗಿ ಭಾರೀ ಅಗ್ನಿ ದುರಂತವೊಂದು ತಪ್ಪಿದಂತಾಗಿದೆ.

ಘಟನೆಯ ನಂತರ, ಸಮಾಜ ಸೇವಕ ನಿತ್ಯಾನಂದ ಒಳಕಾಡು ಅವರು ಕುಡಿದಿದ್ದ ವ್ಯಕ್ತಿಯನ್ನು ಸಮಾಧಾನಪಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ವ್ಯಸನ ಮುಕ್ತಿ ಕೇಂದ್ರಕ್ಕೆ ದಾಖಲಿಸಿದ್ದಾರೆ.

### ಆಡಳಿತ ಪಕ್ಷದ ಬಹುತೇಕ ಸದಸ್ಯರ ಗೈರು ಹಾಜರಿಯ ನಡುವೆ ನಡೆದ ನಗರಸಭೆ ವಿಶೇಷ ಸಭೆ

# 8.96 ಕೋಟಿ ಕಾಮಗಾರಿಗೆ ಅನುಮೋದನೆ

• ಉದಯವಾಹಿನಿ, ಚಿಕ್ಕಮಗಳೂರು



ಉದಯವಾಹಿನಿ ಚಿತ್ರ

**ತೆರಿಗೆ ಪಾವತಿಸಲು ಹಿಂದೇಟು**

ಎಸ್‌ಎಫ್‌ಸಿ ಮತ್ತು ನಗರಸಭೆ ನಿಧಿಯಡಿ 8.96 ಕೋಟಿ ಮೊತ್ತದ ಕಾಮಗಾರಿಗಳಿಗೆ ಆಡಳಿತ ಪಕ್ಷದ ಬಹುತೇಕ ಸದಸ್ಯರ ಗೈರು ಹಾಜರಿಯ ನಡುವೆ ನಡೆದ ನಗರಸಭೆ ವಿಶೇಷ ಸಾಮಾನ್ಯ ಸಭೆಯಲ್ಲಿ ಅನುಮೋದನೆ ದೊರಕಿತು. ನಗರಸಭೆ ಅಧ್ಯಕ್ಷೆ ಸುಜಾತಾ ಶಿವಕುಮಾರ್ ಅಧ್ಯಕ್ಷತೆಯಲ್ಲಿ ವಿಶೇಷ ಸಾಮಾನ್ಯ ಸಭೆ ಬುಧವಾರ ನಡೆಯಿತು. ಕಾಮಗಾರಿಗಳ ಪಟ್ಟಿಗೆ ಸಭೆ ಅನುಮೋದಿಸಿತು.

ಆಡಳಿತ ಪಕ್ಷದ ಬಿಜೆಪಿಯ 17 ಸದಸ್ಯರ ಪೈಕಿ ಆರಂಭದಲ್ಲಿ 6 ಸದಸ್ಯರು, ವಿರೋಧ ಪಕ್ಷಗಳ ಬಹುತೇಕ ಸದಸ್ಯರು ಹಾಜರಿದ್ದರು.

ವಿವಿಧ ಕಾಮಗಾರಿಗಳ ಅನುಮೋದನೆಗೆ ಕರೆದಿರುವ ವಿಶೇಷ ಸಾಮಾನ್ಯ ಸಭೆಯಲ್ಲಿ ಬಹುತೇಕ ಕಾಮಗಾರಿಗಳು ಆಡಳಿತ ಪಕ್ಷದ ಸದಸ್ಯರ ವಾರ್ಡ್‌ಗಳಲ್ಲಿವೆ. ಇವುಗಳು ಅನುಮೋದನೆ ನೀಡಲು ನಾವೇಕೆ ಸಭೆಗೆ ಹಾಜರಾಗಬೇಕು' ಎಂದು ಪ್ರಶ್ನಿಸಿದ ಕಾಂಗ್ರೆಸ್ ಸದಸ್ಯರು ಹೊರ ನಡೆದರು. ಕೋರಂ(ಸದಸ್ಯ ಬಲ) ಅಭಾವ ಇರುವುದರಿಂದ ಸಭೆ ಆರಂಭಿಸಲು ಸಾಧ್ಯವಾಗದೆ ಅಧ್ಯಕ್ಷೆ ಸುಜಾತಾ ಶಿವಕುಮಾರ್ ಮತ್ತು ಉಪಾಧ್ಯಕ್ಷೆ ಅನು ಮಧುಕರ್ ವೇದಿಕೆಯಲ್ಲಿ ಕುಳಿತಿದ್ದರು. ಹಂಗಾಮಿ ಆಯುಕ್ತರಾಗಿರುವ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಲೋಕೇಶ್ ಅವರು ಕಾಂಗ್ರೆಸ್ ಸದಸ್ಯರ ಮನವೊಲಿಸಿ ವಾಪಸ್ ಕರೆ ತಂದರು. ಬಳಿಕ ಸಭೆ ಆರಂಭವಾಯಿತು.

'ವಿಶೇಷ ಸಾಮಾನ್ಯ ಸಭೆಯ ಅಜೆಂಡಾವನ್ನು ಸದಸ್ಯರಿಗೆ ಮೂರು ದಿನ ಮುಂಚಿತವಾಗಿಯೇ ನೀಡಬೇಕು. ಆದರೆ, ಎಲ್ಲರಿಗೂ ಸಂಜೆ ದೊರಕಿದೆ. ಅಜೆಂಡಾದಲ್ಲಿ ಏನಿದೆ ಎಂಬುದನ್ನು ಓದಲು ಸಹ ಸಾಧ್ಯವಾಗಿಲ್ಲ. ಸಭೆ ಮುಂದೂಡಬೇಕು' ಎಂದು ಕಾಂಗ್ರೆಸ್ ಸದಸ್ಯರು ಪಟ್ಟು ಹಿಡಿದರು. 'ಮಳೆಯ ಕಾರಣದಿಂದ ಸಭೆಯ ಅಜೆಂಡಾಗಳನ್ನು ಸದಸ್ಯರ ಮನೆಗಳಿಗೆ ತಲುಪಿಸುವುದು ಕಷ್ಟವಾಗಿದೆ. ಮುಂದಿನ ದಿನಗಳಲ್ಲಿ ಈ ರೀತಿ ಆಗದಂತೆ ನೋಡಿಕೊಳ್ಳಲಾಗುವುದು.

ಸಭೆ ಮುಂದುವರಿಸಲು ಅನುವು ಮಾಡಬೇಕು ಎಂದು ಲೋಕೇಶ್ ಮನವಿ ಮಾಡಿದರು.

**ಹಣ ಕೊಟ್ಟರೆ ಚಲನ್: ಆರೋಪ**

ಆಸ್ತಿ ತೆರಿಗೆ ಪಾವತಿಸಲು ಬರುವ ಜನ ಲಂಚ ಕೊಟ್ಟು ಚಲನ್ ತೆಗೆದುಕೊಳ್ಳಬೇಕಾದ ಸ್ಥಿತಿ ಇದೆ. ಹಣ ಕೊಟ್ಟವರಿಗೆ ಮಾತ್ರ ಚಲನ್ ಸಿಗುತ್ತಿದೆ. ಸದಸ್ಯರೇ ಬಂದರೂ ಗಂಟೆ ಗಟ್ಟಲೆ ಕಾಯಬೇಕಾದ ಸ್ಥಿತಿ ಇದೆ. ಆಸ್ತಿ ತೆರಿಗೆ ಪಾವತಿಸಲು ಜನ ಕಚೇರಿಗೆ ಬರುವುದೇ ಹೆಚ್ಚು. ಅವರನ್ನು ಕಾಯಿಸಿ ತೆರಿಗೆ ಪಾವತಿಸಲು ಹಿಂದೇಟು ಹಾಕುವಂತೆ ಮಾಡಲಾಗುತ್ತಿದೆ ಎಂದು ಸದಸ್ಯ ವರಸಿದ್ಧಿ ವೇಣುಗೋಪಾಲ್ ಆರೋಪಿಸಿದರು. ಇದನ್ನು ಸರಿಪಡಿಸಬೇಕು ಎಂದು ಆಗ್ರಹಿಸಿದರು. 'ನಗರೋತ್ಥಾನ ಯೋಜನೆಯಡಿ ಟೆಂಡರ್ ಪೂರ್ಣಗೊಂಡು 30 ತಿಂಗಳಾಗಿದೆ. ಈವರೆಗೆ ಕಾಮಗಾರಿ ನಿರ್ವಹಿಸಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿ ಅವರ ಗಮನಕ್ಕೆ ತರಲಾಗಿದೆ. ಕೂಡಲೇ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ನಗರಕ್ಕೆ ಇದೇ 18ರಂದು ಭೇಟಿ ನೀಡುವ ಜಿಲ್ಲಾ ಉಸ್ತುವಾರಿ ಸಚಿವರಿಗೆ ಕಪ್ಪು ಬಾವುಟ ಪ್ರದರ್ಶಿಸಬೇಕಾಗುತ್ತದೆ' ಎಂದು ಎಚ್ಚರಿಸಿದರು.

**ಕಟ್ಟಡ ಯೋಜನೆ ಉಲ್ಲಂಘಿಸಿದ್ದರೆ ಒ.ಸಿ ಇಲ್ಲ**

ಮಂಜೂರಾದ ಕಟ್ಟಡ ಯೋಜನೆಯನ್ನು ಉಲ್ಲಂಘಿಸಿ ಕಟ್ಟಡ ನಿರ್ಮಿಸಿದ್ದರೆ ಅಂತಹ ಮನೆಗಳ ಮಾಲೀಕರಿಗೆ ಸ್ವಾಧೀನಾನುಭವ ಪತ್ರ (ಒ.ಸಿ) ನೀಡುವುದಿಲ್ಲ ಎಂದು ಹಂಗಾಮಿ ಆಯುಕ್ತ ಲೋಕೇಶ್ ತಿಳಿಸಿದರು. ಒ.ಸಿ ನೀಡದಿರುವುದರಿಂದ ವಿದ್ಯುತ್ ಸಂಪರ್ಕ ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಸಾವಿರಾರು ಮನೆಗಳ ನಾಗರಿಕರು ತೊಂದರೆ ಅನುಭವಿಸುತ್ತಿದ್ದಾರೆ. ಒ.ಸಿ ನೀಡಲು ಏನು ತೊಂದರೆ' ಎಂದು ಸದಸ್ಯರು ಪ್ರಶ್ನಿಸಿದರು. 'ಕಟ್ಟಡ ಯೋಜನೆ ಉಲ್ಲಂಘಿಸಿ ಕಟ್ಟಡ ನಿರ್ಮಾಣವಾಗಿದ್ದರೆ ಯಾವುದೇ ಕಾರಣಕ್ಕೂ ಒ.ಸಿ ನೀಡಬಾರದು ಎಂಬ ಸುಪ್ರೀಂ ಕೋರ್ಟ್ ನಿರ್ದೇಶನವಿದೆ. ಆದ್ದರಿಂದ ಅಂತಹ ಕಟ್ಟಡಗಳಿಗೆ ಒ.ಸಿ ನೀಡುತ್ತಿಲ್ಲ. ಒಂದು ವೇಳೆ ಕಣ್ತಪ್ಪಿಸಿ ಅನುಮತಿ ನೀಡಿದರೆ ಅಂತಹ ಸಿಬ್ಬಂದಿ ವಿರುದ್ಧ ನ್ಯಾಯಾಲಯದ ಆದೇಶದಂತೆ ಕ್ರಮವಾಗಲಿದೆ ಎಂದು ಹೇಳಿದರು.

## ಮಿನಿ ನ್ಯೂಸ್

### ವಿವಿಧ ಸಲಕರಣೆ ವಿತರಣೆ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಸಮರ್ಥನಂ ಅಂಗವಿಕಲರ ಸಂಸ್ಥೆ, ಎಸ್‌ಬಿಐ ಫೌಡೇಶನ್ ಹಾಗೂ ಬಿಆರ್‌ಸಿ ಇವರ ಸಯೋಗದಲ್ಲಿ ವಿಶೇಷಚೇತನ ಮಕ್ಕಳಿಗೆ ಸಾಧನ ಸಲಕರಣೆ ಗಳನ್ನು ವಿತರಿಸಲಾಯಿತು. ಪೇಟೆ ಶಾಸಕ ಕ್ಷೇತ್ರದ ಮಾದರಿ ಶಾಲೆ ಆವರಣದಲ್ಲಿ ಈ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಸಮರ್ಥನಂ ಅಂಗವಿಕಲ ಸಂಸ್ಥೆ ಬೆಳಗಾವಿ ಅನಿಲ್ ಶಿಂದೋಳ್ಳಿ ಮಾತನಾಡಿ ಕಾರ್ಯಕ್ರಮದ ಗುರಿ, ಉದ್ದೇಶಗಳು, ಸಮನ್ವಯ ಶಿಕ್ಷಣ, ವೈಯಕ್ತಿಕ ಶಿಕ್ಷಣದ ಪರಿಕಲ್ಪನೆ ಹಾಗೂ ಅದರ ಮಹತ್ವ ಕುರಿತು ಮಾಹಿತಿ ತಿಳಿಸಿದರು.

ಜಿಲ್ಲೆ ಆಯ್ದ ಶಾಲೆಗಳಲ್ಲಿ ಸಮರ್ಥನಂ ಸಂಸ್ಥೆ ಹಾಗೂ ಎಸ್‌ಬಿಎಂ ಫೌಂಡೇಶನ್ ಚುಟುವಟಿಕೆಗಳು ಅಂಗವಿಕಲರ ಸ್ನೇಹಿ ಶೌಚಾಯಲಗಳ ನಿರ್ಮಾಣ, ಕೊಠಡಿಗಳ ದುರಸ್ತಿ, ರ್‍ಯಾಂಪ್ ವ್ಯವಸ್ಥೆ ಕಲಿಕಾ ಸಾಮಗ್ರಿಗಳು ಮತ್ತು ಸ್ಮಾರ್ಟ್ ಬೋರ್ಡಗಳು, ಕೃತಕ ಕಾಲುಗಳು, ಗಾಲಿ ಕುರ್ಚಿಗಳು, ಕ್ರಚ್ಚೆಸ್, ವಾಟರ್ ಬೆಡ್ ಮತ್ತು ಏರ್ ಬೆಡ್‌ಗಳ ಬಗ್ಗೆಯೂ ವಿವರಿಸಿದರು.

### ಬಸ್ ನಿಲ್ದಾಣದ ಪೊಲೀಸ್ ಚೌಕಿಯಲ್ಲಿ ಪೊಲೀಸರೇ ಮಾಯ

• ಉದಯವಾಹಿನಿ ಚನ್ನಗಿರಿ

ಪಟ್ಟಣದ ಪುರಸಭೆ ಬಸ್ ನಿಲ್ದಾಣದಲ್ಲಿ 8 ವರ್ಷಗಳ ಹಿಂದೆ ಪೊಲೀಸ್ ಚೌಕಿ ನಿರ್ಮಿಸಲಾಗಿದ್ದು, ಇಲ್ಲಿ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿಲ್ಲ.

ಖಾಸಗಿ ಹಾಗೂ ಕೆಎಸ್‌ಆರ್‌ಟಿಸಿ ಬಸ್‌ಗಳು ಬಂದು ಹೋಗುವ ಬಸ್ ನಿಲ್ದಾಣದಲ್ಲಿ ಎಲ್ಲೆಂದರಲ್ಲಿ ದ್ವಿಚಕ್ರ ವಾಹನಗಳನ್ನು ನಿಲ್ಲಿಸಲಾಗುತ್ತದೆ. ಸುಗಮ ಬಸ್ ಗಳ ಸಂಚಾರಕ್ಕೆ ಅಡ್ಡಿಯಾಗುತ್ತದೆ. ಹಾಗೆಯೇ ಬಸ್‌ಗಳೂ ನಿಗದಿತ ಪ್ಲಾಟ್ ಫಾರಂನಲ್ಲಿ ನಿಲುಗಡೆ ಮಾಡುವುದಿಲ್ಲ. ಇದಕ್ಕೆಲ್ಲಾ ಕಡಿವಾಣ ಹಾಕಬೇಕಾಗಿರುವ ಪೊಲೀಸ್ ಸಿಬ್ಬಂದಿ ಮಾತ್ರ ಇತ್ತ ಕಡೆ ಸುಳಿಯದೇ ಇರುವುದರಿಂದ ಸುಗಮ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ.

ಪೊಲೀಸ್ ಚೌಕಿಯಲ್ಲಿ ಹಮಾಲರು ಕುಳಿತುಕೊಂಡು ವಿಶ್ರಾಂತಿ ಪಡೆದುಕೊಳ್ಳುವಂತಾಗಿದೆ. ಇದು ಪೊಲೀಸ್ ಚೌಕಿಯೇ ಎಂಬ ಅನುಮಾನ ಜನರಲ್ಲಿ ಉಂಟಾಗಿದೆ. ಆದ್ದರಿಂದ ಬಸ್ ನಿಲ್ದಾಣದಲ್ಲಿರುವ ಪೊಲೀಸ್ ಚೌಕಿಗೆ ಪೊಲೀಸ್ ಸಿಬ್ಬಂದಿ ನಿಯೋಜಿಸಿ ಸುಗಮ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಬೇಕಿದೆ.

## ವೀರ ಯೋಧರಿಗೆ ಕದಂಬ ಸೈನ್ಯ ಸಂಘಟನೆಯಿಂದ ಶ್ರದ್ಧಾಂಜಲಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹಾಸನ

> ನರೇಂದ್ರ ಮೋದಿಯವರು ಮೊದಲ ಬಾರಿಗೆ ಸೈನಿಕರಿಗೆ ಸಂಪೂರ್ಣ ಸ್ವಾತಂತ್ರವನ್ನು ನೀಡಿದ್ದಾರೆ, ಭಾರತೀಯ ಸೇನೆಯು ಪಾಕಿಸ್ತಾನವನ್ನು ಪ್ರವೇಶಿಸಿ 26 ಅಮಾಯಕರ ಹತ್ಯೆಗೆ ಕಾರಣರಾದ ಭಯೋತ್ಪಾದಕರನ್ನು ನಿರ್ಮೂಲನೆ ಮಾಡಿದೆ. ಹೆಚ್ಚುತ್ತಿರುವ ಯುದ್ಧ ಉದ್ವಿಗ್ನತೆಯ ನಡುವೆ, ಭಾರತವು ಪಹಲ್ಗಾಮ್ ದಾಳಿಗೆ ಪ್ರತೀಕಾರ ತೀರಿಸಿಕೊಂಡಿದ್ದು, ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿನ ಒಂಬತ್ತು ಭಯೋತ್ಪಾದಕ ಶಿಬಿರಗಳ ಮೇಲೆ ವಾಯುದಾಳಿ ನಡೆಸಿ, ಆಪರೇಷನ್ ಸಿಂಧೂರ ಮೂಲಕ ಭಯೋತ್ಪಾದನೆಯನ್ನು ಅದರ ಬೇರುಗಳಲ್ಲಿಯೇ ಹತ್ತಿಕ್ಕಿದೆ -ಬೇಕ್ರಿ ರಮೇಶ್

ಆಪರೇಷನ್ ಸಿಂಧೂರದಲ್ಲಿ ದೇಶಕ್ಕಾಗಿ ಪ್ರಾಣ ಕೊಟ್ಟ ವೀರ ಯೋಧರಿಗೆ ಜಿಲ್ಲಾಧಿಕಾರಿ ಕಛೇರಿ ಎದುರು ಪುಷ್ಪಾರ್ಚರನೆ ಮೂಲಕ ಭಾವಪೂರ್ಣ ಶ್ರದ್ಧಾನಂಜಲಿಯನ್ನು ಕದಂಬ ಸೈನ್ಯ ಕನ್ನಡ ಸಂಘಟನೆ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್ ನೇರವೇರಿಸಿದರು.

ನಂತರ ಮಾತನಾಡಿದ ಅವರು ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ, ಭಾರತೀಯ ಸೇನೆಯು ''ಆಪರೇಷನ್ ಸಿಂದೂರ''ವನ್ನು ಪ್ರಾರಂಭಿಸಿ ಪಾಕಿಸ್ತಾನದೊಳಗೆ ಆಳವಾಗಿ ದಾಳಿ ನಡೆಸಿ, ಲಷ್ಕರ್-ಎ-ತೈಬಾ ಮತ್ತು ಜೈಶ್-ಎ-ಮೊಹಮ್ಮದ್ ಗುಂಪುಗಳಿಗೆ ಸೇರಿದ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ನಾಶಪಡಿಸಿತು. ನೂರಾರು ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವ ಮೂಲಕ ಮತ್ತು ಭಯೋತ್ಪಾದನೆಯನ್ನು ಸಹಿಸಲಾಗುವುದಿಲ್ಲ ಎಂಬ ದಿಟ್ಟ ಸಂದೇಶವನ್ನು ಜಗತ್ತಿಗೆ ರವಾನಿಸುವ ಮೂಲಕ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಭಯೋತ್ಪಾದಕರಿಗೆ ಪ್ರತೀಕಾರ ಮೂಲಕ ಮುಗ್ಧ ಹಿಂದೂಗಳು ಚೆಲ್ಲುವ ಪ್ರತಿ ರಕ್ತದ ಹನಿಗೂ ನ್ಯಾಯ ಒದಗಿಸಿದೆ ಎಂದರು.

ನಮಗಾಗಿ ನಮ್ಮ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರಿಗೆ ಪ್ರತಿ ಮನೆ ಮನೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸುವ ಮೂಲಕ ಅವರ ಆತ್ಮಕ್ಕೆ ಗೌರವ ಪೂರಕವಾಗಿ ಕೃತಜ್ಞತೆ ಸಲ್ಲಿಸುವುದು ಭಾರತ ದೇಶದ ಎಲ್ಲಾ ಪ್ರಜೆಗಳ ಕರ್ತವ್ಯ ಎಂದರು.

ಹಾಸನದ ಜಿಲ್ಲಾ ಉಪಾಧ್ಯಕ್ಷ ಯಾಕುಬ್ ಖಾನ್ ಗೊರೂರು, ಸಕಲೇಶಪುರ ತಾಲ್ಲೂಕು ಅಧ್ಯಕ್ಷ ಸಾಹಿತಿ ವಿಶ್ವಾಸ್ .ಡಿ. ಗೌಡ, ಹಿರಿಯ ಸಾಹಿತಿಗಳು. ಗೊರೂರು ಅನಂತರಾಜು, ಸಿರಿಗನ್ನಡ ಪತ್ರಿಕೆ ಸಂಪಾದಕರು ಆನಂದ ಪಟೇಲ್ ನೆಲ್ಲಿಗೆರೆ, ನಿವೃತ್ತ ಎಎಸ್‌ಐ ಗಾಯಕರು ಶಿನ ನಂಜೇಗೌಡ, ರೈತ ಸಂಘದ ಹೋರಾಟಗಾರರಾದ ಪ್ರಕಾಶ್ ಗೌಡರು, ರಾಜ್ಯ ಸಮಿತಿ ಸದಸ್ಯರಾದ ರಾಮು ಚಿಕ್ಕೆಗೌಡನದೊಡ್ಡಿ, ಮಂಡ್ಯ ಜಿಲ್ಲೆ ಸಂಚಾಲಕ ಸಲ್ಮಾನ್ ಪ್ರಮುಖರು ಉಪಸ್ಥಿತರಿದ್ದರು.

## ಕಂಪ್ಯೂಟರ್ ಜ್ಞಾನದಿಂದ ಉದ್ಯೋಗಾವಕಾಶಗಳು ಹೆಚ್ಚಳ

• ಉದಯವಾಹಿನಿ, ಕಲಬುರಗಿ


ಉದಯವಾಹಿನಿ ಚಿತ್ರ

ಪ್ರಸ್ತುತವಾಗಿ ಕಂಪ್ಯೂಟರ ಜ್ಞಾನವಿಲ್ಲದಿದ್ದರೆ ಅನಕ್ಷರಸ್ಥ ಎಂಬ ಸ್ಥಿತಿಗೆ ಬಂದಿರುವುದು ಕಂಪ್ಯೂಟರ್‌ನ ಮಹತ್ವವನ್ನು ಸಾರುತ್ತದೆ. ವಿದ್ಯಾರ್ಥಿಗಳು ಯಾವುದೇ ಪದವಿ, ಕೋರ್ಸ್ ಮಾಡುವುದರ ಜೊತೆಗೆ ಕಂಪ್ಯೂಟರ ಶಿಕ್ಷಣ ಪಡೆಯಬೇಕು. ಇದರಿಂದ ನಿಮಗೆ ಸಾಕಷ್ಟು ಉದ್ಯೋಗಾವಕಾಶಗಳು ಲಭ್ಯವಾಗುತ್ತವೆ. ಕಂಪ್ಯೂಟರವಿಲ್ಲದ ಕ್ಷೇತ್ರ ನಾವಿಂದು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಶಿಕ್ಷಣ ತಜ್ಞ ಡಾ. ಸುನೀಲಕುಮಾರ ಎಚ್.ವಂಟಿ ಹೇಳಿದರು.

ನಗರದ ಆಳಂದ ರಸ್ತೆಯ ಖಾದ್ರಿ ಚೌಕ್‌ನಲ್ಲಿನ 'ಸಕ್ಸಸ್ ಕಂಪೂಟರ ತರಬೇತಿ ಸಂಸ್ಥೆಯಲ್ಲಿ ಜರುಗಿದ ಸಂಸ್ಥೆಯಲ್ಲಿ ತರಬೇತಿ ಪಡೆದು ಕಂಪ್ಯೂಟರ್ ಕೋರ್ಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರಮಾಣಪತ್ರಗಳನ್ನು ವಿತರಿಸಿ ಅವರು ಮಾತನಾಡುತ್ತಿದ್ದರು.

ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಕೆಲವು ವರ್ಷಗಳ ಹಿಂದೆ ಸೀಮಿತ ಕ್ಷೇತ್ರಕ್ಕೆ ಮೀಸಲಾಗಿದ್ದ ಕಂಪ್ಯೂಟರ್‌ನ ಬಳಕೆ, ಪ್ರಸ್ತುತ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಿಗೆ ವ್ಯಾಪಿಸಿದೆ. ಕಂಪ್ಯೂಟರ್‌ನ ಬಳಕೆಯಿಂದ ಕೆಲಸದ ವೇಗದ ಹೆಚ್ಚಳ, ಸಮಯದ ಉಳಿತಾಯ, ದಕ್ಷತೆ, ನಿಖರತೆ ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರು ಕಂಪ್ಯೂಟರ ಶಿಕ್ಷಣ ಪಡೆಯುವುದು ಅವಶ್ಯಕವಾಗಿದೆ ಎಂದರು. ಸಕ್ಸಸ್ ಕಂಪ್ಯೂಟರ ತರಬೇತಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ನಮ್ಮ ಸಂಸ್ಥೆಯು ಕಳೆದ 14 ವರ್ಷಗಳಿಂದ ಗುಣಮಟ್ಟದ ಕಂಪ್ಯೂಟರ ತರಬೇತಿ ನೀಡುತ್ತಿದೆ. ಸಂಸ್ಥೆಯಿಂದ ತರಬೇತಿ ಹೊಂದಿದ ಸಾವಿರಾರು ವಿದ್ಯಾರ್ಥಿಗಳು ರಾಜ್ಯದೆಲ್ಲೆಡೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಭವಿಷ್ಯ ಉತ್ತಮವಾಗಿದೆ. ಇದು ನಮಗೆ ಅತ್ಯಂತ ಸಂತೋಷದ ಸಂಗತಿಯಾಗಿದೆ. ವಿದ್ಯಾರ್ಥಿಗಳು ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಚಿಂತಕ ಅಶೋಕ ಕಾಳೆ, ಸಮಾಜ ಸೇವಕ ಓಂಕಾರ ವಠಾರ, ತರಬೇತಿ ಸಂಸ್ಥೆಯ ಶಿಕ್ಷಕಿಯರಾದ ನಿಲೋಫರ್ ಶೇಖ್, ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಉಚಿತ ಆರೋಗ್ಯ ತಪಾಸಣಾ ಶಿಬಿರ

• ಉದಯವಾಹಿನಿ, ನವಲಗುಂದ

ತಾಲ್ಲೂಕಿನ ಶಿರೂರು ಗ್ರಾಮ ವ್ಯಾಪ್ತಿಯ ಕಾಲುವೆ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗ್ರಾಮ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಮಂಗಳವಾರ ಜರುಗಿತು.

ಗ್ರಾಮ ಪಂಚಾಯತಿ ಉಪಾಧ್ಯಕ್ಷ ಸಂಗನಗೌಡ ತೋಟದ ಮಾತನಾಡಿ ಪ್ರತಿಯೊಬ್ಬ ಕೂಲಿ ಕಾರ್ಮಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ' ಎಂದು ಸಲಹೆ ನೀಡಿದರು. ತಾ ಪಂ ಮಾಹಿತಿ ಶಿಕ್ಷಣ ಮತ್ತು ಸಂವಹನ ಸಂಯೋಜಕರಾದ ಪ್ರಕಾಶ ಅಕ್ಕಿ, ಮಾತನಾಡಿ ನರೇಗಾ ಯೋಜನೆಯಿಂದ ಆರ್ಥಿಕವಾಗಿ ಸದೃಢರಾಗಲು ಹಾಗೂ ಆರೋಗ್ಯವಂತ ಸಮಾಜ ನಿರ್ಮಾಣವಾಗಲು ಎಲ್ಲರ ಸಹಕಾರ ತುಂಬಾ ಮುಖ್ಯ ಎಂದರು.

ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿದ ಕಾರ್ಮಿಕರಿಗೆ ಮಧುಮೇಹ, ಅಧಿಕ ರಕ್ತದೊತ್ತಡ, ಕ್ಯಾನ್ಸರ್ ಕಾಯಿಲೆ ಮತ್ತು ತಂಬಾಕಿನಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಕುರಿತು ಆರೋಗ್ಯ ಇಲಾಖೆಯ ದೀಪಾ ಸಂಗಳದ ಮಾಹಿತಿ ತಿಳಿಸಿದರು.

## ನಕಲಿ ಪಿಸ್ತೂಲ್ ಜಪ್ತಿ: ಐವರು ಆರೋಪಿಗಳ ಬಂಧನ

• ಉದಯವಾಹಿನಿ, ಬೀದರ್


ಉದಯವಾಹಿನಿ ಚಿತ್ರ

ನಗರದ ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ 1 ದರೋಡೆ ಪ್ರಕರಣ, 4 ಸುಲಿಗೆ ಪ್ರಕರಣಗಳು ಹಾಗೂ 3 ಮನೆ ಕಳವು ಪ್ರಕರಣಗಳು ಸೇರಿ ಒಟ್ಟು 8 ಪ್ರಕರಣಗಳಲ್ಲಿ ಐವರು ಆರೋಪಿಗಳನ್ನು ಬಂಧಿಸಿ 30,80,100 ರೂ. ಬೆಲೆ ಬಾಳುವ ಸ್ವತ್ತನು ಜಪ್ತಿ ಮಾಡಿ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಎಸ್‌ಪಿ ಪ್ರದೀಪ್ ಗುಂಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ 1 ದರೋಡೆ ಪ್ರಕರಣ, 4 ಸುಲಿಗೆ ಪ್ರಕರಣಗಳು ಹಾಗೂ 3 ಮನೆ ಕಳವು ಪ್ರಕರಣಗಳ ಪತ್ತೆಗೆ ಎಸ್‌ಪಿ, ಹೆಚ್ಚುವರಿ ಎಸ್‌ಪಿ ಚಂದ್ರಕಾಂತ ಪೂಜಾರಿ, ಪೊಲೀಸ್ ಉಪಾಧೀಕ್ಷಕ ಶಿವನಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಗಾಂಧಿ ಗಂಜ್ ಪೊಲೀಸ್ ಠಾಣೆ ಪಿಐ ಆನಂದರಾವ್, ಸಿಪಿಐ ಜಿ.ಎಸ್.ಬಿರಾದಾರ, ನೂತನ ನಗರ ಠಾಣೆ ಪಿಐ ವಿಜಯಕುಮಾರ ಪಿ.ಐ ನೂತನ ನಗರ ಠಾಣೆ, ಬೀದರ ಗ್ರಾಮೀಣ ಠಾಣೆ ಪಿಐ ಮಲ್ಲಿಕಾರ್ಜುನ ಯಾತನೂರ, ಔರಾದ ಸಿಪಿಐ ರಘುವೀರಸಿಂಗ್ ಠಾಕೂರ ಅವರ ನೇತೃತ್ವದಲ್ಲಿ ಹಾಗೂ ಸಿಬ್ಬಂದಿಗಳಾದ ನವೀನ್, ಅನೀಲ್ , ಆರೀಫ್, ಇರ್ಫಾನ್ ಗಂಗಾಧರ , ಸುಧಾಕರ, ಇಮ್ರಾನ ಕಮಲ ನಗರ, ಪ್ರಶಾಂತ, ಮಲ್ಲಿಕಾರ್ಜುನ, ನಿಂಗಪ್ಪಾ, ರಾಹುಲ ಹಿಬ್ಬಾರೆ, ವಿಜಯಕುಮಾರ ಬಾಳುರೆ, ಅಶೋಕ ಕೋಟೆ ಮತ್ತು ಹರ್ಷಾ ಹಾಗೂ ಟೆಕ್ನಿಕಲ್ (ತಾಂತ್ರಿಕ) ಅಧಿಕಾರಿ ವಿ.ಎಸ್. ಮಂಕಣೆ ಅವರನ್ನೊಳಗೊಂಡ ತಂಡ ರಚಿಸಲಾಗಿತ್ತು.

ಈ ತಂಡ ತನಿಖೆ ನಡೆಸಿ ಆರೋಪಿಯನ್ನು ವಶಕ್ಕೆ ಪಡೆದು ಮೂರು ಮನೆ ಕಳ್ಳತನ ಪ್ರಕರಣಗಳಲ್ಲಿ ಕಳವು ಮಾಡಿದ್ದ 35 ಗ್ರಾಂ.ಬಂಗಾರದ ಆಭರಣ, 500 ಗ್ರಾಂ.ಬೆಳ್ಳಿ ವಸ್ತುಗಳು ಮತ್ತು ಕೃತ್ಯಕ್ಕೆ ಉಪಯೋಗಿಸಿದ ಬೈಕ್ ಸೇರಿ 4 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದೆ.

4 ಪ್ರಕರಣಗಳಲ್ಲಿ ಸರಗಳ್ಳತನ ಮಾಡಿದ್ದ ಒಟ್ಟು 140 ಗ್ರಾಂ.ಬಂಗಾರದ ಆಭರಣ, ಕೃತ್ಯಕ್ಕೆ ಬಳಸಿದ ಬೈಕ್ ಸೇರಿ 11,90,000 ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ದರೋಡೆ, ಸುಲಿಗೆ ಮತ್ತು ಮನೆ ಕಳ್ಳತನ ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಅಧಿಕಾರಿ ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

## ಚರಂಡಿ ಅನೈರ್ಮಲ್ಯ: ಸಾಂಕ್ರಾಮಿಕ ರೋಗ ಭೀತಿ

• ಉದಯವಾಹಿನಿ ಲಕ್ಷ್ಮೇಶ್ವರ


ಉದಯವಾಹಿನಿ ಚಿತ್ರ

ಮೂಲಸೌಲಭ್ಯಗಳಾದ ಸುಸಜ್ಜಿತ ರಸ್ತೆ, ಚರಂಡಿ, ಬೀದಿ ದೀಪ ಹಾಗೂ ಕುಡಿಯುವ ನೀರು ಒದಗಿಸಬೇಕಾಗಿರುವುದು ಆಯಾ ಗ್ರಾಮ ಪಂಚಾಯಿತಿಗಳ ಕರ್ತವ್ಯ. ಆದರೆ, ವ್ಯವಸ್ಥಿತ ಚರಂಡಿ ನಿರ್ಮಿಸದ ಕಾರಣ ಕೆಲ ಗ್ರಾಮ ಪಂಚಾಯಿತಿಗಳು ಜನರ ಆಕ್ರೋಶಕ್ಕೆ ಕಾರಣವಾಗಿವೆ.

ತಾಲ್ಲೂಕಿನ ಮಾಡಳಿ ಗ್ರಾಮದಲ್ಲಿ ಚರಂಡಿಗಳು ಗಲೀಜಿನಿಂದ ತುಂಬಿಕೊಂಡು ದುರ್ವಾಸನೆ ಬೀರುತ್ತಿವೆ. ಚರಂಡಿ ಸ್ವಚ್ಛಗೊಳಿಸದ ಕಾರಣ ಗ್ರಾಮದಲ್ಲಿ ಸೊಳ್ಳೆಗಳ ಕಾಟವೂ ಹೆಚ್ಚಾಗಿದೆ.

ಗ್ರಾಮದ 2ನೇ ವಾರ್ಡ್‌ನ ಕನ್ನಡ ಪ್ರಾಥಮಿಕ ಶಾಲೆಯ ಪಕ್ಕದಲ್ಲಿರುವ ಸಿ.ಡಿ ಒಡೆದ ಕಾರಣ ಅಲ್ಲಿನ ಚರಂಡಿ ಕಟ್ಟಿಕೊಂಡಿದ್ದು ಹೊಲಸು ನೀರು ಮುಂದೆ ಹರಿದು ಹೋಗುತ್ತಿಲ್ಲ. ಇದರಿಂದಾಗಿ ಇಡೀ ಪ್ರದೇಶ ಗಬ್ಬೆದ್ದು ನಾರುತ್ತಿದೆ. ಕನ್ನಡ ಪ್ರಾಥಮಿಕ ಶಾಲೆ ಹತ್ತಿರದ ಬಸ್ ನಿಲ್ದಾಣದ ಎದುರಿನ ಚರಂಡಿ ಸಹ ಕೊಳಕಿನಿಂದ ತುಂಬಿಕೊಂಡಿದೆ. ಕೆಟ್ಟ ವಾಸನೆ ಬರುವುದರಿಂದ ಬಸ್ ನಿಲ್ದಾಣದಲ್ಲಿ ಯಾರೂ ಕುಳಿತುಕೊಳ್ಳಲಾರದ ಸ್ಥಿತಿ ನಿರ್ಮಾಣವಾಗಿದೆ. ಚರಂಡಿಗಳನ್ನು ಬಳಸದೆ ಇರುವುದರಿಂದ ಸೊಳ್ಳೆಗಳ ಕಾಟವೂ ಹೆಚ್ಚಾಗಿದೆ. ಸಾಂಕ್ರಾಮಿಕ ರೋಗ ಹರಡುವ ಭಯ ಜನರನ್ನು ಕಾಡುತ್ತಿದೆ. ಸದ್ಯ ಬೇಸಿಗೆ ಆಗಿರುವುದರಿಂದ ಚರಂಡಿಗಳಿಂದ ಮತ್ತಷ್ಟು ದುರ್ವಾಸನೆ ಹೊರ ಹೊಮ್ಮುತ್ತಿದ್ದು ಗ್ರಾಮಸ್ಥರು ಗ್ರಾಮ ಪಂಚಾಯಿತಿ ಆಡಳಿತದ ಮೇಲೆ ಬೇಸರ ವ್ಯಕ್ತಪಡಿಸಿದ್ದಾರೆ.

## ವಿದ್ಯುತ್ ಖಾಸಗೀಕರಣಕ್ಕೆ ವಿರೋಧ

• ಉದಯವಾಹಿನಿ ಕಂಪ್ಲಿ

ವಿದ್ಯುತ್ ಕ್ಷೇತ್ರ ಖಾಸಗೀಕರಣಗೊಳಿಸುವುದನ್ನು ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಪದಾಧಿಕಾರಿಗಳು ವಿರೋಧಿಸಿದರು. ಈ ಕುರಿತ ಮನವಿಯನ್ನು ಸ್ಥಳೀಯ ಜೆಸ್ಕಾಂ ಕಚೇರಿಯ ಸಹಾಯಕ ಎಂಜಿನಿಯರ್ ವಿನೋದ್‌ಕುಮಾರ್ ಬ್ಯಾಲಾಳ್ ಅವರಿಗೆ ಸಲ್ಲಿಸಿದರು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ. ಗಂಗಾಧರ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಲು ನಡೆಸುತ್ತಿರುವ ಪ್ರಯತ್ನವನ್ನು ತಕ್ಷಣ ಕೈಬಿಡಬೇಕು' ಎಂದು ಒತ್ತಾಯಿಸಿದರು. ರಾಜ್ಯ ಸರ್ಕಾರ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸ್ಮಾರ್ಟ್ ಕಾರ್ಡ್ ಮತ್ತು ಡಿಜಿಟಲ್ ಮೀಟರ್ ಅಳವಡಿಸಲು – 10,000 ಠೇವಣಿ ಶುಲ್ಕ ನಿಗದಿಪಡಿಸಿರುವುದನ್ನು ಕೂಡಲೇ ಹಿಂಪಡೆಯಬೇಕು. ಈ ಹಿಂದೆ ಅಕ್ರಮ-ಸಕ್ರಮದಡಿ ರೈತರಿಗೆ ವಿದ್ಯುತ್ ಉಪಕರಣಗಳನ್ನು ಒದಗಿಸಿದಂತೆಯೇ ಉಚಿತ ವಿದ್ಯುತ್ ನೀಡಬೇಕು. ವಿದ್ಯುತ್ ಸಂಪರ್ಕಕ್ಕೆ ರೈತರ ಆಧಾರ್ ಜೋಡಣೆ ಮಾಡುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

## ಅನಧಿಕೃತ ಸಿಲಿಂಡರ್ ಜಪ್ತಿ: 19 ಪ್ರಕರಣ ದಾಖಲು

• ಉದಯವಾಹಿನಿ, ವಿಜಯಪುರ

ವಿಜಯಪುರ ನಗರದಾದ್ಯಂತ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರಗಳನ್ನು ಅನಧಿಕೃತವಾಗಿ ಬಳಕೆ ಮಾಡುತ್ತಿರುವ ಸ್ಥಳಗಳಿಗೆ ದಾಳಿ ನಡೆಸಿ 2024ರ ನವೆಂಬರ್ ಮಾಹೆಯಿಂದ ಈವರೆಗೆ ಒಟ್ಟು 110 ಸಿಲಿಂಡರ್‌ಗಳನ್ನು ಜಪ್ತಿ ಮಾಡಿ 19 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ವಿನಯಕುಮಾರ ಪಾಟೀಲ ತಿಳಿಸಿದ್ದಾರೆ. ನಗರದಾದ್ಯಂತ ಅನಧಿಕೃತವಾಗಿ ಆಟೋಗಳಿಗೆ, ಹೋಟೆಲ್‌ಗಳು, ಬೀದಿ ಬದಿ ಆಹಾರ ತಯಾರಿಕೆ ವ್ಯಾಪಾರಸ್ಥರು ಸೇರಿದಂತೆ ವಾಣಿಜ್ಯೋದ್ಯಮ ಸಿಲಿಂಡರುಗಳಿಗೆ ಗೃಹ ಬಳಕೆ ಗ್ಯಾಸ್ ಮರು ಭರ್ತಿ ಮಾಡಿ ಮಾರಾಟ ಮಾಡುತ್ತಿರುವವರ ಮೇಲೆ ಪೊಲೀಸ್ ಇಲಾಖೆ ಸಹಯೋಗದೊಂದಿಗೆ ದಾಳಿ ನಡೆಸಿ ಪ್ರಕರಣ ದಾಖಲಿಸಲಾಗಿದೆ.

ಅನಧಿಕೃತವಾಗಿ ಎಲ್‌ಪಿಜಿ ಗ್ಯಾಸ್ ಬಳಕೆ ಮಾಡುವುದು ಹಾಗೂ ವಾಣಿಜ್ಯೋದ್ಯಮ ಸಿಲಿಂಡರ್‌ಗಳಿಗೆ ಮರು ಭರ್ತಿ ಮಾಡುವುದು ಅಪರಾಧವಾಗಿದ್ದು,. ಇಂತಹ ಪ್ರಕರಣಗಳು ಕಂಡು ಬಂದಲ್ಲಿ ಅಂತಹವರ ವಿರುದ್ಧ ಕಾಯ್ದೆ ಉಲ್ಲಂಘನೆ ಮೇರೆಗೆ ಸಿಲಿಂಡರ್‌ಗಳನ್ನು ಜಪ್ತಿ ಮಾಡುವುದಲ್ಲದೇ ಅಗತ್ಯ ವಸ್ತುಗಳ ಕಾಯ್ದೆ 1955ರ ಸೆಕ್ಷನ್ 3/7ರನ್ವಯ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

## ಪೋಡಿ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕೃಷ್ಣ ಬೈರೇಗೌಡ ಸೂಚನೆ

• ಉದಯವಾಹಿನಿ, ವಿಜಯಪುರ


ಉದಯವಾಹಿನಿ ಚಿತ್ರ

> ಜಮೀನಿನ ಮಾಲೀಕ ಮರಣ ಹೊಂದಿದ್ದರೂ ಸಹ ಇದುವರೆಗೆ ವಾರಸುದಾರರ ಹೆಸರಿಗೆ ಜಮೀನು ಬದಲಾವಣೆಯಾಗದೇ ಮರಣ ಹೊಂದಿದ ವ್ಯಕ್ತಿಯ ಹೆಸರಿನಲ್ಲಿಯೇ ಹಲವು ಖಾತಾಗಳಿವೆ. ಜಿಲ್ಲೆಯಲ್ಲಿ ಇಂತಹ ಪ್ರಕರಣಗಳನ್ನು ಗುರುತಿಸಿ ಪೌತಿ ಖಾತೆ ಮಾಡಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಸರ್ಕಾರದಿಂದ ಪೋಡಿ ಮುಕ್ತ ಅಭಿಯಾನವನ್ನು ಹಮ್ಮಿಕೊಂಡಿದ್ದು, ಜನರು ಬಂದು ಅರ್ಜಿ ಸಲ್ಲಿಸುವವರೆಗೆ ಕಾಯ್ದು ಕುಳಿತುಕೊಳ್ಳದೇ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಪೋಡಿ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಂದಾಯ ಖಾತೆ ಸಚಿವರಾದ ಕೃಷ್ಣ ಬೈರೇಗೌಡ ಅವರು ಸೂಚನೆ ನೀಡಿದರು.

ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಪೋಡಿಗೆ ಬಾಕಿ ಇರುವ ಪ್ರಕರಣಗಳನ್ನು ಖುದ್ದಾಗಿ ಗ್ರಾಮಗಳಿಗೆ ಭೇಟಿ ನೀಡಿ ಪೋಡಿಗೆ ಬಾಕಿ ಇರುವ ಜಮೀನುಗಳ ಪರಿಶೀಲನೆ ನಡೆಸಬೇಕು.

ಈ ಕಾರ್ಯವನ್ನು ಅಭಿಯಾನದ ಮಾದರಿಯಲ್ಲಿ ಕೈಗೊಳ್ಳಬೇಕು. ಒಂದೇ ಆರ್‌ಟಿಸಿಯಲ್ಲಿ ಹಲವು ಹೆಸರು ನಮೂದಾಗಿರುವ ಆರ್‌ಟಿಸಿಯನ್ನು ಸರ್ವೇ ನಡೆಸಿ, ನಕ್ಷೆ ತಯಾರಿಸಿ ಪ್ರತ್ಯೇಕವಾಗಿ ಆಯಾ ಜಮೀನಿನ ಮಾಲೀಕರ ಹೆಸರಿಗೆ ಆರ್‌ಟಿಸಿ ಒದಗಿಸಲು ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಭೂ ಸುರಕ್ಷಾ ಯೋಜನೆಯಡಿ ದಾಖಲೆಗಳನ್ನು ಗಣಕೀಕರಣ ಮಾಡುವ ಮೂಲಕ ಹಳೆಯ ದಾಖಲೆಗಳನ್ನು ಸುಲಭವಾಗಿ ಜನರಿಗೆ ಒದಗಿಸಲು ಉತ್ತಮ ಸೇವೆ ನೀಡುವ ನಿಟ್ಟಿನಲ್ಲಿ ಕಂದಾಯ ಇಲಾಖೆಯಲ್ಲಿನ ಭೂಸುರಕ್ಷಾ ಯೋಜನೆಯಡಿ ಮೂಲ ಹಳೆಯ ದಾಖಲೆಗಳ ಗಣಕೀಕರಣ ನಡೆಯುತ್ತಿದ್ದು, ರಾಜ್ಯದಾದ್ಯಂತ ಅಂದಾಜು 20 ಕೋಟಿ ಪುಟಗಳ ದಾಖಲೆಗಳ ಗಣಕೀಕರಣ ಕಾರ್ಯ ಮಾಡಲಾಗಿದೆ ಎಂದರು.

### • ಪೋಷಕರೊಂದಿಗಿನ ಸಂವಾದದಲ್ಲಿ ಸರ್ಕಾರಿ ಶಾಲೆಗಳ ಬಗ್ಗೆ ಭಾಗಿದಾರರೊಂದಿಗೆ ಚರ್ಚಿಸಿ ಜಾಗೃತಿ

# ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಳಕ್ಕೆ ''ನಮ್ಮ ಶಾಲೆ ನಮ್ಮ ಜವಾಬ್ದಾರಿ''

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಮಲ್ಲಾಪುರ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ''ನಮ್ಮ ಶಾಲೆ ನಮ್ಮ ಜವಾಬ್ದಾರಿ'' ಎಂಬ ಕಾರ್ಯಕ್ರಮದ ಮೂಲಕ ಸಮುದಾಯದಲ್ಲಿ ಜಾಗೃತಿ ಮೂಡಿಸಿ, ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸುವ ಪ್ರಯತ್ನ ನಿರ್ವಹಿಸಲಾಯಿತು.

ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ್ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮದ ಪರಿಕಲ್ಪನೆ, ಉದ್ದೇಶ ಮತ್ತು ಇಲಾಖೆಯ ಆಶಯದೊಂದಿಗೆ ಸರ್ಕಾರಿ ಶಾಲೆಯಲ್ಲಿ ಒದಗಿಸುತ್ತಿರುವ ಪ್ರೋತ್ಸಾಹದಾಯಕ ಶೈಕ್ಷಣಿಕ ಸೌಲಭ್ಯಗಳನ್ನು ಪೋಷಕರಿಗೆ ಮನವರಿಕೆ ಮಾಡಿದರು.

ಜೊತೆಯಲ್ಲಿ ತಾಲ್ಲೂಕಿನ ಶಿಕ್ಷಕರಿಗೆ, ಮಕ್ಕಳ ಕಲಿಕಾ ಗುಣಮಟ್ಟ ಉತ್ತಮ ಪಡಿಸಲು ಸರ್ಕಾರ ಕೈಗೊಂಡ ಹಲವು ಯೋಜನೆಗಳನ್ನು ಫಲಪ್ರದವಾಗಿ ಅನುಷ್ಠಾನಗೊಳಿಸಲು ತಿಳಿಸಿದರು.

> ಮಧ್ಯಾಹ್ನ ಬಿಸಿ ಊಟ ಯೋಜನೆಯಡಿ ವಿತರಿಸುವ ಬಿಸಿ ಊಟದ ಗುಣಮಟ್ಟದ ಬಗ್ಗೆ ಜಾಗೃತಿ ಮೂಡಿಸಿ ಮಕ್ಕಳಲ್ಲಿ ಅಪೌಷ್ಟಿಕತೆ ಮತ್ತು ರಕ್ತ ಹೀನತೆ ನಿವಾರಣೆಗೆ ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿರುವ ಪೌಷ್ಠಿಕ ಬೆಂಬಲದ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸಿ ವಿದ್ಯಾರ್ಥಿಗಳನ್ನು ಸರಕಾರಿ ಶಾಲೆಗಳಲ್ಲಿ ದಾಖಲಿಸಲು ಪ್ರೇರೇಪಿಸಿದರು -ಗುರುರಾಜ್
> ಮಧ್ಯಾಹ್ನ ಬಿಸಿಊಟದ ಸಹಾಯಕ ನಿರ್ದೇಶಕರಾದ

ಪೋಷಕರೊಂದಿಗಿನ ಸಂವಾದದಲ್ಲಿ ಸರ್ಕಾರಿ ಶಾಲೆಗಳ ಬಗ್ಗೆ ಭಾಗಿದಾರರೊಂದಿಗೆ ಚರ್ಚಿಸಿ ಜಾಗೃತಿ ಮೂಡಿಸಿದರು. ಹಿರಿಯ ಉಪನ್ಯಾಸಕರಾದ ಅಶ್ವಥ್ ನಾರಾಯಣ್ ಮಾತನಾಡಿ, ಸರ್ಕಾರಿ ಶಾಲೆಗಳ ಮೇಲಿನ ಅಸಡ್ಡೆ ಬಿಟ್ಟು ಅಲ್ಲಿರುವ ಉತ್ಕೃಷ್ಟ ಮಾನವ ಸಂಪನ್ಮೂಲ, ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವ್ಯಕ್ತಿತ್ವ ನಿರೂಪಣೆಗೆ ಕರೆ ನೀಡಿದರು. ಗ್ರಾಮ ಪಂಚಾಯಿತಿ ಸದಸ್ಯರು, ಸಹಕಾರ ಪತ್ತಿನ ಸಂಘದ ಅಧ್ಯಕ್ಷರು ಶಾಲಾ ಅಭಿವೃದ್ಧಿಗೆ ಗ್ರಾಮದ ಸಹಕಾರ ಸದಾ ಇರುವುದಾಗಿ ತಿಳಿಸಿದರು. ದಾಖಲಾತಿ ಹೆಚ್ಚಿಸಲು ತಾವು ಕೂಡ ಶ್ರಮಿಸಲು ಉತ್ಸುಕರಾಗಿ ಮಾತನಾಡಿದರು.


ಉದಯವಾಹಿನಿ ಚಿತ್ರ

> ಕ್ಷೇತ್ರ ಸಮನ್ವಯಾಧಿಕಾರಿ ಸಂಪತ್ ಕುಮಾರ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಕಲಿಕಾ ಗುಣಮಟ್ಟ ಉತ್ತಮ ಪಡಿಸಲು ಶಿಕ್ಷಣ ಇಲಾಖೆಯ ಹಲವಾರು ಯೋಜನೆಗಳನ್ನು ಪೋಷಕರು ತಮ್ಮ ಮಕ್ಕಳ ಉಜ್ವಲ ಭವಿಷ್ಯ ರೂಪಿಸಲು ಸರ್ಕಾರಿ ಶಾಲೆಗಳತ್ತ ಆತ್ಮವಿಶ್ವಾಸದಿಂದ ಹೆಜ್ಜೆ ಇಡಲು ಕರೆಕೊಟ್ಟರು.

**ಸರಕಾರಿ ಶಾಲೆಗಳಲ್ಲಿ ದಾಖಲಿಸಲು ಪ್ರೇರಣೆ**

ಮಲ್ಲಾಪುರ ಶಾಲೆಯ ಮುಖ್ಯ ಶಿಕ್ಷಕರಾದ ರತ್ನಮ್ಮ ಮತ್ತು ಶಿಕ್ಷಕ ವೃಂದದವರ ಸಹಕಾರದೊಂದಿಗೆ ಇಲಾಖೆಯ ಕಾರ್ಯಕ್ರಮದ ನಿರೂಪಣೆಯನ್ನು ಶಿಲ್ಪ ನಿರ್ವಹಿಸಿದರೆ, ಆ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ ಇ.ಸಿ.ಓ, ಬಿ.ಆರ್.ಪಿ, ಸಿ.ಆರ್.ಪಿಗಳು ಭಾಗಿಯಾದರು ಮತ್ತು ಪೋಷಕರು, ಎಸ್.ಡಿ.ಎಂಸಿ ಸದಸ್ಯರು, ಅಡುಗೆ ಸಿಬ್ಬಂದಿಯವರು, ಹಳೇ ವಿದ್ಯಾರ್ಥಿಗಳು, ಹತ್ತಿರದ ಎಲ್ಲಾ ಸರ್ಕಾರಿ ಶಾಲೆಗಳ ಮುಖ್ಯ ಶಿಕ್ಷಕರು ಭಾಗವಹಿಸಿದರು. ಅಜೀಂ ಪ್ರೇಮ್ ಜೀ ಫೌಂಡೇಶನ್ ಸಂಸ್ಥೆಯ (ಎಪಿಎಫ್) ಪ್ರತಿನಿಧಿಗಳು ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಸಮೀಕ್ಷಾ ಹಾಳೆಯೊಂದಿಗೆ ಪೋಷಕರಿಂದ ಮಾಹಿತಿಯನ್ನು ಪಡೆದುಕೊಂಡರು ಕಾರ್ಯಕ್ರಮದ ಕೊನೆಯಲ್ಲಿ ಭಾಗಿದಾರರಿಂದ ಹಿಮ್ಮಾಯಿತಿ ಅಭಿಪ್ರಾಯ. ಸಲಹೆಗಳನ್ನುಪಡೆದರು. ಸಲೀಮಾ ವಂದಿಸಿದರು.

## ಸಂಚಾರಕ್ಕೆ ತೊಡಕು: ಗೂಡಂಗಡಿ ತೆರವು

• ಉದಯವಾಹಿನಿ, ಶಿರಸಿ


ಉದಯವಾಹಿನಿ ಚಿತ್ರ

ನಗರ ಪ್ರದೇಶದಲ್ಲಿ ವಾಹನ ನಿಲುಗಡೆ ಸ್ಥಳ, ಪಾದಚಾರಿ ಮಾರ್ಗ ಸೇರಿದಂತೆ ಜನ ಸಂಚಾರಕ್ಕೆ ತೊಡಕಾದ ಜಾಗಗಳಲ್ಲಿ ಅನುಮತಿ ಇಲ್ಲದೆ ನಿರ್ಮಿಸಿದ್ದ 22ಕ್ಕೂ ಹೆಚ್ಚಿನ ಗೂಡಂಗಡಿಗಳನ್ನು ನಗರಸಭೆ ವತಿಯಿಂದ ತೆರವು ಮಾಡಿ, ಸಂಚಾರ ಪೊಲೀಸ್ ಠಾಣೆ ಕಾರ್ಯವ್ಯಾಪ್ತಿಗೆ ವಹಿಸಲಾಯಿತು.

ಜನನಿಬಿಡ ಪ್ರದೇಶದಲ್ಲಿದ್ದ ಗೂಡಂಗಡಿಗಳಿಂದ ಸಂಚಾರಕ್ಕೆ ಸಮಸ್ಯೆಯಾಗಿತ್ತು. ವಾಹನ ನಿಲುಗಡೆಗೂ ತೊಂದರೆಯಾಗಿತ್ತು. ಸಂಚಾರ ನಿಯಮಗಳ ಪಾಲನೆಯಾಗದೆ, ಪೊಲೀಸರಿಗೂ ಇದು ತಲೆನೋವಾಗಿ ಪರಿಣಮಿಸಿತ್ತು.

ನಗರಸಭೆಯ ಹಲವು ಸಭೆಗಳಲ್ಲಿ ಈ ವಿಷಯ ಪ್ರಸ್ತಾಪವಾಗಿದ್ದರೂ, ಯಾವುದೇ ಕ್ರಮವಾಗಿರಲಿಲ್ಲ. ಪ್ರಸ್ತುತ ಸಂಚಾರ ಪೊಲೀಸ್ ಠಾಣೆ ಶಿರಸಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅಧಿಕಾರಿಗಳ ಸೂಚನೆ ಮೇರೆಗೆ ನಗರಸಭೆಯಿಂದ ಗೂಡಂಗಡಿಗಳನ್ನು ತ್ವರಿತವಾಗಿ ತೆರವು ಮಾಡಲಾಯಿತು. ತೆರವು ಕಾರ್ಯಾಚರಣೆ ಸಂದರ್ಭದಲ್ಲಿ ಅಧಿಕಾರಿಗಳು ಮತ್ತು ಅಂಗಡಿಕಾರರ ನಡುವೆ ಮಾತಿನ ಚಕಮಕಿ ನಡೆಯಿತು.

ನಗರದಲ್ಲಿ 300ಕ್ಕೂ ಹೆಚ್ಚು ಗೂಡಂಗಡಿಗಳು ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿವೆ. ತೆರವು ಮಾಡುವುದಿದ್ದರೆ ಎಲ್ಲವನ್ನೂ ತೆರವು ಮಾಡಬೇಕು ಎಂದು ಅಂಗಡಿಕಾರರು ಆಗ್ರಹಿಸಿದರು. ಈಗಾಗಲೇ ಸಾಕಷ್ಟು ಬಾರಿ ತೆರವಿಗೆ ಸೂಚನೆ ನೀಡಲಾಗಿತ್ತು. ಆದರೆ, ದಿನ ಕಳೆದಂತೆ ಹೊಸ ಅಂಗಡಿಗಳು ಶುರುವಾಗಿದ್ದವು. ನಗರಸಭೆಯ ಆದೇಶಕ್ಕೆ ಕಿಮ್ಮತ್ತು ನೀಡದೇ, ಕರವನ್ನೂ ನೀಡದೇ, ಸಂಚಾರಕ್ಕೆ ಸಮಸ್ಯೆಯಾಗಿತ್ತಿದ್ದ ಅಂಗಡಿಗಳನ್ನು ತೆರವು ಮಾಡಲಾಗಿದೆ' ಎಂದು ಅಧಿಕಾರಿಗಳು ಹೇಳಿದರು. ನಗರಸಭೆ ಪರಿಸರ ಎಂಜಿನಿಯರ್ ಶಿವರಾಜ್ ನಿರ್ದೇಶನದ ಮೇರೆಗೆ ನಡೆದ ಕಾರ್ಯಾಚರಣೆಯಲ್ಲಿ ನಗರಸಭೆ ಕಂದಾಯ ಅಧಿಕಾರಿ ಆರ್.ಎಂ. ವೆರ್ಣೇಕರ್ ಹಾಗೂ ಸಂಚಾರಿ ಪೊಲೀಸ್ ಠಾಣೆ ಪಿಎಸ್‌ಐ ಮಹಂತೇಶ ಕುಂಬಾರ ಪಾಲ್ಗೊಂಡಿದ್ದರು.

## ದಿನ ಭವಿಷ್ಯ

| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ:** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು.

**ವೃಷಭ:** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ.

**ಮಿಥುನ:** ನೀವು ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ. ನಿಮ್ಮ ಕೆಲಸದ ಮೇಲೆ ಗಮನ ನೀಡಿದಲ್ಲಿ- ನೀವು ದುಪ್ಪಟ್ಟು ಕೆಲಸ ಮಾಡಬಹುದು.

**ಕರ್ಕಾಟಕ:** ನಿಮ್ಮ ಸಂಗಾತಿ ನಿಜವಾಗಿಯೂ ಅಸಾಧಾರಣ ಮನಸ್ಥಿತಿಯಲ್ಲಿದ್ದಂತೆ ತೋರುತ್ತದೆ, ನೀವು ಕೇವಲ ಅವರಿಗೆ ಇದನ್ನು ನಿಮ್ಮ ವೈವಾಹಿಕ ಜೀವನದ ಅತ್ಯುತ್ತಮ ದಿನವಾಗಿ ಮಾಡಲು ಸಹಾಯ ಮಾಡಿದರೆ ಸಾಕು.

**ಸಿಂಹ:** ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ಹಳೆಯ ಯಾವುದೇ ರೋಗ ನಿಮ್ಮನ್ನು ಕಾಡಬಹುದು.

**ಕನ್ಯಾ:** ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಭೂಮಿ ಅಥವಾ ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ಇಂದು ನಿಮಗೆ ಮಾರಕವಾಗಬಹುದು.

**ತುಲಾ:** ನೀವು ಯಾವುದೇ ದುಬಾರಿ ಸಾಹಸಕ್ಕೆ ಕೈಹಾಕುವ ಮೊದಲು ನಿಮ್ಮ ವಿವೇಚನೆ ಬಳಸಿ. ನೀವು ಕೆಟ್ಟ ಸಮಯವನ್ನು ಹೊಂದಿರುವವರೊಂದಿಗೆ ಸಂಪರ್ಕವನ್ನು ಹೆಚ್ಚಿಸುವುದನ್ನು ತಪ್ಪಿಸಿ.

**ವೃಶ್ಚಿಕ:** ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ. ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

**ಧನಸ್ಸು:** ವಿಜಯೋತ್ಸವವು ನಿಮಗೆ ಪ್ರಚಂಡ ಸಂತೋಷವನ್ನು ನೀಡುತ್ತದೆ. ನಿಮ್ಮ ಸಂತೋಷವನ್ನು ಅನುಭವಿಸಲು ನೀವಿದನ್ನು ನಿಮ್ಮ ಸ್ನೇಹಿತರ ಜೊತೆ ಹಂಚಿಕೊಳ್ಳಬಹುದು.

**ಮಕರ:** ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ. ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ.

**ಕುಂಭ:** ಸಮೃದ್ಧ ಮತ್ತು ಹೆಚ್ಚಿನ ಕೊಲೆಸ್ಟರಾಲ್ ಇರುವ ಆಹಾರ ತಪ್ಪಿಸಲು ಪ್ರಯತ್ನಿಸಿ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಮೀನ:** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ-ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು. ಅನಿರೀಕ್ಷಿತ ಅತಿಥಿಗಳು ಸಂಜೆ ನಿಮ್ಮ ಮನೆಯಲ್ಲಿ ತುಂಬಿರುತ್ತಾರೆ.

## ಸ್ವಯಂಪ್ರೇರಿತ 41 ಜನರು ರಕ್ತದಾನ, ರಕ್ತದಾನದಿಂದ ಸಾಕಷ್ಟು ಜನರಿಗೆ ಮರುಜೀವ: ಟಿಹೆಚ್‌ಓ ಗಫಾರ್ ಪ್ರಶಂಸೆ


• ಉದಯವಾಹಿನಿ, ಚಿಂಚೋಳಿ

ಜನ್ಮದಿನ ನಿಮಿತ್ತ ರಕ್ತದಾನ ಶಿಬಿರ ಹಮ್ಮಿಕೊಂಡಿರುವುದು ದಾನದಲ್ಲಿಯೇ ಅತ್ಯಂತ ಶ್ರೇಷ್ಠ ದಾನ ರಕ್ತದಾನ ಇದರಿಂದ ಸಾಕಷ್ಟು ಜನರಿಗೆ ಮರುಜೀವ ಸಿಗುತ್ತದೆ ರಕ್ತದಾನಿಗಳಿಗೆ ಬಹಳಷ್ಟು ಪುಣ್ಯ ದೊರಕುತ್ತದೆ ಎಂದು ಟಿಹೆಚ್ ಓ ಡಾ.ಮಹ್ಮದ್ ಗಫಾರ್ ಹೇಳಿದರು.

**ಮೊಗದಂಪೂರ 47ನೇ ಜನ್ಮದಿನ**

ತಾಲ್ಲೂಕಿನ ಕುಂಚಾವರಂ ಗ್ರಾಮದ ಸಮೂದಾಯ ಆರೋಗ್ಯ ಕೇಂದ್ರದಲ್ಲಿ ಹಿರಿಯ ಮುಖಂಡ ಡಿ.ಅಶೋಕ ಮೊಗದಂಪೂರ ಅವರ 47ನೇ ಹುಟ್ಟುಹಬ್ಬದ ಅಂಗವಾಗಿ ಅಭಿಮಾನಿಗಳ ಬಳಗದಿಂದ ಹಮ್ಮಿಕೊಂಡ ರಕ್ತದಾನ ಶಿಬಿರದಲ್ಲಿ ಮಾತನಾಡಿದ ಅವರು, 41 ಜನರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದ್ದು ಅತ್ಯಂತ ಶ್ಲಾಘನೀಯವಾಗಿದೆ.

ದೇಶದಲ್ಲಿ ರಕ್ತ ಸಿಗದೆ ಅನೇಕರು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ ಇಂಥಹ ಸಂದರ್ಭದಲ್ಲಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ರಕ್ತದಾನಿಗಳಿಗೆ ಹಾಗೂ ಅಶೋಕ ಮೊಗದಂಪೂರ ಅವರಿಗೆ ಬಹಳಷ್ಟು ಪುಣ್ಯ ದೊರಕಲಿದೆ. ಪ್ರತಿಯೊಬ್ಬರು ಹುಟ್ಟುಹಬ್ಬಗಳಿಗೆ ದುಂದುವೆಚ್ಚ ಮಾಡುವ ಬದಲು ರಕ್ತದಾನ ಶಿಬಿರ ಹಮ್ಮಿಕೊಂಡು ರಕ್ತದಾನ ಮಾಡಿದರೆ ಗರ್ಭಿಣಿಯರಿಗೆ, ಹೆರಿಗೆ ಮಹಿಳೆಯರಿಗೆ, ಅಪಘಾತ ಸಂಭವಿಸಿದ ರೋಗಿಗಳಿಗೆ ಬಹಳಷ್ಟು ಜನರಿಗೆ ಜೀವ ಉಳಿಸಬಹುದು ಎಂದರು.



ಉದಯವಾಹಿನಿ ಚಿತ್ರ

ಕುಂಚಾವರಂ ಸಮೂದಾಯ ಆರೋಗ್ಯ ಕೇಂದ್ರದ ಆಡಳಿತ ಅಧಿಕಾರಿ ಡಾ.ಬಾಲಾಜಿ, ಹಿರಿಯ ಮುಖಂಡ ಡಿ.ಅಶೋಕ್ ಮೊಗದಂಪೂರ ಮಾತನಾಡಿದರು.

ಈ ಸಂದರ್ಭದಲ್ಲಿ ಕುಂಚಾವರಂ ಗ್ರಾಪಂ ಮಾಜಿ ಅಧ್ಯಕ್ಷ ಸುಜಾತಾ ರಮೇಶ, ಬಿ.ಗೋಪಾಲ, ಮಹ್ಮದ್ ರೀಯಾಜ್, ಶೇಖರ, ಮಹ್ಮದ್ ಇಸಾಕ್, ಖದೀರ್, ಅಶೋಕ, ಜಗದೀಶ, ರಮೇಶ, ಅಂತಪ್ಪ, ಗೋವರ್ಧನ, ಸೀನು, ನವೀನ್, ಸಂಗಮೇಶ, ಮಹೇಶ, ಪಂಡರಿ ಬ್ಯಾಗರಿ, ಅರವಿಂದ್, ಅನೇಕರಿದ್ದರು.

### • ಭಕ್ತಿ ವ್ಯಕ್ತಿಯ ಮೇಲೆ ಬಂದರೆ ಆತ ಸರ್ವಾಧಿಕಾರಿ • ಅಂತಹ ಸರ್ವಾಧಿಕಾರ ಪ್ರಜಾಪ್ರಭುತ್ವಕ್ಕೆ ಮಾರಕ

## ದುಷ್ಟ ಸಿದ್ಧಾಂತ ವಿರುದ್ಧ ಹೋರಾಟ ಅನಿವಾರ್ಯ: ಪ್ರೀಯಾಂಕ್ ಖರ್ಗೆ

• ಉದಯವಾಹಿನಿ, ಚಿಂಚೋಳಿ

ಭಕ್ತಿ ವ್ಯಕ್ತಿಯ ಮೇಲೆ ಬಂದರೆ ಆತ ಸರ್ವಾಧಿಕಾರಿಯಾಗುತ್ತಾನೆ, ಅಂತಹ ಸರ್ವಾಧಿಕಾರ ಪ್ರಜಾಪ್ರಭುತ್ವಕ್ಕೆ ಮಾರಕವಾಗುತ್ತದೆ ಎಂದು ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂಸತ್ತಿನ ಕೊನೆಯ ಭಾಷಣದಲ್ಲಿ ಹೇಳಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿಬಿಟಿ, ಕಲಬುರ್ಗಿ ಉಸ್ತುವಾರಿ ಸಚಿವ ಪ್ರೀಯಾಂಕ್ ಖರ್ಗೆ ಹೇಳಿದರು.

ತಾಲ್ಲೂಕಿನ ಸುಲೇಪೇಟ ಗ್ರಾಮದಲ್ಲಿ ನಿರ್ಮಾಣಗೊಂಡ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಪಂಚಲೋಹದ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ಅವರು, ರಾಜಕಾರಣಿಗಳು ದೈವಿ ಸ್ವರೂಪದವರಾಗುತ್ತಿದ್ದಾರೆ, ವ್ಯಕ್ತಿಗಳ ವಿಜೃಂಭಣೆಯಾಗುತ್ತಿದೆ, ಹಾಗಾಗಬಾರದು, ಯಾಕೆಂದರೆ ಸಂವಿಧಾನದ ಪ್ರಕಾರವೇ ಎಲ್ಲವೂ ನಡೆಯಬೇಕೇ ಹೊರತು ವ್ಯಕ್ತಿಯ ಇಚ್ಛೆಯಂತಲ್ಲ ನಾವೆಲ್ಲಾ ಗೆದ್ದು ಬಂದಿರುವುದು ಸಂವಿಧಾನದ ಅಡಿಯಲ್ಲಿ ವಿನಾಃ ಯಾವುದೇ ದೈವದಿಂದಲ್ಲ, ಸಂವಿಧಾನದ ಮೂಲ ಆಶಯಗಳಿಗೆ ಧಕ್ಕೆಯಾಗದಂತೆ ತಿದ್ದುಪಡಿಗಳನ್ನು ತರಲಾಗಿದೆ.



ಉದಯವಾಹಿನಿ ಚಿತ್ರ

> 12ನೇ ಶತಮಾನದಲ್ಲಿ ವಿಶ್ವಗುರು ಬಸವೇಶ್ವರರು ವಚನ ಸಾಹಿತ್ಯ ಮೂಲಕ ಸಮಾನತೆ ನೀಡಿದರು, ತದನಂತರ ಬಾಬಾ ಸಾಹೇಬ್ ಅಂಬೇಡ್ಕರ್ ರವರು ವಿಶ್ವದಲ್ಲೇ ಅತ್ಯಂತ ಜ್ಞಾನವುಳ್ಳವರಾಗಿದ್ದರು, ಅವರು ಎಲ್ಲ ಡಿಗ್ರಿಗಳು ಶಿಕ್ಷಣದ ಮೂಲಕ ಪಡೆದುಕೊಂಡರು, ಅವರು ಓದದ ಡಿಗ್ರಿ ವಿಶ್ವದಲ್ಲೆ ಇಲ್ಲ ಅವರು ಹೋಗದೆ ಇರಲಾರದ ದೇಶವಿಲ್ಲ ಹಾಗಾಗಿ ಅಂಬೇಡ್ಕರ್ ಅವರು ಭಾರತಕ್ಕೆ ಸರ್ವಸಮಾನತೆಯ ಅತ್ಯಂತ ಬಲಿಷ್ಠ ಸಂವಿಧಾನ ಬರೆದು ಕೊಟ್ಟು ಪ್ರಜಾಪ್ರಭುತ್ವಕ್ಕೆ ಗಟ್ಟಿ ಬುನಾದಿ ಹಾಕಿದ್ದಾರೆ ಅವರು ಕೊಟ್ಟಿರುವ ಮೂಲಭೂತ ಹಕ್ಕುಗಳನ್ನು ಯಾರು ಕಸಿದುಕೊಳ್ಳಲು ಸಾಧ್ಯವಿಲ್ಲ -ಪ್ರೀಯಾಂಕ್ ಖರ್ಗೆ

ಸಾಮಾಜಿಕ ಹಾಗೂ ಆರ್ಥಿಕ ನ್ಯಾಯ ಸಮಾನವಾಗಿ ಸಿಗಬೇಕು ಎನ್ನುವ ಆಶಯಕ್ಕೆ ಧಕ್ಕೆಯಾಗಿಲ್ಲ, ಆದರೆ ಕೆಲ ದುಷ್ಟ ಸಿದ್ಧಾಂತಗಳು ಬಸವ ಹಾಗೂ ಅಂಬೇಡ್ಕರ್ ಅವರ ಆಶಯಗಳ ವಿರುದ್ಧ ನಡೆಯುತ್ತಿವೆ, ಅವುಗಳ ವಿರುದ್ಧ ಹೋರಾಟ ನಡೆಸಬೇಕಾದ ಅನಿವಾರ್ಯತೆಯಿದೆ.

ಸಂವಿಧಾನ ನಮ್ಮೆಲ್ಲರ ಹಕ್ಕು ಅದನ್ನು ರಕ್ಷಿಸಿಕೊಂಡು ಮುಂದುವರೆಯುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿದ ಅವರು, 2600 ವರ್ಷಗಳ ಹಿಂದೆ ಸರ್ವರಿಗೂ ಜ್ಞಾನೋಧಯ ಮಾಡಿಸಿದ್ದು ಭಗವಾನ್ ಗೌತಮ ಬುದ್ಧರು ಮೊದಲನೆಯ ಮಹಾಪುರುಷರಾಗಿದ್ದಾರೆ.

> ಅಂಬೇಡ್ಕರ್ ಅವರಿಗೆ ನೋಡಲು ಮೂರ್ತಿಗಳಲ್ಲಿ ನೋಡಿದರೆ ಸಿಗುವುದಿಲ್ಲ ಅವರ ಪುಸ್ತಕಗಳಲ್ಲಿ ಚನ್ನಾಗಿ ಓದಿಕೊಂಡರೆ ನಿಜವಾಗಿ ಅಂಬೇಡ್ಕರ್ ಜೀವಂತವಾಗಿ ಸಿಗುತ್ತಾರೆ. ನಮಗೆ ಅಂಬೇಡ್ಕರ್ ಎಷ್ಟು ಮುಖ್ಯನೋ ಅವರ ಪುಸ್ತಕಗಳು ಸಹ ಅಷ್ಟೆ ಮುಖ್ಯವಾಗಿವೆ, ಎಲ್ಲಾ ಜಾತಿಧರ್ಮಗಳು ಒಗ್ಗಟ್ಟಾಗಿ ಇದ್ದಾಗ ಮಾತ್ರ ಪ್ರಜಾಪ್ರಭುತ್ವ ವ್ಯವಸ್ಥೆ ಚನ್ನಾಗಿಯಿರುತ್ತದೆ, ಎಪಿಎಲ್ ಬಿಪಿಎಲ್ ಕಾರ್ಡ್ ವಿತರಣೆ ಹಿಂದೆ ಅಂಬೇಡ್ಕರ್ ಸಾಕಷ್ಟು ಪರಿಶ್ರಮವಿದೆ
> -ಪೂಜ್ಯ ಜ್ಞಾನಪ್ರಕಾಶ ಸ್ವಾಮೀಜಿ ಮೈಸೂರಿನ ಉರಿಲಿಂಗ ಪೆದ್ದಿ ಸಂಸ್ಥಾನ ಮಠ

**ಅಂಬೇಡ್ಕರ್ ಪ್ರತಿಮೆ ಅನಾವರ**

ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಮಾತನಾಡಿದರು. ಮಲ್ಲಿಕಾರ್ಜುನ ಗುಲಗುಂಜಿ ಸ್ವಾಗತಿಸಿದರು, ಅಶೋಕ ಹೂವಿನಭಾವಿ ನಿರೂಪಿಸಿದರು, ಮಾಣಿಕರಾವ ಗುಲಗುಂಜಿ ವಂದಿಸಿದರು. ಈ ಸಂದರ್ಭದಲ್ಲಿ ಅಣದೂರ ಬುದ್ಧವಿಹಾರದ ಪೂಜ್ಯ ಭಂತೆ ಜ್ಞಾನ ಸಾಗರ, ಎಂಎಲ್ಸಿ ಜಗದೇವ ಗುತ್ತೇದಾರ, ಜೆಡಿಎಸ್ ಹಿರಿಯ ಮುಖಂಡ ಸಂಜೀವನ್ ಯಾಕಾಪೂರ, ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ, ಮಲ್ಲಿಕಾರ್ಜುನ ಪಾಲದಿ, ಸರಾಜು ಕಪನೂರ, ಗ್ರಾಪಂ ಅಧ್ಯಕ್ಷ ಸಂ ತೋಷ ರಾಠೋಡ, ಭೀಮರಾವ ಟಿಟಿ, ಗೋಪಾಲರಾವ ಕಟ್ಟಿಮನಿ, ಸರಸ್ವತಿ ಮಲ್ಲಿಕಾರ್ಜುನ ಗಿರಿ, ರುದ್ರಮುನಿ ರಾಮತೀರ್ಥಕರ್, ವಿಶ್ವನಾಥ ಪವ್ಹಾರ, ತಾಹೇರ ಪಟೇಲ, ರಜಾಕಪಟೇಲ, ವಿಲಾಸ ಗೌತಮ್, ಬಾಬಣ್ಣ ಗುಲಗುಂಜಿ, ಶ್ರೀಮಂತ ಕಟ್ಟಿಮನಿ, ಶಾಮರಾವ ಮಾದೇಶಿ, ಆನಂದ ಟೈಗರ, ಅಬ್ದುಲ್ ಬಾಷೀದ್, ಜಗನ್ನಾಥ ಗಂಜಗಿರಿ, ಸಂಪತಕುಮಾರ, ಅಮೃತರಾವ, ದೇವೀಂದ್ರಪ್ಪಾ, ಮಹೇಶ ಕೆಕೆ, ರಾಹುಲ್, ವೀರಭದ್ರಪ್ಪ, ಮೇಘನಾಥರಾವ, ರೇವಣಸಿದ್ದಪ್ಪ, ಮಹಾದೇವ, ರವಿಕುಮಾರ, ಪರಮೇಶ್ವರ, ಪ್ರಕಾಶ, ಶ್ರೀಕಾಂತ, ಶಿವಪುತ್ರ, ಶ್ರೀಧರ ವಗ್ಗಿ, ಉಮೇಶ ಯಾಕಾಪೂರ, ಅನೇಕರಿದ್ದರು.

## ಇಂದು ಟಿಎಪಿಸಿಎಂಎಸ್ ನೂತನ ಮಳಿಗೆಗಳ ಉದ್ಘಾಟನೆ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಚಂದಾಪೂರದ ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿಯಮಿತ ವತಿಯಿಂದ ಆವರಣದಲ್ಲಿ ನಿರ್ಮಿಸಿದ ನೂತನ ಮಳಿಗೆಗಳು ಬೆಳಿಗ್ಗೆ 11ಗಂಟೆಗೆ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಉದ್ಘಾಟನೆ ಮಾಡಲಿದ್ದಾರೆ ಎಂದು ಟಿಎಪಿಸಿಎಂಎಸ್ ಅಧ್ಯಕ್ಷ ರಮೇಶ ಯಾಕಾಪೂರ ತಿಳಿಸಿದ್ದಾರೆ.



ಮುಖ್ಯ ಅತಿಥಿಗಳಾಗಿ ಕೆಎಸ್.ಸಿ.ಎಂ.ಎಫ್ ರಾಜ್ಯ ನಿರ್ದೇಶಕರು ಅಮರೇಶ ಪಾಟೀಲ ಹಾಗೂ ಸಂಜಯ ಪಾಟೀಲ, ಜಿಲ್ಲಾ ಸಹಕಾರ ಸಂಘದ ಉಪ ನಿಬಂಧಕ ಕಿಶೋರಕುಮಾರ ಪಾಟೀಲ, ಸೇಡಂ ಸಹಕಾರ ಸಂಘದ ಸಹಾಯಕ ನಿಬಂಧಕ ಮಲ್ಲಿಕಾರ್ಜುನ ಛಲವಾದಿ ಆಗಮಿಸುತ್ತಿದ್ದು ಟಿಎಪಿಸಿಎಂಎಸ್ ಅಧ್ಯಕ್ಷ ರಮೇಶ ಯಾಕಾಪೂರ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರಣ ಟಿಎಪಿಸಿಎಂಎಸ್ ಸಂಘದ ನಿರ್ದೇಶಕ ಮಂಡಳಿ ಸೇರಿದಂತೆ ತಾಲ್ಲೂಕಿನ ವಿವಿಧ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಣಾ ಅಧಿಕಾರಿಗಳು ಮತ್ತು ನಿರ್ದೇಶಕರು, ಸದಸ್ಯರು, ವ್ಯವಸ್ಥಾಪಕರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕೋರಿದ್ದಾರೆ.

## ಗುಂಪಾಗಿ ಮೀನುಗಾರಿಕೆ ನಡೆಸಿ, ಎಚ್ಚರದಿಂದಿರಿ: ಮೀನುಗಾರಿಕೆ ಇಲಾಖೆ

• ಉದಯವಾಹಿನಿ, ಉಡುಪಿ

ಮೀನುಗಾರರು ಸಮುದ್ರದಲ್ಲಿ ಜಾಗರೂಕರಾಗಿರಲು ಮತ್ತು ಎರಡು ಮೂರು ದೋಣಿಗಳ ಗುಂಪು ಗಳಲ್ಲಿ ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಸೂಚಿಸಲಾಗಿದೆ, ವಿಶೇಷವಾಗಿ ಸುರಕ್ಷತೆ ಮತ್ತು ಭದ್ರತೆಯ ದೃಷ್ಟಿಕೋನದಿಂದ ಕ್ರಮಕೈಗೊಳ್ಳಲಾಗಿದೆ. ಯಾವುದೇ ಅನುಮಾನಾಸ್ಪದ ದೋಣಿಗಳು ಮತ್ತು ಅಪರಿಚಿತ ವ್ಯಕ್ತಿಗಳ ಚಲನವಲನಗಳ ಮೇಲೆ ನಿಗಾ ಇಡಲು ಮೀನುಗಾರಿಕಾ ಇಲಾಖೆಯ ಜಂಟಿ ನಿರ್ದೇಶಕ ವಿವೇಕ್ ಆರ್, ಮೀನುಗಾರರಿಗೆ ಸೂಚಿಸಿದ್ದಾರೆ. ಯಾವುದೇ ಸಂದೇಹಗಳು ಅಥವಾ ದೃಶ್ಯಗಳು ಕಂಡುಬಂದರೆ, ತಕ್ಷಣವೇ ಭಾರತೀಯ ನೌಕಾಪಡೆ, ಕರಾವಳಿ ಭದ್ರತಾ ಪೊಲೀಸರು ಅಥವಾ ಇತರ ಸಂಬಂಧಿತ ಭದ್ರತಾ ಸಂಸ್ಥೆಗಳಿಗೆ ತಿಳಿಸಲು ಅವರಿಗೆ ಸೂಚಿಸಲಾಗಿದೆ.


ಉದಯವಾಹಿನಿ ಚಿತ್ರ

**ನಭಾಮಿತ್ರ ಅಪ್ಲಿಕೇಶನ್ ಬಳಕೆ**

ಮರಳು ದಂಡೆಗಳು ಅಥವಾ ಮಧ್ಯ ಸಮುದ್ರ ದ್ವೀಪಗಳಲ್ಲಿ ಜನರು ಕಂಡುಬಂದರೆ ಮೀನುಗಾರರು ಸಹ ವರದಿ ಮಾಡಬೇಕು. ಅಂತಹ ಮಾಹಿತಿಯನ್ನು ಪ್ರಸಾರ ಮಾಡಲು ಸ್ಥಾಪಿಸಲಾದ ಟ್ರಾನ್ಸ್‌ಪಾಂಡರ್‌ಗಳು ಮತ್ತು ನಭಾಮಿತ್ರ ಅಪ್ಲಿಕೇಶನ್‌ನ ಬಳಕೆಯನ್ನು ಇಲಾಖೆ ಒತ್ತಿಹೇಳಿದೆ. ರಾತ್ರಿಯಲ್ಲಿ ಅಥವಾ ಲಂಗರು ಹಾಕುವಾಗ ಮೀನುಗಾರರು ತಮ್ಮ ನ್ಯಾವಿಗೇಷನಲ್ ದೀಪಗಳನ್ನು ಆನ್ ಮಾಡಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಕರಾವಳಿ ಭದ್ರತಾ ಪಡೆಗಳ ತಪಾಸಣೆಯ ಸಂದರ್ಭದಲ್ಲಿ, ಎಲ್ಲಾ ಮೀನುಗಾರರಿಂದ ಸಂಪೂರ್ಣ ಸಹಕಾರವನ್ನು ನಿರೀಕ್ಷಿಸಲಾಗಿದೆ.

ಎಲ್ಲಾ ಸಮಯದಲ್ಲೂ ಕಿಖ-ಕೋಡೆಡ್ ಆಧಾರ್ ಕಾರ್ಡ್‌ಗಳು, ನೋಂದಣಿ ಪ್ರಮಾಣ ಪತ್ರಗಳು, ಮೀನುಗಾರಿಕೆ ಪರವಾನಗಿಗಳು ಮತ್ತು ಇತರ ಅಗತ್ಯ ದಾಖಲೆಗಳನ್ನು ಕೊಂಡೊಯ್ಯಲು ಸೂಚಿಸಲಾಗಿದೆ.

## ಆರೋಗ್ಯಕರ ಜೀವನ ಉತ್ತಮ ದೃಷ್ಟಿಗೆ ದಾರಿ: ಡಾ.ಬಿ.ಜಿ.ಪ್ರದೀಪ್

• ಉದಯವಾಹಿನಿ, ಚಿತ್ರದುರ್ಗ

ಆರೋಗ್ಯಕರ ಜೀವನ ಉತ್ತಮ ದೃಷ್ಟಿಗೆ ದಾರಿ ಎಂದು ಜಿಲ್ಲಾಸ್ಪತ್ರೆಯ ನೇತ್ರ ತಜ್ಞರಾದ ಡಾ.ಬಿ.ಜಿ. ಪ್ರದೀಪ್ ಅಭಿಪ್ರಾಯಪಟ್ಟರು.

ನಗರದ ಕರ್ನಾಟಕ ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದಲ್ಲಿ ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳ ಕಚೇರಿ ವತಿಯಿಂದ ಕೆಓಎಫ್ ನಿಗಮದ ಎಲ್ಲಾ ವಿಭಾಗದ ನೌಕರರಿಗೆ ಉಚಿತ ನೇತ್ರ ತಪಾಸಣೆ ಹಾಗೂ ರಕ್ತದೊತ್ತಡ, ಮಧುಮೇಹ ಪರೀಕ್ಷೆ ನಡೆಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಉತ್ತಮವಾದ ಆಹಾರ ಕ್ರಮಗಳನ್ನು ಅನುಸರಿಸುವುದನ್ನು ಜನ ಮರೆತಿದ್ದಾರೆ. ಉತ್ತಮ ಚಟುವಟಿಕೆಯುಳ್ಳ ಜೀವನ ಶೈಲಿ ರೂಢಿಸಿಕೊಂಡಿರುವುದಿಲ್ಲ. ಇವೆಲ್ಲವುಗಳ ವ್ಯತ್ಯಾಸದಿಂದ ಮಧುಮೇಹ, ರಕ್ತದೊತ್ತಡದಂತಹ ಕಾಯಿಲೆಗಳು ಹೆಚ್ಚಾಗುತ್ತಿವೆ. ಇಂತಹ ಖಾಯಿಲೆಗಳಿಂದ ಅಕ್ಷಿಪಟಲದ ತೊಂದರೆಯಿಂದ ದೃಷ್ಟಿದೋಷಗಳು, ಅಂಧತ್ವ ಹೆಚ್ಚಾಗುತ್ತಿರುವುದರ ಬಗ್ಗೆ ಆತಂಕ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ. ಶ್ರೀನಿವಾಸಮೂರ್ತಿ ಮಾತನಾಡಿ, ಸಾಮಾನ್ಯವಾಗಿ ಜನರು ವಿವಿಧ ರೀತಿಯ ಅಡುಗೆಗಳನ್ನ ಮಾಡುವುದನ್ನೆ ಮರೆತುಬಿಟ್ಟಿದ್ದಾರೆ. ಬೇಳೆ ಸಾರು, ಅನ್ನ ಮಾಡುವುದು ಸರ್ವೆ ಸಾಮಾನ್ಯವಾಗಿದ್ದು, ಬಹುಬೇಗ ಮಧುಮೇಹ ಬರುವ ಲಕ್ಷಣಗಳು ಹೆಚ್ಚಾಗಿವೆ.

ಎಲ್ಲಾ ರೀತಿಯ ಧಾನ್ಯಗಳನ್ನು, ಸಿರಿಧಾನ್ಯಗಳನ್ನು, ದ್ವಿದಳ ಧಾನ್ಯಗಳನ್ನು ಮೊಳಕೆ ಕಾಳುಗಳಿಂದ ತಯಾರಿಸುವ ಆಹಾರ ಪದಾರ್ಥಗಳನ್ನು ಬಳಸುವುದು ಅಭ್ಯಾಸ ಮಾಡಿಕೊಳ್ಳಬೇಕು. ದಿನವೂ ಅರ್ಧ ಗಂಟೆ ಉತ್ತಮ ದೈಹಿಕ ಚಟುವಟಿಕೆಗಳಾದ ಯೋಗ, ಧ್ಯಾನ, ವ್ಯಾಯಾಮ, ವಾಕಿಂಗ್ ಮಾಡುವುದರೊಂದಿಗೆ ಉತ್ತಮ ಆರೋಗ್ಯ ಹೊಂದಬಹುದಾಗಿದೆ ಎಂದು ಸಲಹೆ ನೀಡಿದರು.

> ಸಾಮಾನ್ಯವಾಗಿ ಹಿಂದೆ ಕನ್ನಡಕ ಬರುತ್ತಿದ್ದು 40 ವರ್ಷ ವಯಸ್ಸಿನ ನಂತರ ಇರುತ್ತಿತ್ತು. ಹಾಗಾಗಿ ಅದನ್ನು ಚಾಳೀಸು ಎಂಬುದು ಅಭ್ಯಾಸ. ಆದರೆ ಈಗ ಯಾವ ವಯಸ್ಸಿಗಾದರೂ ಬರಬಹುದು. ಉತ್ತಮ ಪೋಷಕಾಂಶವುಳ್ಳ ತರಕಾರಿಗಳನ್ನು, ವಿಟಮಿನ್-ಎ ಅಂಶ ಇರುವ ಹಣ್ಣು, ತರಕಾರಿ ಸೇವಿಸಿ ಉತ್ತಮ ದೃಷ್ಟಿ ಹೊಂದಬಹುದಾಗಿದೆ
> -ಡಾ.ಬಿ.ಜಿ.ಪ್ರದೀಪ್, ನೇತ್ರ ತಜ್ಞ

ಓಎಫ್ ವ್ಯವಸ್ಥಾಪಕ ನಿರ್ದೇಶಕ ಡಾ ಜೈಕೃಷ್ಣ, ಜಿಲ್ಲಾ ಆಸ್ಪತ್ರೆಯ ನೇತ್ರಧಿಕಾರಿಗಳಾದ ಕೆ.ಸಿ.ರಾಮು, ಡಾ.ಐಶ್ವರ್ಯ, ಐಸಿಟಿಸಿ ವಿಭಾಗದ ನಾಗರಾಜ್, ಲೋಕೇಶ್, ಶುಶ್ರೂಷಾಧಿಕಾರಿ ಸ್ವಾತಿ, ಜಿಲ್ಲಾಸ್ಪತ್ರೆಯ ನೇತ್ರ ವಿಭಾಗದ ನೇಹಾ, ಗೀತಾ, ಅನಿಲ್ ಇದ್ದರು.

## ಅಕ್ರಮ ಮದ್ಯ ಮಾರಾಟ ತಡೆಗೆ ಹೆಚ್ಚಿನ ಕ್ರಮ ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ

• ಉದಯವಾಹಿನಿ, ಬೀದರ

ಜಿಲ್ಲೆಯಲ್ಲಿ ಅಕ್ರಮ ಅಬಕಾರಿ ಚಟುವಟಿಕೆಗಳನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಇನ್ನಷ್ಟು ಕಾರ್ಯಕ್ಷಮತೆ ವಹಿಸಿ ಹೆಚ್ಚಿನ ಗುಣ ಮಟ್ಟದ ಪ್ರಕರಣಗಳನ್ನು ದಾಖಲಿಸುಂತೆ ಅಬಕಾರಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ನಿರ್ದೇಶನ ನೀಡಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಳ್ಳಭಟ್ಟಿ ಸಾರಾಯಿ, ಸೇಂದಿ , ಅಕ್ರಮ ಮದ್ಯ ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ರೂಢಿಗತ ಆರೋಪಿಗಳ ವಿರುದ್ಧ ಭಾರತೀಯ ನಾಗರಿಕ ನ್ಯಾಯ ಸಂಹಿತೆ ಕಲಂ129 ರಂತೆ ಕ್ರಮ ವಹಿಸಲು ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಸಹಕಾರ ನೀಡಲು ಜಿಲ್ಲೆಯ ಎಲ್ಲಾ ತಹಶೀಲ್ದಾರ್‌ಗಳಿಗೆ ಸೂಚಿಸಿದರು. ಹಾಗೆಯೇ ಪೋಲಿಸ್ ಅಧಿಕಾರಿಗಳು ಕಳ್ಳಭಟ್ಟಿ ಮತ್ತು ಸೇಂದಿ ದಾಸ್ತಾನು ಬಗ್ಗೆ ಮೊಕದ್ದಮೆಗಳನ್ನು ದಾಖಲಿಸುವಾಗ ಅಬಕಾರಿ ಕಾಯ್ದೆಯೊಂದಿಗೆ ಭಾರತೀಯ ನಾಗರಿಕ ನ್ಯಾಯ ಸಂಹಿತೆ ಕಲಂ 123 ರಡಿಯೂ ಪ್ರಕರಣ ದಾಖಲಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.


ಉದಯವಾಹಿನಿ ಚಿತ್ರ

ತಹಶೀಲ್ದಾರ್‌ಗಳು ಕಳ್ಳಭಟ್ಟಿ, ಸೇಂದಿ ಮತ್ತು ಅಕ್ರಮ ಮದ್ಯ, ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಬಗ್ಗೆ ತಾಲ್ಲೂಕ ಮಟ್ಟದ ಸ್ಥಾಯಿ ಸಮಿತಿಯ ಸದಸ್ಯರುಗಳ ಸಭೆಯನ್ನು ಪ್ರತಿ ತಿಂಗಳು ನಡೆಸಿ ವಿವಿಧ ಇಲಾಖೆಗಳ ಸಾಧನೆಗಳ ಬಗ್ಗೆ ಪರಾಮರ್ಶಿಸಿ ಮಾಸಿಕ ವರದಿಯನ್ನು ಸಲ್ಲಿಸಲು ಜಿಲ್ಲೆಯ ಎಲ್ಲಾ ತಹಶೀಲ್ದಾರ್‌ಗಳಿಗೆ ಸೂಚಿಸಿದರು.

## ಮಾವಿನ ಹಣ್ಣಿನ ಲೋಡ್ ಲಾರಿ ಪಲ್ಟಿ ಚಾಲಕ ಅಪಾಯದಿಂದ ಪಾರು

• ಉದಯವಾಹಿನಿ, ಮಂಗಳೂರು

ಮಾವಿನ ಹಣ್ಣಿನ ಲೋಡ್ ತುಂಬಿದ್ದ ಲಾರಿ ಹೊಂಡಕ್ಕೆ ಬಿದ್ದ ಘಟನೆ ಪಚ್ಚನಾಡಿ ಬೋಂದೆಲ್ ಸಂಪರ್ಕ ರಸ್ತೆಯಲ್ಲಿ ನಡೆದಿದೆ.

ಉಡುಪಿ ಮಾವು ಮೇಳಕ್ಕೆ ಹೋಗುತ್ತಿದ್ದ ಲಾರಿ ಚಾಲಕನ ನಿಯಂತ್ರಣ ತಪ್ಪಿ ಹೊಂಡಕ್ಕೆ ಬಿದ್ದಿದೆ. ವಾಮಂಜೂರು ಕಡೆಯಿಂದ ಪಚ್ಚನಾಡಿ ಕಡೆ ಸಂಚರಿಸುತ್ತಿದ್ದ ಲಾರಿ ಪಲ್ಟಿಯಾಗಿದೆ. ಘಟನೆಯಲ್ಲಿ ಲಾರಿ ಚಾಲಕ ರಫೀಕ್ ಉಳಾಯಿಬೆಟ್ಟು ಅವರಿಗೆ ಗಾಯಗಳಾಗಿದ್ದು, ಸದ್ಯ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಗೊಂಡ ಚಾಲಕ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ.

## ಚರಂಡಿಯಲ್ಲಿ ಕೊಚ್ಚಿ ಹೋದ ವ್ಯಕ್ತಿ

• ಉದಯವಾಹಿನಿ, ಗೋಕಾಕ

ಇಲ್ಲಿನ ಅಂಬೇಡ್ಕರ್ ನಗರದ ನಿವಾಸಿ ಕಾಟೆಪ್ಪ ದುರಗಪ್ಪ ಶಿರಹಟ್ಟಿ (52) ಅವರು ಸಂಜೆ ಚರಂಡಿಯಲ್ಲಿ ಬಿದ್ದು ಕೊಚ್ಚಿಕೊಂಡು ಹೋಗಿದ್ದಾರೆ. ಧಾರಾಕಾರ ಮಳೆಯಿಂದಾಗಿ ಬೃಹತ್ ಚರಂಡಿಯಲ್ಲಿ ನೀರು ಹರಿಯುತ್ತಿತ್ತು. ಕಾಟೆಪ್ಪ ಅವರು ಚರಂಡಿ ಮೇಲೆ ನಡೆದುಕೊಂಡು ಹೊರಟಾಗ ಆಯತಪ್ಪಿ ಬಿದ್ದರು.

ಹತ್ತಿರದಲ್ಲಿದ್ದವರು ಅವರನ್ನು ಕಾಪಾಡಲು ಯತ್ನಿಸಿದರೂ ಸಾಧ್ಯವಾಗಲಿಲ್ಲ. ಕೆಲವೇ ನಿಮಿಷಗಳಲ್ಲಿ ಕಾಟೆಪ್ಪ ದೂರ ತೇಲಿಕೊಂಡು ಹೋದರು. ಸ್ಥಳಕ್ಕೆ ಧಾವಿಸಿದ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಹುಡುಕಾಟ ನಡೆಸಿದರು. ಮಳೆಯ ಕಾರಣ ಕಾರ್ಯಾಚರಣೆ ಸ್ಥಗಿತಗೊಂಡಿದ್ದು, ಬೆಳಿಗ್ಗೆ ಮತ್ತೆ ಆರಂಭಿಸಲಾಗುವುದು ಎಂದು ಗೋಕಾಕ ಠಾಣೆ ಪೊಲೀಸರು ತಿಳಿಸಿದ್ದಾರೆ.

## ಸಮಾಜಕ್ಕೆ ಶಂಕರರ ಕೊಡುಗೆ ಅಪಾರ: ಗೋಪಾಲ ಪನ್ನೀಸ್

• ಉದಯವಾಹಿನಿ, ಲಕ್ಷ್ಮೇಶ್ವರ

ಹಿಂದೂ ಧರ್ಮಕ್ಕೆ ಶಂಕರಾಚಾರ್ಯರ ಕೊಡುಗೆ ದೊಡ್ಡದು. ಅಂದಿನ ದಿನಗಳಲ್ಲಿಯೇ ಹಿಂದೂ ಸಮಾಜ ಸಂಘಟನೆಗೆ ಅವರು ಒತ್ತು ನೀಡಿದ್ದರು. ಅವರ ಜಯಂತಿ ಆಚರಣೆ ನಾಡಿನೆಲ್ಲೆಡೆ ಅದ್ದೂರಿಯಾಗಿ ಆಚರಿಸಬೇಕು ಎಂದು ಪಟ್ಟಣದ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪನ್ನೀಸ್ ಹೇಳಿದರು.

ಇಲ್ಲಿನ ಶಂಕರಭಾರತಿ ಮಠದಲ್ಲಿ ವಿಪ್ರ ಸಮಾಜದವರು ಹಮ್ಮಿಕೊಂಡಿದ್ದ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧಿಸಿದ ಹಾಗೂ ವೃತ್ತಿಯಲ್ಲಿ ಸಾರ್ಥಕ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಸಮಾಜದ ಹಿರಿಯರಿಗೆ ನಡೆದ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಂಕರಾಚಾರ್ಯರು ಪ್ರತಿಪಾದಿಸಿದ್ದ ಸಿದ್ಧಾಂತ ಮನುಕುಲದ ಒಳಿತಿನ ಆಶಯ, ಜಗತ್ತಿನ ಶಾಂತಿ, ಸೌಹಾರ್ದತೆಗೆ ಧಾರ್ಮಿಕ ಚಿಂತನೆಗಳ ಅಡಿಪಾಯ ಹಾಕಿದ್ದರು. ಬ್ರಾಹ್ಮಣ ಸಮಾಜದ ವತಿಯಿಂದ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದೇವೆ. ಸಮಾಜದ ಸಂಘಟನೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು ಎಂದರು.

ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಮಾತನಾಡಿ, ದೇಶದ ಧಾರ್ಮಿಕ ಪರಂಪರೆ, ಸಂಸ್ಕೃತಿ ಉನ್ನತಿಗೆ ಶಂಕರಾಚಾರ್ಯರರ ಕೊಡುಗೆ ಅಪಾರ. ತಮ್ಮ ಜೀವಿತಾವಧಿಯ ಅಲ್ಪ ಅವಧಿಯಲ್ಲೇ ಅಗಾಧವಾದ ಪಾಂಡಿತ್ಯವನ್ನು ಬೆಳೆಸಿಕೊಂಡು ಇಡೀ ವಿಶ್ವದಲ್ಲೇ ಅಪ್ರತಿಮವಾದ ಸಾಧನೆ ಮಾಡಿದ ಹಿಂದೂ ಧರ್ಮವನ್ನು ಪುನರುತ್ಥಾನ ಮಾಡಿವರು ಶಂಕರಾಚಾರ್ಯರು. ಶಂಕರರು ಒಂದು ವರ್ಗಕ್ಕೆ ಪಂಗಡಕ್ಕೆ ಸೀಮಿತವಾಗದೇ ಅಖಂಡ ಹಿಂದೂ ಸಮಾಜಕ್ಕೆ ಸೇರಿದವರಾಗಿದ್ದರು.

ಬ್ರಾಹ್ಮಣ ಸಮಾಜದ ಮಕ್ಕಳು ರಾಜ್ಯಮಟ್ಟದಲ್ಲಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯ. ವಿವಿಧ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ ನಿವೃತ್ತಿಹೊಂದಿದ ಸಮಾಜದ ಹಿರಿಯರು ಸಂಘಟನೆಗೆ ಮಹತ್ವ ನೀಡಬೇಕು' ಎಂದರು.

## ಗೂಡ್ಸ್ ವಾಹನ ಪಲ್ಟಿ: ಗಾಯ

• ಉದಯವಾಹಿನಿ, ಗಂಗಾವತಿ

ಕನಕಗಿರಿ ತಾಲ್ಲೂಕಿನ ಜೀರಾಳ ಕಲ್ಗುಡಿ ಕೆರೆಯಲ್ಲಿ ಹೂಳೆತ್ತುವ ಕಾಮಗಾರಿ ಕೆಲಸಕ್ಕೆ ಕೂಲಿಕಾರ್ಮಿಕರನ್ನು ಕರೆದೊಯ್ಯುತ್ತಿದ್ದ ಗೂಡ್ಸ್ ವಾಹನವೊಂದು ಬರಗೂರು ಕ್ರಾಸ್ ಬಳಿ ಪಲ್ಟಿಯಾಗಿದ್ದು, 30 ಮಂದಿ ಗಾಯಗೊಂಡಿದ್ದಾರೆ.

ಮೂನ್ನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂಲಿಕಾರರು ಉದ್ಯೋಗ ಖಾತ್ರಿ ಯೋಜನೆಯಡಿ ಜೀರಾಳ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಗೂಡ್ಸ್ ವಾಹನವೊಂದರಲ್ಲಿ ತೆರಳುತ್ತಿದ್ದ ವೇಳೆ ಚಾಲಕನ ಅಲಕ್ಷ್ಯ ಹಾಗೂ ಅತಿವೇಗದ ಚಾಲನೆಯಿಂದ ವಾಹನ ಪಲ್ಟಿಯಾಗಿದ್ದು, ಮಹಿಳೆಯರು ಹಾಗೂ ಪುರುಷರು ಸೇರಿ ಒಟ್ಟು 30 ಮಂದಿ ಗಾಯಗೊಂಡಿದ್ದಾರೆ.

ಗಾಯಗೊಂಡವರಲ್ಲಿ 27 ಮಂದಿಯನ್ನು ಗಂಗಾವತಿ ಉಪ ವಿಭಾಗ ಆಸ್ಪತ್ರೆಗೆ ದಾಖಲಿಸಲಾಗಿದೆ. ತೀವ್ರವಾಗಿ ಗಾಯಗೊಂಡ ಇಬ್ಬರು ಕೂಲಿಕಾರರನ್ನು ಕೊಪ್ಪಳ ಜಿಲ್ಲಾ ಆಸ್ಪತ್ರೆ, ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆ ಕುರಿತ ವಿಷಯ ತಿಳಿಯುತ್ತಿದ್ದಂತೆ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ, ಸರ್ಕಾರಿ ಗಂಗಾವತಿ ಉಪವಿಭಾಗ ಆಸ್ಪತ್ರೆಗೆ ಭೇಟಿ ನೀಡಿ, ಗಾಯಾಳುಗಳ ಆರೋಗ್ಯ ವಿಚಾರಿಸಿದರು.

ನಂತರ ಮೇಲಾಧಿಕಾರಿಗಳಿಗೆ ಕರೆ ಮಾಡಿ, ವಾಹನ ಚಾಲಕ ಮತ್ತು ಪಂಚಾಯಿತಿ ಪಿಡಿಒ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ. ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಕೂಡ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು.

### • ಗ್ರಾಮದ ಚರಂಡಿಯಲ್ಲಿ ಹೂಳು ತುಂಬಿಕೊಂಡಿದ್ದು, ಚರಂಡಿ ಸ್ವಚ್ಛಗೊಳಿಸಿಲ್ಲ. ಸೊಳ್ಳೆಗಳ ಕಾಟ ಹೇಳತೀರದು

## ಸೌಲಭ್ಯ ವಂಚಿತ ಚಳಗೇರಿ ಗ್ರಾಮ: ಸಮಸ್ಯೆಗಳಿಗೆ ಸ್ಪಂದಿಸಿದ ಅಧಿಕಾರಿಗಳು


• ಉದಯವಾಹಿನಿ, ರಾಣೆಬೆನ್ನೂರು

ತಾಲ್ಲೂಕಿನ ಚಳಗೇರಿ ಗ್ರಾಮವು ನಗರದಿಂದ 6 ಕಿಮೀ.. ಅಂತರದಲ್ಲಿದ್ದು, ರಾಷ್ಟ್ರೀಯ ಹೆದ್ದಾರಿ - 48 ಬಳಿ ಇದೆ. 8 ಸಾವಿರಕ್ಕೂ ಜನಸಂಖ್ಯೆ ಹೊಂದಿದ್ದು, 19 ಜನ ಗ್ರಾಮ ಪಂಚಾಯಿತಿ ಸದಸ್ಯರಿದ್ದಾರೆ. ಆದರೂ ಮೂಲಸೌಲಭ್ಯದಿಂದ ವಂಚಿತವಾಗಿದೆ.

ಚಳಗೇರಿಯಿಂದ ಕರೂರು ರೈಲ್ವೆ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹಾಳಾಗಿದೆ. ಬೈಕ್ ಸವಾರರು ತೊಂದರೆ ಅನುಭವಿಸುವಂತಾಗಿದೆ. ಇಲ್ಲಿನ ವಿದ್ಯಾನಗರದ ವಿಠಲ ದೇವಸ್ಥಾನದ ಬಳಿ ದಾರಿ ಮಧ್ಯೆ 2 ವರ್ಷದ ಹಿಂದೆ ಬೋರ್‌ವೆಲ್ ಕೊರೆಸಿ ಗುಂಡಿ ತೋಡಿದ್ದು ಮುಚ್ಚದೇ ಹಾಗೆ ಬಿಟ್ಟಿದ್ದಾರೆ. ಈ ಬಗ್ಗೆ ಪಿಡಿಒಗೆ ಮನವಿ ಮಾಡಿದರೂ ಕ್ರಮಕೈಗೊಂಡಿಲ್ಲ ಎಂದು ಶ್ರೀಧರ ಅಂಗಡಿ ಅಸಮಾಧಾನ ವ್ಯಕ್ತಪಡಿಸಿದರು.

ಇಲ್ಲಿನ ಸಾರ್ವಜನಿಕ ಗ್ರಂಥಾಲಯ ಮಹಡಿ ಮೇಲೆ ಇದ್ದು ಸ್ಟೇರ್ ಕೇಸ್ ಚಿಕ್ಕದಾಗಿದೆ. ಹತ್ತಲು ಇಳಿಯಲು ತೊಂದರೆಯಾಗಿ ಉಪಯೋಗಕ್ಕೆ ಬಾರದಂತಾಗಿದೆ. ಪುಸ್ತಕಗಳು ದೂಳು ಹಿಡಿದಿವೆ. ಒಂದು ದಿನವೂ ಇಲ್ಲಿ ಸಾರ್ವಜನಿಕರು ಪತ್ರಿಕೆ ಓದಿಲ್ಲ ಎಂಬುದು ಗ್ರಾಮಸ್ಥರ ದೂರಾಗಿದೆ.




ಉದಯವಾಹಿನಿ ಚಿತ್ರ

**ಲಕ್ಷಾಂತರ ಹಣ ಖರ್ಚು**

**ತೆರೆಯದ ಘನ ತ್ಯಾಜ್ಯ ಘಟಕ:** ಗ್ರಾಮ ಪಂಚಾಯಿತಿಯಿಂದ ಲಕ್ಷಾಂತರ ಹಣ ಖರ್ಚು ಮಾಡಿ ಘನತ್ಯಾಜ್ಯ ಘಟಕ ನಿರ್ಮಾಣ ಮಾಡಿದ್ದಾರೆ. ನಿರ್ವಹಣೆ ಇಲ್ಲದೇ ಅನೇಕ ದಿನಗಳಿಂದ ಬಾಗಿಲು ಮುಚ್ಚಿದೆ.

'ಜನತೆ ಹಸಿ ಕಸ ಒಣ ಕಸ ಬೇರ್ಪಡಿಸಿಕೊಡಲ್ಲ, ಗ್ರಾಮ ಪಂಚಾಯಿತಿಯಿಂದ ಕೊಟ್ಟ ಬಕೇಟ್‌ಗಳನ್ನು ಬಟ್ಟೆ ತೊಳೆಯಲು ಬಳಸುತ್ತಾರೆ. ಹಾಗಾಗಿ ಘನ ತ್ಯಾಜ್ಯ ಘಟಕ ನಿರ್ವಹಣೆಯಲ್ಲಿ ಅನಾನುಕೂಲವಾಗಿದೆ' ಎಂದು ಗ್ರಾಮ ಪಂಚಾಯಿತಿ ಸಿಬ್ಬಂದಿ ತಿಳಿಸಿದರು.

ಗ್ರಾಮದ ಚರಂಡಿಯಲ್ಲಿ ಹೂಳು ತುಂಬಿಕೊಂಡಿದ್ದು, ಚರಂಡಿ ಸ್ವಚ್ಛಗೊಳಿಸಿಲ್ಲ. ಸೊಳ್ಳೆಗಳ ಕಾಟ ಹೇಳತೀರದು. ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಉಂಟಾಗಿದೆ ಎಂದು ಗ್ರಾಮಸ್ಥರು ದೂರಾಗಿದೆ. ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಕೊರತೆಯಿಂದ ಯಂತ್ರಗಳು ತುಕ್ಕು ಹಿಡಿದಿವೆ. ದುರಸ್ತಿ ಕಾಣದೇ ಹಾಳು ಬಿದ್ದಿವೆ.

> ಬಹುಗ್ರಾಮ ಯೋಜನೆಯಿಂದ ಚಳಗೇರಿ ಮತ್ತು ಕರೂರು ಗ್ರಾಮಕ್ಕೆ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರದಲ್ಲಿಯೇ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯಲಿದೆ
> -ವೆಂಕಟೇಶ, ಪಿಡಿಒ ಚಳಗೇರಿ,

ಚಳಗೇರಿ ಸೇರಿದಂತೆ 30 ಗ್ರಾಮಗಳಿಗೆ ಕರ್ಲಗೇರಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಿಂದ 2 ವಾರಕ್ಕೊಮ್ಮೆ ನದಿ ನೀರು ಬಿಡಲಾಗುತ್ತದೆ. ಈ ಯೋಜನೆ ತೀರಾ ಹಳೆಯದಾಗಿದ್ದು, ಪೈಪುಲೈನುಗಳು ನೀರಿನ ಒತ್ತಡಕ್ಕೆ ಪೈಪುಗಳು ಹಗಲೆಲ್ಲ ಕೀಳುತ್ತವೆ. ಪೈಲ್ ಲೈನ್ ದುರಸ್ಥಿಗೆ ಬಂದಾಗ 20 ದಿನಗಳಿಗೆ ಕುಡಿಯುವ ನೀರು ಬಿಡುವುದರಿಂದ ತೊಂದರೆ ಅನುಭವಿಸುವಂತಾಗಿದೆ.

> ಚಳಗೇರಿ ಗ್ರಾಮಕ್ಕೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿ ಕುಡಿಯುವ ನೀರು ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು
> -ಪರಮೇಶ, ತಾಲ್ಲೂಕು ಪಂಚಾಯಿತಿ ಇಒ

ಜೆಜೆಎಂ ಯೋಜನೆಗೆ ಹಾಕಿದ ನಲ್ಲಿ ಮುರಿದು ಬಿದ್ದಿದ್ದು, ನೀರಿನ ಮೀಟರ್ ಹಾಳು ಬಿದ್ದಿವೆ. ಗ್ರಾಮದಲ್ಲಿ 30 ಬೋರ್‌ವೆಲ್‌ಗಳಿಂದ ಬಳಸುವ ನೀರು ಪೂರೈಕೆ ಮಾಡಲಾಗುತ್ತದೆ. ಮನೆ ಮನೆಗೆ ಗಂಗೆ ನೀರಿನ ಯೋಜನೆಗೆ ಓವರ್ ಹೆಡ್ ಟ್ಯಾಂಕ್‌ನಿಂದ ನೀರು ಏರಿಸಿ ಟೆಸ್ಟ್ ಮಾತ್ರ ಮಾಡಲಾಗಿದೆ.

ಜೆಜೆಎಂ ಅವರಿಗೆ ಗ್ರಾಮ ಪಂಚಾಯಿತಿಯಿಂದ ನೀರು ಕೊಟ್ಟಿಲ್ಲ. ಹುಣಸೀಕಟ್ಟಿ ರಸ್ತೆಯಲ್ಲಿ ಹೊಸ ಓವರ್ ಹೆಡ್ ಟ್ಯಾಂಕ್ ನಿರ್ಮಿಸಿ ನೀರು ಕೊಟ್ಟರೆ, ಜೆಜೆಎಂ ಯೋಜನೆಯು ಯಶಸ್ವಿಯಾಗಲಿದೆ ಎನ್ನುತ್ತಾರೆ ಗ್ರಾಮದ ಪ್ರಮುಖರಾದ ಭರಮನಗೌಡ ಕರೂರು.

ಮಿನಿ ನ್ಯೂಸ್

## ಪಾಕ್ ವಶದಲ್ಲಿದ್ದ ಬಿಎಸ್‌ಎಫ್ ಕಾನ್‌ಸ್ಟೇಬಲ್ ಭಾರತಕ್ಕೆ ಹಸ್ತಾಂತರ

**ನವದೆಹಲಿ:** ಭಾರತದ ಮೇಲೆ ಕಾಲು ಕೆದರಿ ತಂಟೆಗೆ ಬಂದರೆ ಜೋಕೆ ಎಂಬ ಪ್ರಧಾನಿ ನರೇಂದ್ರ ಮೋದಿ ಅವರು ಎಚ್ಚರಿಕೆ ಕೊಟ್ಟ ಎರಡು ದಿನಗಳಲ್ಲೇ ಬೆದರಿರುವ ಪಾಕಿಸ್ತಾನ ಕಳೆದ ಏಪ್ರಿಲ್ 23 ರಿಂದ ಪಾಕ್ ರೇಂಜರ್‌ಗಳ ವಶದಲ್ಲಿದ್ದ ಬಿಎಸ್‌ಎಫ್ ಕಾನ್‌ಸ್ಟೇಬಲ್ ಪೂರ್ಣಮ್ ಕುರ್ಮಾ ಶಾ ಅವರನ್ನು ಬುಧವಾರ ಬೆಳಗ್ಗೆ ಭಾರತೀಯ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ. ಇದು ನರೇಂದ್ರ ಮೋದಿ ಅವರ ಸರ್ಕಾರದ ಮತ್ತೊಂದು ಬಹುದೊಡ್ಡ ರಾಜತಾಂತ್ರಿಕ ಗೆಲವು ಎಂದು ಬಣ್ಣಿಸಲಾಗಿದೆ.

ಹಸ್ತಾಂತರ ಪ್ರಕ್ರಿಕೆಯು ಪಂಜಾಬ್‌ನ ಅಮೃತಸರದ ಅಟ್ಟಾರಿ ಯಲ್ಲಿರುವ ಜಂಟಿ ಚೆಕ್ ಪೋಸ್ಟ್‌ನಲ್ಲಿ ಬೆಳಿಗ್ಗೆ 10.30 ರ ಸುಮಾರಿಗೆ ನಡೆಯಿತು. ಸ್ಥಾಪಿತ ಶಿಷ್ಟಾಚಾರಗಳನ್ನು ಅನುಸರಿಸಿ ಶಾಂತಿಯುತವಾಗಿ ನಡೆಸಲಾಯಿತು ಎಂದು ಬಿಎಸ್‌ಎಫ್ ಹೇಳಿಕೆಯಲ್ಲಿ ತಿಳಿಸಿದೆ. ಸದ್ಯ ಭದ್ರತಾ ಅಧಿಕಾರಿಗಳಿಂದ ಶಾ ಅವರಿಗೆ ಈ ಬಗ್ಗೆ ವಿವರಣೆ ನೀಡಲಾಗಿದೆ. 182ನೇ ಬೆಟಾಲಿಯನ್ನ ಬಿಎಸ್‌ಎಫ್ ಜವಾನ್ ಶಾ ಅವರನ್ನು ಏಪ್ರಿಲ್ 23 ರಂದು ಪಾಕಿಸ್ತಾನದ ರೇಂಜರ್‌ಗಳು ಪಂಜಾಬ್ ಫಿರೋಜ್ಪುರ ಬಳಿ ಅಂತಾರಾಷ್ಟ್ರೀಯ ಗಡಿಯನ್ನು ಅಜಾಗರೂಕತೆಯಿಂದ ದಾಟಿದ ನಂತರ ಬಂಧಿಸಿದ್ದರು.

ಶಾ ಅವರು ಗಡಿ ಬೇಲಿಯ ಬಳಿ ಕರ್ತವ್ಯದಲ್ಲಿದ್ದರು ಮತ್ತು ಸಮವಸ್ತ್ರದಲ್ಲಿ ತಮ್ಮ ಸರ್ವಿಸ್ ರೈಫಲ್ ಅನ್ನು ಹೊತ್ತುಕೊಂಡು ವಿಶ್ರಾಂತಿ ಪಡೆಯಲು ನೆರಳಿನ ಪ್ರದೇಶಕ್ಕೆ ತೆರಳಿದ್ದರು. ಈ ವೇಳೆ ಅವರು ತಿಳಿಯದೆ ಪಾಕಿಸ್ತಾನದ ಭೂಪ್ರದೇಶವನ್ನು ದಾಟಿದರು. ಅಲ್ಲಿ ಅವರನ್ನು ಪಾಕಿಸ್ತಾನ ರೇಂಜರ್‌ಗಳು ಬಂಧಿಸಿದ್ದರು. ಏಪ್ರಿಲ್ 23ರಂದು ಪಂಜಾಬ್ ಭಾರತ ಪಾಕ್ ಗಡಿಯಲ್ಲಿ ಬಿಎಸ್‌ಎಫ್



ಯೋಧ ಪೂರ್ಣಮ್ ಕುಮಾರ್ ಶಾ ಅವರನ್ನು ಪಾಕ್ ಸೈನಿಕರು ಬಂಧಿಸಿದ್ದರು. ಬಿಎಸ್‌ಎಫ್ ಮಾತುಕತೆಯ ಹೊರತಾಗಿಯೂ ಯೋಧನನ್ನು ಭಾರತಕ್ಕೆ ಹಸ್ತಾಂತರಿಸಲು ಪಾಕ್ ಸೇನೆ ನಿರಾಕರಿಸಿತ್ತು.

ಪಾಕಿಸ್ತಾನದ ವಶದಲ್ಲಿದ್ದ ಬಿಎಸ್‌ಎಫ್ ಯೋಧ ಪೂರ್ಣಮ್ ಕುರ್ಮಾ ಷಾ ಮರಳಿ ಬರುವ ಬಗ್ಗೆ ವಿಶ್ವಾಸ ವ್ಯಕ್ತವಾಗುತ್ತಿದೆ. ಈ ಬಗ್ಗೆ ಯೋಧ ಪೂರ್ಣಮ್ ಕುರ್ಮಾ ಅವರ ಪತ್ನಿ ರಜನಿ ನಾ ಕೂಡ, ಪತಿ ಮರಳಿ ಬರುವ ಬಗ್ಗೆ ಭರವಸೆ ವ್ಯಕ್ತಪಡಿಸಿದ್ದರು. ಪೂರ್ಣಮ್ ಕುಮಾರ್‌ಷಾ ಅವರು ಪಾಕಿಸ್ತಾನದ ವಶದಲ್ಲಿದ್ದಾರೆ. ಆತನನ್ನು ಭಾರತಕ್ಕೆ ಮರಳಿ ಕರೆತರಲು ಸರ್ಕಾರವು ಪಾಕಿಸ್ತಾನದೊಂದಿಗೆ ಮಾತುಕತೆ ನಡೆಸಬೇಕು ಎಂದು ರಜನಿ ಹಾ ಒತ್ತಾಯಿಸಿದ್ದರು. ಈ ಬಗ್ಗೆ ಉಭಯ ದೇಶಗಳ ನಡುವೆ ಮಾತುಕತೆಗಳು ನಡೆದಿದ್ದವು. ಆದರೆ, ಭಾರತವು ಪಾಕಿಸ್ತಾನದ ಉಗ್ರರ ಶಿಬಿರಗಳ ಮೇಲೆ ದಾಳಿ ಮಾಡಿದ ನಂತರ ಮಾತುಕತೆಗಳು ಸ್ಥಗಿತಗೊಂಡವು.

## ದರೋಡೆ ಮಾಡಿರುವ ಘಟನೆ ಪೊಲೀಸ್ ಅಧಿಕಾರಿ ಬಂಧನ

**ಕೊಲ್ಕೋತಾ:** ಖಾಸಗಿ ಕಂಪನಿಯೊಂದರ ಇಬ್ಬರು ಉದ್ಯೋಗಿಗಳು ಟ್ಯಾಕ್ಸಿಯಲ್ಲಿ ಪ್ರಯಾಣಿಸುತ್ತಿದ್ದಾಗ, ಅವರನ್ನು ಅಡ್ಡಗಟ್ಟಿ 2.66 ಕೋಟಿ ರೂ. ದರೋಡೆ ಮಾಡಿರುವ ಘಟನೆ ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿ ನಡೆದಿದೆ. ಪ್ರಕರಣದಲ್ಲಿ ಪೊಲೀಸ್ ಸಹಾಯಕ ಸಬ್-ಇನ್ಸ್‌ಪೆಕ್ಟರ್ ಒಬ್ಬರನ್ನು ಬುಧವಾರ ಬಂಧಿಸಲಾಗಿದೆ.

ಕೋಲ್ಕತ್ತಾದ ಎಂಟಲ್ಲಿ ಪ್ರದೇಶದಲ್ಲಿ ಮೇ 5ರಂದು ದರೋಡೆ ನಡೆದಿದೆ. ಅಂದು ಬೆಳಿಗ್ಗೆ 11.45ರ ಸುಮಾರಿಗೆ ಖಾಸಗಿ ವಿದೇಶಿ ವಿನಿಮಯ ಕಂಪನಿಯ ಇಬ್ಬರು ಉದ್ಯೋಗಿಗಳು ಎಸ್.ಎನ್ ಬ್ಯಾನರ್ಜಿ ರಸ್ತೆಯಿಂದ ಟ್ಯಾಕ್ಸಿಯಲ್ಲಿ ಪಾರ್ಕ್ ಸರ್ಕಸ್ ಪ್ರದೇಶದಲ್ಲಿರುವ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗೆ ಹಣವನ್ನು ಠೇವಣಿ ಇಡಲು ಹೊಗುತ್ತಿದ್ದರು ಎಂದು ತಿಳಿದುಬಂದಿದೆ.

ಮಾರ್ಗ ಮಧ್ಯೆ ಕಮರ್ದಂಗ ಬಳಿ ದುಷ್ಕರ್ಮಿಗಳು ಕಾರನ್ನು ಅಡ್ಡಗಡ್ಡಿ ಬಲವಂತವಾಗಿ ನಿಲ್ಲಿಸಿದ್ದಾರೆ. ಬಳಿಕ, ಇಬ್ಬರು ಅಪರಿಚಿತ ವ್ಯಕ್ತಿಗಳು ಟ್ಯಾಕ್ಸಿ ಒಳಗೆ ನುಗ್ಗಿ, ಉದ್ಯೋಗಿಗಳಿಂದ ಹಣವನ್ನು ದರೋಡೆ ಮಾಡಿ, ಪರಾರಿಯಾಗಿದ್ದಾರೆ.

## ಹಮಾಸ್ ಮುಖ್ಯಸ್ಥ ಸಾವು

**ಟೆಲ್ ಅವೀವ್:** ಗಾಜಾಪಟ್ಟಿಯಲ್ಲಿ ಇಸ್ರೇಲ್ ಸೇನೆ ವಾಯುದಾಳಿ ಮುಂದುವರೆದಿದ್ದು, ಈ ಬಾರಿ ಹಮಾಸ್ ಉಗ್ರ ಸಂಘಟನೆಯ ಮುಖ್ಯಸ್ಥ ನನ್ನೇ ಇಸ್ರೇಲ್ ಭದ್ರತಾ ಪಡೆಗಳು ಹೊಡೆದುರುಳಿಸಿವೆ ಎಂದು ತಿಳಿದುಬಂದಿದೆ. ಈ ಹಿಂದೆ ಇದೇ ಇಸ್ರೇಲ್ ಪಡೆ ನಡೆಸಿದ್ದ ಡ್ರೋನ್ ದಾಳಿಯಲ್ಲಿ ಹಮಾಸ್ ಸಂಘಟನೆಯ ಅಂದಿನ ಮುಖ್ಯಸ್ಥ ಯಾಹ್ಯಾ ಸಿನ್ವರ್ ಹತನಾಗಿದ್ದ. ಅವನ ಸಾವಿನ ಬಳಿಕ ಹಮಾಸ್ ಉಗ್ರ ಸಂಘಟನೆಯ ನಾಯಕತ್ವವನ್ನು ಮಹಮದ್ ಸಿನ್ವರ್ ವಹಿಸಿಕೊಂಡಿದ್ದ. ಇದೀಗ ಮಹಮದ್ ಸಿನ್ವರ್ ನನ್ನೂ ಕೂಡ ಇಸ್ರೇಲ್ ಸೇನೆ ವಾಯುದಾಳಿಯಲ್ಲಿ ಹೊಡೆದುರುಳಿಸಿದೆ.

ಇಸ್ರೇಲಿ ಭದ್ರತಾ ಪಡೆಗಳ ಮೂಲಗಳ ಪ್ರಕಾರ, ಹಮಾಸ್‌ನ ಹಿರಿಯ ನಾಯಕ ಮುಹಮ್ಮದ್ ಸಿನ್ವಾರ್ ನನ್ನು ಗುರಿಯಾಗಿಸಿಕೊಂಡು ಮಂಗಳವಾರ ಸಂಜೆ ದಕ್ಷಿಣ ಗಾಜಾ ನಗರದ ಖಾನ್ ಯೂನಿಸ್ ಆಸ್ಪತ್ರೆ ಮೇಲೆ ಇಸ್ರೇಲಿ ಯುದ್ಧ ವಿಮಾನಗಳು ಪ್ರಬಲ ವೈಮಾನಿಕ ದಾಳಿ ನಡೆಸಿದ್ದವು. ಯುರೋಪಿಯನ್ ಆಸ್ಪತ್ರೆಯ ಬಳಿಯ ಪ್ರದೇಶವನ್ನು ಈ ದಾಳಿ ಹೊಡೆದಿದೆ ಎಂದು ವರದಿಯಾಗಿದೆ.

## ಪರಸ್ಪರ ವಿವಾಹವಾದ ಯುವತಿಯರು

**ಬದೌನ್:** ಉತ್ತರ ಪ್ರದೇಶದ ಬದೌನ್‌ನ ನ್ಯಾಯಾಲಯ ಸಂಕೀರ್ಣದ ಶಿವ ದೇವಾಲಯವು ಒಂದು ವಿಶಿಷ್ಟ ವಿವಾಹಕ್ಕೆ ಸಾಕ್ಷಿಯಾಗಿದೆ. ಇಲ್ಲಿ ಇಬ್ಬರು ಯುವತಿಯರು ಪರಸ್ಪರ ಹಾರ ಬದಲಿಸಿ ದಾಂಪತ್ಯ ಜೀವನಕ್ಕೆ ಅಡಿಯಿಟ್ಟಿದ್ದಾರೆ.

ಒಟ್ಟಿಗೆ ಬದುಕುವ ಪ್ರತಿಜ್ಞೆ ಮಾಡಿದ್ದಾರೆ. ಇಬ್ಬರೂ ಈಗ ನಾವು ನಮ್ಮ ಜೀವನದುದ್ದಕ್ಕೂ ಗಂಡ ಹೆಂಡತಿಯಂತೆ ಒಬ್ಬರನ್ನೊಬ್ಬರು ಬೆಂಬಲಿಸಲು ನಿರ್ಧರಿಸಿದ್ದೇವೆ ಎಂದು ಹೇಳಿದ್ದಾರೆ. ಇದರಲ್ಲಿ ಒಬ್ಬ ಯುವತಿ ಅಲಪರ್ ಪೊಲೀಸ್ ಠಾಣೆ ಪ್ರದೇಶದವಳಾಗಿದ್ದರೆ, ಇನ್ನೊಬ್ಬಳು ಸಿವಿಲ್ ಲೈನ್ಸ್ ಕೊಟ್ವಾಲಿ ಪ್ರದೇಶದವಳು. ಅವರಿಬ್ಬರೂ ಸುಮಾರು ಮೂರು ತಿಂಗಳ ಹಿಂದೆ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಕೊಠಡಿಯಲ್ಲಿ ಭೇಟಿಯಾಗಿದ್ದು ಭೇಟಿಯ ನಂತರ, ಪರಿಚಯ ಶೀಘ್ರದಲ್ಲೇ ಆಳವಾದ ಸ್ನೇಹಕ್ಕೆ ತಿರುಗಿ ನಂತರ ಸಂಬಂಧವು ಮದುವೆಯ ರೂಪವನ್ನು ಪಡೆದುಕೊಂಡಿದೆ. ಇಬ್ಬರೂ ಯುವತಿಯರಿಗೆ ಈಗಾಗಲೇ ವಿವಾಹವಾಗಿದೆ.

### ● ಪಾಕಿಸ್ತಾನದ ನಿದ್ದೆಗೆಡಿಸಿದ ಭಾರತ – ರಷ್ಯಾ ಸ್ನೇಹ, ರಣಬೇಟೆಗಾರನ ಎಸ್–500ನೋಡಿ ಪಾಕ್ ಕಂಗಾಲು

# ಭಾರತಕ್ಕೆ ರಣಬೇಟೆಗಾರ ಎಸ್–500 ವಾಯು ರಕ್ಷಣಾ ವ್ಯವಸ್ಥೆ

**ಹೊಸದಿಲ್ಲಿ :** ಕಾರ್ಯಾಚರಣೆಯಲ್ಲಿ ಎಸ್–400 ಏರ್ ಡಿಫೆನ್ಸ್ ಸಿಸ್ಟಮ್ ಶಕ್ತಿ ಏನೆಂಬುದು ಇಡೀ ಜಗತ್ತಿಗೆ ಗೊತ್ತಾಗಿದೆ. ಪಾಕಿಸ್ತಾನದ ಡ್ರೋನ್, ಮಿಸೈಲ್‌ಗಳನ್ನು ಸುದರ್ಶನ ಚಕ್ರ ಛಿದ್ರ ಛಿದ್ರ ಮಾಡಿ ಹಾಕಿದೆ. ಎಸ್–400 ಅಥವಾ ಸುದರ್ಶನ ಚಕ್ರ ಭಾರತಕ್ಕೆ ಉಕ್ಕಿನ ಗುರಾಣಿಯಾಗಿ ನಿಂತಿದ್ದು, ಪಾಕಿಸ್ತಾನವನ್ನು ಕಂಗಾಲಾಗಿಸಿದೆ.

ಚೀನಾ ಕೂಡ ಭಾರತದ ಬಳಿಯಿರುವ ಎಸ್–400 ಸಾಮರ್ಥ್ಯ ನೋಡಿ ಬೆಚ್ಚಿಬಿದ್ದಿದೆ. ಆದರೆ, ಇದು ಸ್ಯಾಂಪಲ್ ಅಷ್ಟೇ.. ನಾವೇಳೋ ಸುದ್ದಿಯನ್ನು ಪಾಕಿಸ್ತಾನ ಅಥವಾ ಚೀನಾ ಕೇಳಿದ್ರೆ, ಈಗಿನ ಸನ್ನಿವೇಶದಲ್ಲಿ ಅವುಗಳಿಗೆ ನಿದ್ದೆಯೇ ಬರಲ್ಲ.. ಜಗತ್ತಿನಲ್ಲೇ ಅತ್ಯಂತ ಪ್ರಬಲ ಏರ್ ಡಿಫೆನ್ಸ್ ಸಿಸ್ಟಮ್ ಭಾರತಕ್ಕೆ ಬರುತ್ತಿದೆ.

ಭಾರತದ ಏಕಮಾತ್ರ ನಂಬಿಕಾರ್ಹ ರಾಷ್ಟ್ರ ರಷ್ಯಾ ಇದನ್ನು ಸಿದ್ಧಪಡಿಸಿದ್ದು, ಎಸ್–400ನ ಅಪ್‌ಡೇಟ್ ಆವೃತ್ತಿ ಎಸ್–500 ಆಗಿದ್ದು, ಭಾರತಕ್ಕೆ ನೀಡಲು ಮುಂದಾಗಿದೆ. ಎಲ್ಲ ಅಂದುಕೊಂಡಂತೆ ಆದರೆ ಶೀಘ್ರದಲ್ಲಿಯೇ ಎಸ್–500 ಭಾರತದ ಸೇನಾ ಬತ್ತಳಿಕೆಗೆ ಸೇರಲಿದೆ. ಉಪಗ್ರಹಗಳನ್ನು ಕೂಡ ಹೊಡೆದುರುಳಿಸುವ ಸಾಮರ್ಥ್ಯವನ್ನು ಇದು ಹೊಂದಿದೆ ಎನ್ನಲಾಗಿದೆ. ರಷ್ಯಾ ಈಗಾಗಲೇ ಎಸ್–500 ವಾಯು ರಕ್ಷಣಾ ವ್ಯವಸ್ಥೆಯನ್ನು ಭಾರತದ ಜೊತೆ ಜಂಟಿಯಾಗಿ ಉತ್ಪಾದಿಸುವ ಆಫರ್ ಅನ್ನು ಕೂಡ ನೀಡಿದೆ. ಇದು ಭಾರತದ ರಕ್ಷಣಾ ವ್ಯವಸ್ಥೆಯಲ್ಲಿ ಗೇಮ್ ಚೇಂಜರ್ ಆಗಲಿದೆ. ಹಾಗಾದ್ರೆ ಬನ್ನಿ ಎಸ್–500 ಹೇಗಿದೆ ಏನಿದರ ಸಾಮರ್ಥ್ಯ ಎಂಬುದನ್ನು ನೋಡೋಣ ಬನ್ನಿ..

**ರಷ್ಯಾ ಆಫರ್ ಒಪ್ತಾರಾ ಮೋದಿ**

ಹೌದು, ಪಾಕಿಸ್ತಾನದ ಮಿಸೈಲ್‌ಗಳನ್ನು, ಡ್ರೋನ್‌ಗಳನ್ನು ಎಸ್–400 ಏರ್ ಡಿಫೆನ್ಸ್ ಸಿಸ್ಟಮ್ ಹೊಡೆದುರುಳಿಸಿದೆ. ಪಾಕ್‌ನ ಎಲ್ಲ ಪ್ಲಾನ್‌ಗಳನ್ನು ಈ ಸುದರ್ಶನ ಚಕ್ರ ತಲೆಕೆಳಗಾಗಿಸಿದೆ. ಇದರಿಂದ ಭಾರತದ ಜೊತೆ ಪಾಕಿಸ್ತಾನ ಕದನ ವಿರಾಮ ಮಾಡಿಕೊಂಡಿದೆ. ಎಸ್–400 ಸಾಮರ್ಥ್ಯಕ್ಕೆ ಬೆಚ್ಚಿಬಿದ್ದಿದ್ದ ಪಾಕಿಸ್ತಾನ ಹಾಗೂ ಅದರ ಮಿತ್ರ ರಾಷ್ಟ್ರ ಚೀನಾಗೆ ರಷ್ಯಾ ಮತ್ತು ಭಾರತದಿಂದ ಶಾಕಿಂಗ್ ಸುದ್ದಿಯೊಂದು ಕಾದಿದೆ. ಭಾರತದ ಬತ್ತಳಿಕೆಗೆ ಎಸ್–400ನ ಅಪ್‌ಡೇಟೆಡ್ ವರ್ಷನ್ ಎಸ್– 500 ಶೀಘ್ರದಲ್ಲೇ ಸೇರಲಿದೆ. ರಷ್ಯಾದ ಸೇನೆಗೆ ಸೇರಿರುವ ಈ ಏರ್ ಡಿಫೆನ್ಸ್ ಸಿಸ್ಟಮ್ ಈಗಾಗಲೇ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸಿದೆ. ಕಳೆದ ವರ್ಷ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾಗೆ ತೆರಳಿದ್ದಾಗ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಎಸ್–500 ಏರ್ ಡಿಫೆನ್ಸ್ ಸಿಸ್ಟಮ್ ಅನ್ನು ಭಾರತದಲ್ಲಿ ಜಂಟಿಯಾಗಿ ಉತ್ಪಾದಿಸುವ ಆಫರ್ ಅನ್ನು ನೀಡಿದ್ದರು. ಅದನ್ನು ಈಗ ಭಾರತ ಒಪ್ಪಿಕೊಳ್ಳುವ ಸಾಧ್ಯತೆ ಇದ್ದು, ಬ್ರಹ್ಮೋಸ್ ಕ್ಷಿಪಣಿಯ ರೀತಿ ಭಾರತದಲ್ಲಿ ರಷ್ಯಾ ಹಾಗೂ ಭಾರತದ ಸಹಯೋಗದಲ್ಲಿ ಎಸ್–500 ಸಿಸ್ಟಮ್ ಉತ್ಪಾದನೆಯಾಗಲಿದೆ ಎಂದು ಹೇಳಲಾಗುತ್ತಿದೆ.

**ಇದರ ರಿಯಾಕ್ಷನ್ ಟೈಮ್ ಕೇಳಿದ್ರೆ, ಶಾಕ್ ಆಗ್ತೀರಿ:** ಇದರ ರಿಯಾಕ್ಷನ್ ಟೈಮ್ ಕೇಳಿದ್ರೆ, ನೀವು ಅಬ್ಬಾ



ಇಷ್ಟೊಂದು ಸ್ಪೀಡಾ ಅಂತೀರಿ. ಎಸ್–500 ಸುಮಾರು 3 ರಿಂದ 4 ಸೆಕೆಂಡುಗಳ ತ್ವರಿತ ಪ್ರತಿಕ್ರಿಯೆ ಸಮಯವನ್ನು ಹೊಂದಿದೆ. ಎಸ್ –400ಗಿಂತ ಗಮನಾರ್ಹವಾಗಿ ವೇಗವನ್ನು ಇದು ಹೊಂದಿದೆ. ಎಸ್–400 ಏರ್ ಡಿಫೆನ್ಸ್ ಸಿಸ್ಟಮ್‌ನ ರಿಯಾಕ್ಷನ್ ಟೈಮ್ 9 ರಿಂದ 10 ಸೆಕೆಂಡು ಇದೆ.

ಸೆಕೆಂಡ್‌ಗೆ 7 ಕಿಮೀ ವೇಗದಲ್ಲಿ ಸಾಗಿ ಹೈಪರ್ ಸಾನಿಕ್ ಕ್ಷಿಪಣಿ ಸೇರಿ ಅತಿ ವೇಗವಾಗಿ ಚಲಿಸುವ ವೈರಿಗಳ ವೈಮಾನಿಕ ಬೆದರಿಕೆಗಳನ್ನು ಎದುರಿಸುತ್ತದೆ. ಪ್ರಮುಖವಾಗಿ ಈ ಮಿಸೈಲ್ ಸಿಸ್ಟಮ್ ಏಕಕಾಲದಲ್ಲಿ 10 ಬ್ಯಾಲಿಸ್ಟಿಕ್ ಅಥವಾ ಹೈಪರ್‌ಸಾನಿಕ್ ಗುರಿಗಳನ್ನು ಪತ್ತೆ ಮಾಡುತ್ತದೆ. ಜೊತೆಗೆ ಹತ್ತು ಟಾರ್ಗೆಟ್‌ಗಳನ್ನು ಏಕಕಾಲದಲ್ಲಿ ಹೊಡೆದುರುಳಿಸುತ್ತದೆ. ಇನ್ನೊಂದು ವಿಶೇಷ ಏನೆಂದರೆ ವಿವಿಧ ರೀತಿಯ ಟಾರ್ಗೆಟ್‌ಗಳಿಗಾಗಿ ವಿಭಿನ್ನ ರೀತಿಯ ಕ್ಷಿಪಣಿಗಳನ್ನು ಬಳಸುತ್ತದೆ. ಇನ್ನು, ಮೂರು ರೀತಿಯ ಹೈ ಎಂಡ್ ರೆಡಾರ್‌ಗಳನ್ನು ಕೂಡ ಎಸ್–500 ಬಳಸುತ್ತದೆ. ಅದಲ್ಲದೇ ಆಕ್ಟಿವ್ ಎಲೆಕ್ಟ್ರಾನಿಕ್ ಸ್ಕ್ಯಾನ್ಡ್ ಅರೇ ಟೆಕ್ನಾಲಜಿಯನ್ನು ಎಸ್–500 ಬಳಸುತ್ತಿದೆ.

### ಥಾಡ್, ಪೆಟ್ರಿಯಾಟ್‌ಗಿಂತ ಬಹಳಷ್ಟು ಬಲಶಾಲಿ

**ಎಸ್–500 ಏರ್ ಡಿಫೆನ್ಸ್ ಸಿಸ್ಟಮ್ ಪೂರ್ತಿ ಅಪ್‌ಡೇಟೆಡ್ ಮಿಸೈಲ್ ಸಿಸ್ಟಮ್ ಇಸ್ರೇಲ್‌ನ ಥಾಡ್, ಅಮೆರಿಕದ ಪೆಟ್ರಿಯಾಟ್ ಹಾಗೂ ರಷ್ಯಾದ ಈಗ ಇರುವ ಎಸ್–400 ಏರ್ ಡಿಫೆನ್ಸ್ ಸಿಸ್ಟಮ್‌ಗಿಂತಲೂ ಅತ್ಯಂತ ಬಲಶಾಲಿಯಾದ ವಾಯು ರಕ್ಷಣಾ ವ್ಯವಸ್ಥೆ. ಇದಕ್ಕೆ ಪ್ರೊಮೀತಿಯಸ್ ಎಂದು ಕೂಡ ಕರೆಯಲಾಗುತ್ತದೆ. ಇದು ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಗಳು, ಹೈಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳು, ಸ್ಟೆಲ್ತ್ ಫೈಟರ್ ಜೆಟ್‌ಗಳು, ಭೂಮಿಗೆ ಹತ್ತಿರವಿರುವ ಉಪಗ್ರಹಗಳು ಮತ್ತು ಬಾಹ್ಯಾಕಾಶದಲ್ಲಿರುವ ಶಸ್ತ್ರಾಸ್ತ್ರಗಳನ್ನು ಒಳಗೊಂಡಂತೆ ಬಹುದೊಡ್ಡ ರೇಂಜ್‌ನ ವೈಮಾನಿಕ ಬೆದರಿಕೆಗಳನ್ನು ಹೊಡೆದುರುಳಿಸುವ ಸಾಮರ್ಥ್ಯವನ್ನು ಹೊಂದಿದೆ. ಎಸ್–400 ಗಿಂತ ಗಮನಾರ್ಹ ತಾಂತ್ರಿಕ ಪ್ರಗತಿಯನ್ನು ಇದು ಹೊಂದಿದ್ದು, ಇದರ ವೇಗ ಮತ್ತು ರಿಯಾಕ್ಷನ್ ಟೈಂಗೆ ಬೇರೆ ಯಾವುದೇ ವಾಯು ರಕ್ಷಣಾ ವ್ಯವಸ್ಥೆ ಸಾಟಿಯಿಲ್ಲ.**

### ಎಸ್–500 ವಾಯು ರಕ್ಷಣಾ ವ್ಯವಸ್ಥೆಯ ವೈಶಿಷ್ಟ್ಯಗಳು


**ಖ–500 ಮಿಸೈಲ್ ಸಿಸ್ಟಮ್‌ನ ಪ್ರಮುಖ ಫೀಚರ್‌ಗಳನ್ನು ನೋಡಿದರೆ, ನೀವು ಇದೆಲ್ಲಾ ನಿಜನಾ ಅನ್ನೊಳ್ತೀರಿ. ಅಷ್ಟರ ಮಟ್ಟಿಗೆ ಎಸ್–500 ಮಿಸೈಲ್ ಸಿಸ್ಟಮ್ ಪರಿಣಾಮಕಾರಿಯಾಗಿದೆ. 2000 ಕಿಮೀ ದೂರದಲ್ಲೇ ವೈರಿಗಳ ಟಾರ್ಗೆಟ್‌ಗಳನ್ನು ಇದು ಗುರುತಿಸುತ್ತದೆ. ಅದಾದ ಬಳಿಕ 600 ಕಿಮೀ ವರೆಗಿನ ವ್ಯಾಪ್ತಿಯಲ್ಲಿ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಮತ್ತು 500 ಕಿಮೀ ವರೆಗಿನ ರೆಂಜ್‌ನಲ್ಲಿ ವಿಮಾನ ಅಥವಾ ಹೈಪರ್ ಸಾನಿಕ್ ಕ್ರೂಸ್ ಕ್ಷಿಪಣಿಗಳನ್ನು ಹೊಡೆದುರುಳಿಸುವ ಸಾಮರ್ಥ್ಯವನ್ನು ಹೊಂದಿದೆ. ಇನ್ನು 180 ರಿಂದ 200 ಕಿಮೀ ಎತ್ತರದಲ್ಲಿರುವ ಟಾರ್ಗೆಟ್‌ಗಳನ್ನು ಕೂಡ ಹೊಡೆದುರುಳಿಸುವ ಸಾಮರ್ಥ್ಯ ಇದಕ್ಕಿದೆ. ಅಂದ್ರೇ ಭಾಗಶಃ ಬಾಹ್ಯಾಕಾಶಕ್ಕೆ ಸಮೀಪವಿರುವ ಗುರಿಗಳನ್ನು ಹೊಡೆದುರುಳಿಸುವ ಸಾಮರ್ಥ್ಯ ಇದ್ದು, ವೈರಿಗಳ ಉಪಗ್ರಹಗಳು ಕೂಡ ಇದಕ್ಕೆ ಸುಲಭ ತುತ್ತಾಗುತ್ತವೆ. ಇದರ ಒಂದು ಯೂನಿಟ್ ಬೆಲೆ 2.5 ಬಿಲಿಯನ್ ಡಾಲರ್ ಎನ್ನಲಾಗಿದ್ದು, ಈಗ ಸುಮಾರು 3 ಬಿಲಿಯನ್ ಡಾಲರ್ ಆಗಬಹುದು ಎಂದು ಹೇಳಲಾಗುತ್ತಿದೆ.**

## ಸುಳ್ಳು, ಪಾಕಿಸ್ತಾನದ ಮನೆ ದೇವರು: ನೌಕಾಸೇನೆ ಸಮರ ಸಿದ್ಧತೆ ಎಂದು ಹಳೆಯ ಫೋಟೊ ತೋರಿಸಿದರು

**ಇಸ್ಲಾಮಾಬಾದ್:** ಓಳು ಬಿಡುವುದರಲ್ಲಿ ಪಾಕಿಸ್ತಾನವನ್ನು ಮೀರಿಸಬಲ್ಲ ರಾಷ್ಟ್ರ ಇಡೀ ಜಗತ್ತಿನಲ್ಲೇ ಇಲ್ಲ. ಸುಳ್ಳನ್ನೇ ಹೊದ್ದು ಮಲಗುವ ನೆರೆರಾಷ್ಟ್ರ, ಭಾರತದ ಸೇನಾ ಸಾಮರ್ಥ್ಯಕ್ಕೆ ಸಮನಾದ ಬಲ ತನ್ನಲ್ಲಿಯೂ ಇದೆ ಎಂದು ಸಾಬೀತುಪಡಿಸಲು ಸಾಕಷ್ಟು ಹೆಣಗಾಡುತ್ತಿದೆ. ಇದಕ್ಕೆ ಪಾಕಿಸ್ತಾನದ ನೌಕಾಸೇನೆಯ ಯುದ್ಧ ಸಿದ್ಧತೆಯ ನಕಲಿ ಫೋಟೋವೊಂದು ಸಾಕ್ಷಿ ಒದಗಿಸಿದೆ.

ಇಸ್ಲಾಮಾಬಾದ್‌ನಲ್ಲಿ ನಡೆದ ಪಾಕಿಸ್ತಾನ ಸಶಸ್ತ್ರ ಪಡೆಗಳ ಹಿರಿಯ ಅಧಿಕಾರಿಗಳ ಮಾಧ್ಯಮಗೋಷ್ಠಿಯಲ್ಲಿ, ಪಾಕಿಸ್ತಾನದ ನೌಕಾಸೇನೆಯ ಸಮರ ಸಿದ್ಧತೆಯ ಫೋಟೋವೊಂದನ್ನು ಪ್ರದರ್ಶಿಸಲಾಗಿದೆ. ಆದರೆ ಈ ಫೋಟೋ ಒಂದು ವರ್ಷದಷ್ಟು ಹಳೆಯದಾಗಿದ್ದು, ಅದನ್ನು ತಿರುಚಿರುವುದು ಸ್ಪಷ್ಟವಾಗಿದೆ. ಈ ನಕಲಿ ಫೋಟೋ ಬಿಡುಗಡೆ ಮಾಡುವ ಮೂಲಕ, ಜಾಗತಿಕ ಮಟ್ಟದಲ್ಲಿ ಪಾಕಿಸ್ತಾನದ ಸುಳ್ಳು ಸಾಬೀತಾಗಿದೆ.

ಭಾರತದೊಂದಿಗೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಎದುರಿಸಲು ತನ್ನ ನೌಕಾಪಡೆಯು ಸನ್ನದ್ಧವಾಗಿದೆ ಎಂದು ಬಿಂಬಿಸಲು, ಪಾಕಿಸ್ತಾನ ಬಿಡುಗಡೆ ಮಾಡಿರುವ ಫೋಟೋ ನಕಲಿ ಎಂಬುದು ಸಾಬೀತಾಗಿದೆ. 2023ರಲ್ಲೇ ಈ ಚಿತ್ರವನ್ನು ತೆಗೆಯಲಾಗಿದ್ದು, ಇದನ್ನು ರೇಡಿಯೋ ಪಾಕಿಸ್ತಾನದಲ್ಲಿ ಪ್ರಕಟ ಮಾಡಲಾಗಿತ್ತು.ವೈಸ್ ಅಡ್ಮಿರಲ್





ರಾಜ ರಬ್ ನವಾಜ್ ತೋರಿಸಿದ ಫೋಟೋದಲ್ಲಿ, ಪಾಕಿಸ್ತಾನದ ನೌಕಾ ಹಡಗುಗಳು, ಜಲಾಂತರ್ಗಾಮಿ ಮತ್ತು ಮೂರು ವಿಮಾನಗಳು ಕಂಡುಬರುತ್ತವೆ. ಆದರೆ ಆ ಫೋಟೋ 2023ರ ಡಿಸೆಂಬರ್‌ನಲ್ಲಿ ರೇಡಿಯೋ ಪಾಕಿಸ್ತಾನದಲ್ಲಿ ಪ್ರಕಟವಾಗಿತ್ತು ಎಂಬುದು ತನಿಖೆಯಿಂದ ತಿಳಿದುಬಂದಿದೆ. ಚೀನಾ ಮತ್ತು ಪಾಕಿಸ್ತಾನದ ಯುದ್ಧನೌಕೆಗಳು, ಹಿಂದೂ ಮಹಾಸಾಗರದಲ್ಲಿ ಜಂಟಿ ಸಮರಾಭ್ಯಾಸ ನಡೆಸುತ್ತಿದ್ದ ವೇಳೆ ಕ್ಲಿಕ್ಕಿಸಲಾದ ಫೋಟೋ ಇದಾಗಿದೆ. ಪಾಕಿಸ್ತಾನದ ಡೀಸೆಲ್–ಎಲೆಕ್ಟ್ರಿಕ್ ಜಲಾಂತರ್ಗಾಮಿಯನ್ನು ಈ ನಕಲಿ ಫೋಟೋದಲ್ಲಿ ಹೆಚ್ಚುವರಿಯಾಗಿ ಸೇರಿಸಲಾಗಿದೆ. ಆದರೆ ನೆರೆ ರಾಷ್ಟ್ರ

**ಪಾಕಿಸ್ತಾನ ವಾಯುಸೇನೆಯ ಏರ್ ವೈಸ್ ಮಾರ್ಷಲ್ ಔರಂಗಜೇಬ್ ಅಹ್ಮದ್ ಮತ್ತು ನೌಕಾಸೇನೆಯ ವೈಸ್ ಅಡ್ಮಿರಲ್ ರಾಜಾ ರಬ್ ನವಾಜ್ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ, ನೌಕಾಸೇನೆಯ ಸಮರ ಸಿದ್ಧತೆಯ ನಕಲಿ ಫೋಟೋವನ್ನು ಪ್ರದರ್ಶಿಸಲಾಗಿದೆ. ಭಾರತದೊಂದಿಗೆ ಉದ್ವಿಗ್ನತೆ ಹೆಚ್ಚಾದ ಕಾರಣ, ಪಾಕಿಸ್ತಾನದ ವಾಯು, ಭೂ ಮತ್ತು ಜಲ ಪಡೆಗಳು ಸನ್ನದ್ಧವಾಗಿವೆ ಈ ಹಿರಿಯ ಅಧಿಕಾರಿಗಳು ನಕಲಿ ಫೋಟೋ ಪ್ರದರ್ಶಿಸಿ ತಮ್ಮ ಬೆನ್ನನ್ನು ತಾವೇ ತಟ್ಟಿಕೊಂಡಿದ್ದಾರೆ.**

ಪಾಕಿಸ್ತಾನದ ಈ ಹಸಿ ಸುಳ್ಳು ಜಗಜ್ಜಾಹೀರಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಟ್ರೋಲ್‌ಗೆ ಗುರಿಯಾಗಿದೆ. ಭಾರತದ ಸೇನಾ ಸಾಮರ್ಥವನ್ನು ಸರಿದೂಗಿಸುವ ಭರದಲ್ಲಿ, ಪಾಕಿಸ್ತಾನ ದಿನಿತ್ಯವೂ ಹಸಿ ಹಸಿ ಸುಳ್ಳುಗಳನ್ನು ಹೇಳುತ್ತಿರುವುದು ಸ್ಪಷ್ಟ.

## ಅಭಿವೃದ್ಧಿಗೆ 3500 ಕೋಟಿ ರೂ. ಹೂಡಿಕೆ

**ಅಮರಾವತಿ:** ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ರಾಜ್ಯದ 1,000 ಕಿಲೋಮೀಟರ್ ಉದ್ದದ ಕರಾವಳಿಯನ್ನು ಬಳಸಿಕೊಳ್ಳುವ ಮೂಲಕ ಬಂದರು ಆಧಾರಿತ ಆರ್ಥಿಕತೆಯನ್ನು ಅಭಿವೃದ್ಧಿಪಡಿಸುವ ಕಾರ್ಯತಂತ್ರದ ಯೋಜನೆಯನ್ನು ಘೋಷಿಸಿದ್ದಾರೆ ಮಾತ್ರವಲ್ಲ, ಪ್ರತಿ 50 ಕಿಲೋಮೀಟರ್ ಅಂತರದಲ್ಲಿ ಬಂದರುಗಳು ಅಥವಾ ಮೀನುಗಾರಿಕೆ ಬಂದರುಗಳನ್ನು ಸ್ಥಾಪಿಸಲು ನಿರ್ಧರಿಸಿದ್ದಾರೆ.



ಈ ಯೋಜನೆಯು ರಾಜ್ಯದಲ್ಲಿ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುತ್ತದೆ ಮತ್ತು ಉದ್ಯೋಗವನ್ನು ಸೃಷ್ಟಿಸುತ್ತದೆ ಮತ್ತು ಮೂಲಸೌಕರ್ಯವನ್ನು ಸೃಷ್ಟಿಸುತ್ತದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು. ಆಂಧ್ರಪ್ರದೇಶದ 1,000 ಕಿಲೋಮೀಟರ್ ಕರಾವಳಿಯನ್ನು ಬಳಸಿಕೊಳ್ಳುವ ಮೂಲಕ ಬಂದರು ಆಧಾರಿತ ಆರ್ಥಿಕತೆಯನ್ನು ನಿರ್ಮಿಸುವ ಕಾರ್ಯತಂತ್ರದ ಯೋಜನೆಯನ್ನು ನಾವು ಅನಾವರಣಗೊಳಿಸಿದ್ದೇವೆ ಎಂದು ನಾಯ್ಡು ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ವಿಭಜನಾ ಯುಗದ ಬದ್ಧತೆಯ ಭಾಗವಾಗಿ, ನೆಲ್ಲೂರು ಜಿಲ್ಲೆಯ ದುಗರಾಜಪಟ್ಟಣದಲ್ಲಿ ಹಡಗು ನಿರ್ಮಾಣ ಮತ್ತು ದುರಸ್ತಿ ಕ್ಲಸ್ಟರ್ ಅನ್ನು ಸ್ಥಾಪಿಸುವ ಪ್ರಮುಖ ಉಪಕ್ರಮದ ಬಗ್ಗೆ ಚರ್ಚಿಸಲಾಯಿತು.ಆರಂಭಿಕ ಕಾರ್ಯಸಾಧ್ಯತಾ ವರದಿಯನ್ನು ಆಧರಿಸಿದ ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದ ಮೂಲಕ 2,000 ಎಕರೆಗಳಲ್ಲಿ ಅಭಿವೃದ್ಧಿಪಡಿಸಲು ಪ್ರಸ್ತಾಪಿಸಲಾಗಿದೆ. 2,000 ಎಕರೆಗಳಲ್ಲಿ, 1,000 ಎಕರೆಗಳನ್ನು ಪ್ರಮುಖ ಹಡಗು ನಿರ್ಮಾಣ ಘಟಕಗಳಿಗೆ ಮತ್ತು ಇನ್ನೊಂದು 1,000 ಎಕರೆಗಳನ್ನು ಪೂರಕ ಕೈಗಾರಿಕೆಗಳಿಗೆ ಹಂಚಿಕೆ ಮಾಡಲಾಗುತ್ತದೆ. ಈ ಯೋಜನೆಯು ನಾಲ್ಕು ಡ್ರೈ ಡಾಕ್‌ಗಳು, ಸಜ್ಜುಗೊಳಿಸುವ ಜೆಟ್ಟಿಗಳು ಮತ್ತು ಹಡಗು–ಲಿಫ್ಟ್ ಸೌಲಭ್ಯವನ್ನು ಹೊಂದಿರುವ ಹಡಗು ನಿರ್ಮಾಣ ಬಂದರನ್ನು ಸ್ಥಾಪಿಸುವುದನ್ನು ಒಳಗೊಂಡಿದೆ.

## ಅಮೆರಿಕ ಎಂಬ ಡ್ಯಾಡಿ ಮೆಚ್ಚಿಸಲು ಹೋಗಿ ಚೀನಾ ಎಂಬ ಮಮ್ಮಿಯ ಮುನಿಸು ಎದುರಿಸುತ್ತಿರುವ ಪಾಕಿಸ್ತಾನ

**ಬೀಜಿಂಗ್:** ಭಾರತ–ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದ ಇಡೀ ಜಗತ್ತಿಗ ಸಮಧಾನ ತಂದಿದೆಯಾದರೂ, ನೆರೆ ರಾಷ್ಟ ಚೀನಾಗೆ ಮಾತ್ರ ಅಸಮಾಧಾನ ತರಿಸಿದೆ. ಪಾಕಿಸ್ತಾನವು ಕದನ ವಿರಾಮ ಒಪ್ಪಂದದ ಸಮಯದಲ್ಲಿ ತನ್ನೊಂದಿಗೆ ಯಾವುದೇ ಮಾತುಕತೆ ನಡೆಸದಿರುವುದು ಚೀನಾದ ಅಸಮಾಧಾನಕ್ಕೆ ಕಾರಣ ಎನ್ನಲಾಗಿದೆ.

ಆದರೆ ಭಾರತವು ಅಮೆರಿಕದ ಮಧ್ಯಸ್ಥಿಕೆ ವಾದವನ್ನು ಸ್ಪಷ್ಟವಾಗಿ ತಳ್ಳಿಹಾಕಿದ್ದು, ಕಾಶ್ಮೀರವನ್ನೂ ಒಳಗೊಂಡಂತೆ ಪ್ರಾದೇಶಿ ಸಮಸ್ಯೆಗಳ ನಿವಾರಣೆಗಾಗಿ ನಮಗೆ ಮೂರನೇ ಶಕ್ತಿಯ ಅವಶ್ಯಕತೆ ಇಲ್ಲ ಎಂದು ಸ್ಪಷ್ಟಪಡಿಸಿದೆ. ಆದರೆ ಪಾಕಿಸ್ತಾನ ಮಾತ್ರ, ಕದನ ವಿರಾಮ ಒಪ್ಪಂದಕ್ಕೆ ನೆರವಾದ ಅಮೆರಿಕಕ್ಕೆ ಧನ್ಯವಾದ ಎಂದು ಹೇಳಿದೆ.

ಚೀನಾದ ಈ ಅಸಮಾಧಾನದಿಂದ ಬೆಚ್ಚಿಬಿದ್ದಿರುವ ಪಾಕಿಸ್ತಾನ, ಡ್ರ್ಯಾಗನ್ ರಾಷ್ಟ್ರದ ಅಸಮಾಧಾನ ತಣಿಸುವ ಮಾರ್ಗಗಳನ್ನು ಹುಡುಕುತ್ತಿದೆ. ಕದನ ವಿರಾಮದ ಕ್ರೆಡಿಟ್‌ನ್ನು ಅಮೆರಿಕ ನೀಡಿ, ಚೀನಾದ ಕೆಂಗಣ್ಣಿಗೆ ಪಾಕಿಸ್ತಾನ



ಗುರಿಯಾಗಿರುವುದು ನಿಜಕ್ಕೂ ಅಪಹಾಸ್ಯವೇ ಸರಿ.

ಪಾಕಿಸ್ತಾನಕ್ಕೆ ಅಪಾರ ಪ್ರಮಾಣದ ಆರ್ಥಿಕ ನೆರವು ನೀಡುವ ಚೀನಾ, ಸಂದಿಗ್ಧ ಪರಿಸ್ಥಿತಿಯಲ್ಲಿ ತನ್ನೊಂದಿಗೆ ಸಮಾಲೋಚನೆ ನಡೆಸದ ಪಾಕಿಸ್ತಾನದ ವಿರುದ್ಧ ಮುನಿಸಿಕೊಂಡಿದೆ. ಆರ್ಥಿಕ ನೆರವಿನ ನೆಪದಲ್ಲಿ ಪಾಕಿಸ್ತಾನದಲ್ಲಿ ಅಪಾರ ಪ್ರಮಾಣ ಹೂಡಿಕೆ ಮಾಡಿರುವ ಚೀನಾ, ಹಂತ ಹಂತವಾಗಿ ಪಾಕಿಸ್ತಾನದ ನೆಲವನ್ನು ನುಂಗುತ್ತಿದೆ. ಆದರೆ ಪಾಕಿಸ್ತಾನ ಮಾತ್ರ

**ಪಾಕಿಸ್ತಾನದ ಈ ನಡೆ ಅದರ ಪರಮಾಪ್ತ ಮಿತ್ರರಾಷ್ಟ್ರ ಚೀನಾಗೆ ಅಸಮಾಧಾನ ತಂದಿದೆ. ಭಾರತದೊಂದಿಗೆ ಕದನ ವಿರಾಮ ಒಪ್ಪಂದದ ಸಮಯದಲ್ಲಿ ನಮ್ಮೊಂದಿಗೆ ಯಾವುದೇ ಸಮಾಲೋಚನೆ ನಡೆಸಿಲ್ಲ ಎಂದು ಚೀನಾ ಪಾಕಿಸ್ತಾನದ ವಿರುದ್ಧ ಗುಟುರು ಹಾಕಿದೆ.**

ಚೀನಾದ ಮುಂದೆ ಭಿಕ್ಷಾಪಾತ್ರೆ ಹಿಡಿದುಕೊಂಡೇ ನಿಂತಿರುತ್ತದೆ. ಭಾರತ–ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದದ ಕ್ರೆಡಿಟ್‌ನ್ನು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪಡೆದುಕೊಳ್ಳುತ್ತಿದ್ದಂತೇ ಎಚ್ಚೆತ್ತಿರುವ ಚೀನಾ, ತನ್ನ ಪ್ರಯತ್ನದಿಂದಲೇ ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಒಪ್ಪಂದವೇರ್ಪಟ್ಟಿದೆ ಎಂದು ವಾದಿಸತೊಡಗಿದೆ.

## ಅಸ್ಸಾಂನಲ್ಲಿ ಮತ್ತಿಬ್ಬರು ದೇಶದ್ರೋಹಿಗಳ ಬಂಧನ

**ಗುವಾಹಟಿ:** ಅಸ್ಸಾಂನಲ್ಲಿ ಪಾಕಿಸ್ತಾನದ ಬಗ್ಗೆ ಸಹಾನುಭೂತಿ ಹೊಂದಿದ್ದರು ಎನ್ನಲಾದ ಮತ್ತಿಬ್ಬರು ದೇಶದ್ರೋಹಿಗಳನ್ನು ಬಂಧಿಸಲಾಗಿದೆ. ಇದರೊಂದಿಗೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಇದುವರೆಗೆ ಒಟ್ಟು ಬಂಧನಗಳ ಸಂಖ್ಯೆ 58 ಕ್ಕೆ ತಲುಪಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ.

**ಅಸ್ಸಾಂನಲ್ಲಿ ಪಾಕಿಸ್ತಾನದ ಬಗ್ಗೆ ಸಹಾನುಭೂತಿ**

ಬಂಧಿತ ಇಬ್ಬರೂ ವ್ಯಕ್ತಿಗಳು ಸೋನಿತ್‌ಪುರ ಜಿಲ್ಲೆಯವರು ಎಂದು ಶರ್ಮಾ ಎಕ್ಸ್‌ನಲ್ಲಿನ ಸಪೋಸ್ಟ್‌ನಲ್ಲಿ ತಿಳಿಸಿದ್ದಾರೆ. 58 ಪಾಕ್ ಬೆಂಬಲಿಗರನ್ನು ಜೈಲಿನಲ್ಲಿ ಇರಿಸಲಾಗಿದೆ. ಅವರ ದೇಶ ವಿರೋಧಿ ಚಟುವಟಿಕೆಗಳಿಗಾಗಿ ಅವರಿಗೆ ವಿಶೇಷ ಕಾಳಜಿಯೂ ನೀಡಲಾಗುವುದು ಎಂದು ಅವರು ಹೇಳಿದರು. ದೇಶದ್ರೋಹಿಗಳ ವಿರುದ್ಧ ರಾಜ್ಯಾದ್ಯಂತ ಕಠಿಣ ಕ್ರಮ ಮುಂದುವರಿಯುತ್ತದೆ ಮತ್ತು ಯಾರನ್ನೂ ಬಿಡಲಾಗುವುದಿಲ್ಲ ಎಂದು ಶರ್ಮಾ ಹೇಳಿದರು. ಬಂಧಿತರಲ್ಲಿ ಕೆಲವರ ಮೇಲೆ ರಾಷ್ಟ್ರೀಯ ಭದ್ರತಾ ಕಾಯ್ದೆಯ ನಿಬಂಧನೆಗಳನ್ನು ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಕಳೆದ ವಾರ ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದರು.

ಇದಕ್ಕೂ ಮೊದಲು, ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನವನ್ನು ಸಮರ್ಥಿಸಿಕೊಂಡಿದ್ದಕ್ಕಾಗಿ ಮತ್ತು ಅದರ ಸಹಭಾಗಿತ್ವಕ್ಕಾಗಿ ವಿರೋಧ ಪಕ್ಷದ ಎಐಯುಡಿಎಫ್ ಶಾಸಕ ಅಮೀನುಲ್ ಇಸ್ಲಾಂ ಅವರನ್ನು ದೇಶದ್ರೋಹದ ಆರೋಪದ ಮೇಲೆ ಬಂಧಿಸಲಾಯಿತು.

ತನ್ನ ಫೇಸ್‌ಬುಕ್ ಖಾತೆಯಲ್ಲಿ ದೇಶದ ವಿರುದ್ಧ ಆಕ್ಷೇಪಾರ್ಹ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಉತ್ತರ ಪ್ರದೇಶದಲ್ಲಿ ಒಬ್ಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಆಕ್ಷೇಪಾರ್ಹ ವಿಷಯವನ್ನು ಹಂಚಿಕೊಳ್ಳುವಲ್ಲಿ ಕುರ್ಬನ್ ತ್ಯಾಗಿ ಎಂಬುವರು ಭಾಗಿಯಾಗಿರುವುದು ದೃಢಪಟ್ಟ ನಂತರ, ಆತನ ವಿರುದ್ಧ ಗಂಭೀರ ಆರೋಪಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಸರ್ಕಲ್ ಇನ್ಸ್‌ಪೆಕ್ಟರ್ ದೇವವ್ರತ್ ಬಾಜ್ ಪೈ ವರದಿಗಾರರಿಗೆ ತಿಳಿಸಿದರು.



ಇತ್ತೀಚಿನ ದಿನಗಳಲ್ಲಿ ಇದೇ ರೀತಿಯ ಅಪರಾಧಗಳಿಗಾಗಿ ಜಿಲ್ಲೆಯಲ್ಲಿ ಬಂಧಿಸಲ್ಪಟ್ಟ ನಾಲ್ಕನೇ ವ್ಯಕ್ತಿ ತ್ಯಾಗಿಯಾಗಿದ್ದಾರೆ. ಈ ಹಿಂದೆ, ಸಾಮಾಜಿಕ ಮಾಧ್ಯಮದಲ್ಲಿ ಆಕ್ಷೇಪಾರ್ಹ ಮತ್ತು ಪಾಕಿಸ್ತಾನ ಪರವಾದ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಕೊಟ್ವಾಲಿ, ಭೋಪಾ ಮತ್ತು ಬುಧಾನಾ ಪೊಲೀಸ್ ಠಾಣೆ ಪ್ರದೇಶಗಳಿಂದ ಮೂವರನ್ನು ಬಂಧಿಸಲಾಗಿತ್ತು.

### ● ಕತಾರ್‌ನ ಉಚಿತ ವಿಮಾನದ ಭದ್ರತಾ ಸಮಸ್ಯೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ಅಮೆರಿಕದ ಗುಪ್ತಚರ ಅಧಿಕಾರಿಗಳು

# ಅಮೆರಿಕದ ಗುಪ್ತಚರ ಇಲಾಖೆ ನಿದ್ದೆಗೆಡೆಸಿದ ಕತಾರ್ ಫ್ರೀ ಏರ್‌ಫೋರ್ಸ್ ಒನ್

**ವಾಷಿಂಗ್ಟನ್ ಡಿಸಿ:** ಕತಾರ್ ದೇಶವು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಐಷಾರಾಮಿ ಬೋಯಿಂಗ್ 747 ವಿಮಾನವನ್ನು ಉಡುಗೊರೆಯಾಗಿ ನೀಡಲು ಮುಂದಾಗಿದೆ. ಆದರೆ, ವಿದೇಶಿ ಸರ್ಕಾರಗಳು ನೀಡುವ ಉಡುಗೊರೆಗಳ ಬಗ್ಗೆ ಅಮೆರಿಕದ ಗುಪ್ತಚರ ಮತ್ತು ರಾಜತಾಂತ್ರಿಕ ವಲಯದಲ್ಲಿ ಅನುಮಾನಗಳು ಮೂಡಿವೆ. ಈ ಉಡುಗೊರೆಯು ಕಾನೂನು ಮತ್ತು ನೈತಿಕ ಪ್ರಶ್ನೆಗಳನ್ನು ಹುಟ್ಟುಹಾಕಿರುವುದು ಒಂದೆಡೆಯಾದರೆ, ಗುಪ್ತಚರ ಇಲಾಖೆಗೆ ತಾಂತ್ರಿಕ ಮತ್ತು ಭದ್ರತಾ ಸಮಸ್ಯೆಗಳನ್ನು ತಂದೊಡ್ಡಿದೆ.


ಕತಾರ್ ನೀಡಲಿರುವ ಏರ್‌ಫೋರ್ಸ್ ಒನ್ ವಿಮಾನ ಮಾದರಿಯಲ್ಲಿ, ಅಧ್ಯಕ್ಷರ ಭದ್ರತಾ ನಿಯಮಗಳ ಪಾಲನೆ ಕಷ್ಟವಾಗಲಿದೆ ಎಂದು ಅಮೆರಿಕದ ಗುಪ್ತಚರ ಇಲಾಖೆ ಆತಂಕ ವ್ಯಕ್ತಪಡಿಸಿದೆ. ಇದು ಅಮೆರಿಕ ಅಧ್ಯಕ್ಷರ ಪ್ರಯಾಣದ ಮೇಲೆ ಕಣ್ಗಾವಲು ಇಡಲು, ಅವರ ಚಲನವಲನಗಳನ್ನು ಟ್ರ್ಯಾಕ್ ಮಾಡಲು ಅಥವಾ ಅವರ ಸಂವಹನಗಳನ್ನು ಕದಡಲು ಕಾರಣವಾಗಬಹುದು ಎಂದು ತಜ್ಞರು ಎಚ್ಚರಿಸಿದ್ದಾರೆ.

ಈ ಕುರಿತು ಮಾತನಾಡಿರುವ ಸಿಐಎ ಮಾಜಿ ಮುಖ್ಯಸ್ಥ ಥಾಡ್ ಟ್ರಾಯ್, ನಾವು ಬೇರೆ ದೇಶಕ್ಕೆ ವಿಮಾನವನ್ನು ತಯಾರಿಸಿಕೊಟ್ಟರೆ, ಅದರಲ್ಲಿ ಕಣ್ಗಾವಲು

- **ಕತಾರ್‌ನ ಏರ್‌ಫೋರ್ಸ್ ಒನ್ ಉಡುಗೊರೆ ಬೇಡ ಅನ್ನಲ್ಲ ಎಂದು ಸ್ಪಷ್ಟಪಡಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್**
- **ಕತಾರ್ ಉಚಿತ ವಿಮಾನ ಆಫರ್ ಬಗ್ಗೆ ಗಂಭೀರ ಎಚ್ಚರಿಕೆ ನೀಡಿದ ಅಮೆರಿಕದ ಗುಪ್ತಚರ ಇಲಾಖೆ**
- **ಕತಾರ್‌ನ ಉಚಿತ ವಿಮಾನದ ಭದ್ರತಾ ಸಮಸ್ಯೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ಅಮೆರಿಕದ ಗುಪ್ತಚರ ಅಧಿಕಾರಿಗಳು**

ಸಾಧನಗಳನ್ನು ಅಳವಡಿಸುತ್ತಿದ್ದೆವು ಶೀತಲ ಸಮರದ ಸಮಯದಲ್ಲಿ ಮಾಸ್ಕೋದಲ್ಲಿನ ಅಮೆರಿಕದ ರಾಯಭಾರಿ ಕಚೇರಿಯನ್ನು ಕೆಡವಿದಾಗ, ಕಾಂಕ್ರೀಟ್‌ನೊಳಗೆ ಕಣ್ಗಾವಲು ಸಾಧನಗಳು ಪತ್ತೆಯಾಗಿದ್ದವು. ಈ ವಿಮಾನ ಉಡುಗೊರೆಯನ್ನು ಸ್ವೀಕರಿಸುವುದು ಕೂಡ ಇಂತದ್ದೇ ಭದ್ರತಾ ಅಪಾಯಗಳಿಗೆ ಕಾರಣವಾಗಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರು ಎರಡನೇ ಅವಧಿಗೆ ಅಮೆರಿಕದ ಅಧ್ಯಕ್ಷರಾದ ಬಳಿಕ, ಬೋಯಿಂಗ್ ಕಂಪನಿಯಿಂದ 3.9 ಬಿಲಿಯನ್ ಡಾಲರ್ ವೆಚ್ಚದಲ್ಲಿ



ಎರಡು ಹೊಸ ಅಧ್ಯಕ್ಷೀಯ ವಿಮಾನಗಳಿಗಾಗಿ ಆರ್ಡರ್ ಮಾಡಿದ್ದರು. ಆದರೆ ಈ ವಿಮಾನಗಳ ವಿತರಣೆಯಲ್ಲಿ ವಿಳಂಬವಾದ ಕಾರಣ ಅವರು ಬೇರೆ ಆಯ್ಕೆಗಳನ್ನು ಹುಡುಕುತ್ತಿದ್ದರು. ಇದಕ್ಕೆ ಪೂರಕವಾಗಿ ಕತಾರ್ ಅಂತದ್ದೊಂದು ವಿಮಾನವನ್ನು ಉಡುಗೊರೆಯಾಗಿ ನೀಡುವುದಾಗಿ ಹೇಳಿದ್ದು, ಡೊನಾಲ್ಡ್ ಟ್ರಂಪ್ ಈ ಆಫರ್‌ನ್ನು ಸ್ವೀಕರಿಸಿದ್ದಾರೆ.

ಮಧ್ಯಪ್ರಾಚ್ಯ ಪ್ರವಾಸದಲ್ಲಿರುವ ಡೊನಾಲ್ಡ್ ಟ್ರಂಪ್ ಅವರಿಗೆ ಉಡುಗೊರೆಯಾಗಿ ನೀಡಲಾಗುತ್ತಿರುವ ಬೋಯಿಂಗ್ 747 ವಿಮಾನವನ್ನು 2012ರಲ್ಲಿ ನಿರ್ಮಿಸಲಾಗಿದೆ. ಕತಾರ್‌ನ ಮಾಜಿ ಪ್ರಧಾನಮಂತ್ರಿ ಮತ್ತು ಸಾರ್ವಭೌಮ ಸಂಪತ್ತು ನಿಧಿಯ ಮುಖ್ಯಸ್ಥರಾಗಿದ್ದ ಹಮದ್ ಬಿನ್ ಜಾಸಿಮ್ ಬಿನ್ ಜಬರ್ ಅಲ್ ಥಾನಿ ಅವರು ಈ ವಿಮಾನವನ್ನು ಬಳಸುತ್ತಿದ್ದರು.

### ಪುನಃ ವಿನ್ಯಾಸ ಮಾಡಬೇಕು

**ಒಂದು ವೇಳೆ ಡೊನಾಲ್ಡ್ ಟ್ರಂಪ್ ಕತಾರ್‌ನ ವಿಮಾನ ಉಡುಗೊರೆಯನ್ನು ಸ್ವೀಕರಿಸದರೂ, ಅದನ್ನು ಏರ್‌ಫೋರ್ಸ್ ಒನ್ ಮಾದರಿಯಲ್ಲಿ ಪುನಃ ವಿನ್ಯಾಸ ಮಾಡಬೇಕಾಗುತ್ತದೆ ಎಂದು ಥಾಡ್ ಟ್ರಾಯ್ ಹೇಳಿದ್ದಾರೆ. ಏರ್‌ಫೋರ್ಸ್ ಒನ್‌ನಲ್ಲಿರುವ ಸೌಲಭ್ಯಗಳನ್ನು ಈ ವಿಮಾನದಲ್ಲಿ ಅಳವಡಿಸಬೇಕಾಗುತ್ತದೆ. ಸಂಭಾವ್ಯ ದಾಳಿಗಳನ್ನು ತಡೆದುಕೊಳ್ಳಲು ಅದರ ಮೇಲ್ಮೈಯನ್ನು ಗಟ್ಟಿಗೊಳಿಸಬೇಕು. ಜೊತೆಗೆ, ಗಾಳಿಯಲ್ಲಿ ಇಂಧನ ತುಂಬುವ ಸಾಮರ್ಥ್ಯ, ರಹಸ್ಯ ಸಂವಹನ ಮತ್ತು ಶಸ್ತ್ರಾಸ್ತ್ರ ವ್ಯವಸ್ಥೆಗಳಂತಹ ತಾಂತ್ರಿಕ ಸೌಲಭ್ಯಗಳನ್ನು ಸೇರಿಸಬೇಕಾಗುತ್ತದೆ ಎಂದು ಟ್ರಾಯ್ ಹೇಳಿದ್ದಾರೆ.**

ವಿಮಾನದ ಒಳಭಾಗವು ಕೆನೆ ಬಣ್ಣದ ಬಿಳಿ ಮತ್ತು ಕಂದು ಬಣ್ಣದ ಅಲಂಕಾರಗಳನ್ನು ಹೊಂದಿದೆ. ಪ್ಯಾರಿಸ್‌ನ ಒಳಾಂಗಣ ವಿನ್ಯಾಸ ಸಂಸ್ಥೆಯಾದ ಕ್ಯಾಬಿನೆಟ್ ಆಲ್ಬರ್ಟೊ

### ಟ್ರಂಪ್ ಭದ್ರತೆಗೆ ಅಪಾಯ

**ಕತಾರ್‌ನಿಂದ ಉಡುಗೊರೆಯಾಗಿ ಬಂದ ವಿಮಾನವನ್ನು ಡೊನಾಲ್ಡ್ ಟ್ರಂಪ್ ಸ್ವೀಕರಿಸುವುದಾಗಿ ಸ್ಪಷ್ಟಪಡಿಸಿದ್ದಾರೆ. ಈ ವಿಮಾನವು 89 ಆಸನಗಳನ್ನು ಹೊಂದಿದ್ದು, ಫ್ರೆಂಚ್ ವಿನ್ಯಾಸಗಾರರು ಇದರ ನಿರ್ಮಾಣದಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ್ದಾರೆ. ಆದರೆ ಈ ಉಡುಗೊರೆಯಿಂದ ಡೊನಾಲ್ಡ್ ಟ್ರಂಪ್ ಅವರ ಭದ್ರತೆಗೆ ಅಪಾಯವಾಗಬಹುದು ಎಂದು ಅಮೆರಿಕದ ಗುಪ್ತಚರ ಇಲಾಖೆ ಎಚ್ಚರಿಸಿದೆ. ಈ ವಿಮಾನದಲ್ಲಿ ಕಣ್ಗಾವಲು ಕ್ಯಾಮೆರಾಗಳನ್ನು ಅಳವಡಿಸಿ ಅಧ್ಯಕ್ಷರ ಮೇಲೆ ಬೇಹುಗಾರಿಕೆ ನಡೆಸುವ ಸಾಧ್ಯತೆ ಇದೆ ಎಂದು ಅಮೆರಿಕ ಗುಪ್ತಚರ ಇಲಾಖೆ ಆತಂಕ ಹೊರಹಾಕಿದೆ.**

ಪಿಂಟೊ ವಿನ್ಯಾಸಗೊಳಿಸಿದ ಕಲಾಕೃತಿಗಳನ್ನು ಈ ವಿಮಾನ ಹೊಂದಿದೆ. ಮೇಲಿನ ಡೆಕ್‌ನಲ್ಲಿ ಮಾಸ್ಟರ್ ಬೆಡ್‌ರೂಮ್ ಮತ್ತು ಬಾತ್‌ರೂಮ್, ಅತಿಥಿ ಮಲಗುವ ಕೋಣೆ ಮತ್ತು ಪ್ರೈವೇಟ್ ಲೌಂಜ್ ಇದೆ. ಕೆಳಗೆ ಲೌಂಜ್, ಕಚೇರಿ ಮತ್ತು ಸಿಬ್ಬಂದಿ ಪ್ರದೇಶಗಳಿವೆ.

## ವೈಷ್ಣೋದೇವಿ ದೇಗುಲದಲ್ಲಿ ಚಾಪರ್ ಸೇವೆ ಪುನರಾರಂಭ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯ ಮಾತಾ ವೈಷ್ಣೋದೇವಿ ದೇಗುಲಕ್ಕೆ ಹೆಲಿಕಾಪ್ಟರ್ ಸೇವೆ ಪುನಾರಂಭಗೊಂಡಿದೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಮಿಲಿಟರಿ ಬಿಕ್ಕಟ್ಟಿನಿಂದಾಗಿ ಒಂದು ವಾರದಿಂದ ಹೆಲಿಕಾಪ್ಟರ್ ಸೇವೆ ಸ್ಥಗಿತಗೊಂಡಿತ್ತು, ಈ ಸೇವೆಗಳು ಪುನರಾರಂಭಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೆರೆಯ ರಾಷ್ಟ್ರಗಳ ನಡುವಿನ ಯುದ್ಧ ಸ್ಥಗಿತಗೊಂಡ ನಂತರ ಜಮ್ಮು ಮತ್ತು ಶ್ರೀನಗರ ಸೇರಿದಂತೆ 32 ವಿಮಾನ ನಿಲ್ದಾಣಗಳಲ್ಲಿ ವಿಮಾನ ಕಾರ್ಯಾಚರಣೆಗಳು ಪುನರಾರಂಭವಾದ ಒಂದು ದಿನದ ನಂತರ ಹೆಲಿಕಾಪ್ಟರ್ ಸೇವೆಗಳನ್ನು ಆರಂಭಿಸಲಾಗಿದೆ.

ಕಳೆದ ಏಳು ದಿನಗಳಿಂದ ಸ್ಥಗಿತಗೊಂಡಿದ್ದ ಮಾತಾ ವೈಷ್ಣೋದೇವಿ ದೇಗುಲದಲ್ಲಿ ಹೆಲಿಕಾಪ್ಟರ್ ಸೇವೆ ಇಂದು ಬೆಳಿಗ್ಗೆ ಪುನರಾರಂಭವಾಯಿತು ಎಂದು ದೇವಾಲಯ ಮಂಡಳಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ತಿಂಗಳ ಆರಂಭದಿಂದ ತೀವ್ರ ಕುಸಿತ ಕಂಡ ನಂತರ ಯಾತ್ರಿಕರ ಸಂಖ್ಯೆಯೂ ಹೆಚ್ಚಾಗಿದೆ.

ಯಾತ್ರಿಕರಿಗೆ ಬ್ಯಾಟರಿ ಕಾರ್ ಸೇವೆಯೂ ಲಭ್ಯವಿದೆ ಎಂದು ಅಧಿಕಾರಿ ಹೇಳಿದ್ದಾರೆ. ಕಳೆದ ವರ್ಷ 94.84 ಲಕ್ಷದಷ್ಟಿದ್ದ ಈ ಸೇವೆ ಈ ವರ್ಷದ ಜನವರಿಯಿಂದ 30 ಲಕ್ಷಕ್ಕೂ ಹೆಚ್ಚು ಯಾತ್ರಿಕರು ದೇವಾಲಯಕ್ಕೆ ಭೇಟಿ ನೀಡಿದ್ದಾರೆ ಎಂದು ಅವರು ಹೇಳಿದರು ಮತ್ತು ಜನದಟ್ಟಣೆ ಹಲವು ಪಟ್ಟು ಹೆಚ್ಚಾಗುತ್ತದೆ ಎಂದು ಆಶಿಸಿದರು. ಹೆಲಿಕಾಪ್ಟರ್ ಸೇವೆ ಪುನರಾರಂಭ ಮತ್ತು ದೇವಾಲಯ ಮಂಡಳಿಯು ಮಾಡಿದ ವ್ಯವಸ್ಥೆಗಳ ಬಗ್ಗೆ ನಮಗೆ ಸಂತೋಷವಾಗಿದೆ ಎಂದು ಯಾತ್ರಿಕ ಶುಭಂ ಹೇಳಿದ್ದಾರೆ.

